# ಮಲ್ಲಮ್ಮ ನುಡಿ

VOLUME - 13 ಸಂಪುಟ-13 | ISSUE - 175 ಸಂಚಿಕೆ- 175 | PAGE-8 ಪುಟ-8 | ಶುಕ್ರವಾರ 22.08.2025 | RS.2/- ಬೆಲೆ 2/-

# ಶೀಘ್ರದಲ್ಲಿ ಹೊಸ ಜಾಹೀರಾತು ನೀತಿ:ಸಿಎಂ

ಮಲ್ಲಮ್ಮನುಡಿವಾರ್ತೆ ಬೆಂಗಳೂರು, ಆ 21:ಬದಲಾದ ಮಾಧ್ಯಮ ಜಗತ್ತಿಗೆ ಅನುಗುಣವಾಗಿ ವಾರ್ತಾ ಮತ್ತು ಸಾರ್ವಜನಿಕ ಇಲಾಖೆವತಿಯಿಂದ ಪ್ರಸ್ತುತ ರಾಜ್ಯದಲ್ಲಿ ಚಾಲ್ತಿಯಲ್ಲಿರುವ ಜಾಹೀರಾತು ನೀತಿ-2013 ಅನುಷ್ಠಾನ ನಿಯಮಗಳು-2014 ಕ್ಕೆ ಪೂರಕ ತಿದ್ದುಪಡಿಗಳೊಂದಿಗೆ ಶೀಘ್ರದಲ್ಲಿ ಹೊಸ ಜಾಹೀರಾತು ನೀತಿ ಜಾರಿಗೆ ತರಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ತಿಳಿಸಿದರು.

ವಿಧಾನಪರಿಷತ್‌ನ ಕಲಾಪದ ವೇಳೆ ಪರಿಷತ್ ಸದಸ್ಯರಾದ ಡಿ.ಎಸ್ ಅರುಣ್ ಅವರು ಕೇಳಿದ ರಾಜ್ಯ ಸರ್ಕಾರ ನೀಡುತ್ತಿರುವ ಜಾಹೀರಾತುಗಳಿಗೆ ಸಂಬಂಧಿಸಿದ ಪ್ರಶ್ನೆಗೆ ಉತ್ತರಿಸಿದ ಮುಖ್ಯಮಂತ್ರಿಗಳು ರಾಜ್ಯ ಸರ್ಕಾರ ಜಾರಿಗೆ ತರುವ ಯೋಜನೆಗಳನ್ನು ಹಾಗೂ ಅಭಿವೃದ್ಧಿ ಕೆಲಸಗಳನ್ನು ಸಾರ್ವಜನಿಕರಿಗೆ ತಿಳಿಸುವುದು ಸರ್ಕಾರದ ಜವಬ್ದಾರಿಯಾಗಿದ್ದು, ಅದರಂತೆ ಕಾಲ-ಕಾಲಕ್ಕೆ ವಿವಿಧ ಮಾಧ್ಯಮಗಳಿಗೆ ಬಿಡುಗಡೆ ಮಾಡಿರುವ ಜಾಹೀರಾತುಗಳ ಕುರಿತಂತೆ ಸದನಕ್ಕೆ ಮಾಹಿತಿ ನೀಡಿದರು.

ವಿರೋಧಪಕ್ಷಗಳು ಆರೋಪಿಸುವಂತೆ ಯಾವುದೇ ಅಭಿವೃದ್ಧಿ ಕಾರ್ಯಗಳು ಕುಂಟಿತಗೊಂಡಿಲ್ಲ ಹಾಗೂ ಗ್ಯಾರಂಟಿ ಯೋಜನೆಗಳಿಂದ ಸರ್ಕಾರಕ್ಕೆ ಹಣದ ಕೊರತೆಯಾಗಿಲ್ಲ. ವಿರೋಧ ಪಕ್ಷಗಳು



ಹೇಳುವಂತೆ ನಾವು ಜಾಹೀರಾತು ನೀಡಿರುವುದು ಜನ ಸಾಮಾನ್ಯರ ಕಲ್ಯಾಣಕ್ಕಾಗಿ ಜಾರಿಗೆ ತಂದಿರುವ ವಿವಿಧ ಯೋಜನೆಗಳು ಮತ್ತು ಕಾರ್ಯಕ್ರಮಗಳು ಅವರಿಗೆ ಉತ್ತರವಾಗಿವೆ ಎಂದರು.ಪರಿಶಿಷ್ಟ ಜಾತಿ ಮತ್ತು ಪಂಗಡದ ಕಲ್ಯಾಣಕ್ಕಾಗಿ ಪ್ರತಿವರ್ಷದ ಆಯವ್ಯಯದಲ್ಲಿ ಅಭಿವೃದ್ಧಿ ಕೆಲಸಗಳಿಗಾಗಿ ವ್ಯಯಿಸುವ ಹಣ ಜಾಸ್ತಿಯಾದಂತೆ ಅವರಿಗೆ ಸಹ ಹೆಚ್ಚಾಗಿರುವುದನ್ನು ಆಯವ್ಯಯದಲ್ಲಿ ಗಮನಿಸಬಹುದಾಗಿದೆ. ಕಳೆದ ಸಾಲಿನ ಆಯವ್ಯಯದಲ್ಲಿ ಅವರಿಗಾಗಿ 39,000 ಸಾವಿರ ಕೋಟಿ ಮೀಸಲಿಡಲಾಗಿತ್ತು, ಪ್ರಸ್ತುತ ಸಾಲಿನದಲ್ಲಿ ರಾಜ್ಯದ ಆಯವ್ಯಯ ಗಾತ್ರದಂತೆ ಶೇ 24.01 ರಂತೆ ಒಟ್ಟು 42,017 ಕೋಟಿ ರೂ ಮೀಸಲಿಡಲಾಗಿದೆ. ವಿರೋಧ ಪಕ್ಷಗಳ ಆರೋಪದಲ್ಲಿ ಯಾವುದೇ ಹುರಳಿಲ್ಲ ಎಂದು ಹೇಳಿದರು.

ಜಾಹೀರಾತು ನೀಡುವುದಕ್ಕೆ ಸಂಬಂಧಿಸಿದಂತೆ 2020-21 ಆರ್ಥಿಕ ವರ್ಷದಲ್ಲಿ 111.15 ಕೋಟಿ ರೂ, 2021-22 ರಲ್ಲಿ 86.08 ಕೋಟಿ ರೂ, 2022-23 ರಲ್ಲಿ 113.20 ಕೋಟಿ ರೂ, 2023-24 ರಲ್ಲಿ 101.38 ಕೋಟಿ ರೂ ಹಾಗೂ ಅದರಲ್ಲಿ 29.46 ಕೋಟಿ ರೂ ಹಿಂದಿನ ವರ್ಷದ ಬಾಕಿ ಪಾವತಿಸಲಾಗಿದೆ, 2024-25 ರಲ್ಲಿ 95.45 ಕೋಟಿ ರೂ ವ್ಯಯಿಸಲಾಗಿದ್ದು, ಇದರಲ್ಲಿ ಹಿಂದಿನ ಸರ್ಕಾರದ ಬಾಕಿಗಳನ್ನು ಸಹ ಪಾವತಿಸಲಾಗಿದೆ.ಪ್ರಸ್ತುತ ಜಾರಿಯಲ್ಲಿರುವ ಜಾಹೀರಾತು ಅನುಷ್ಠಾನ ನಿಯಮಗಳನ್ವಯ ಮಾಧ್ಯಮ ಪಟ್ಟಿಯಲ್ಲಿರುವ ಜಿಲ್ಲಾ ಮತ್ತು ಪ್ರಾದೇಶಿಕ ಪತ್ರಿಕೆಗಳಿಗೆ ಸಂದರ್ಭಾನುಸಾರ ರಾಜ್ಯ ರಾಷ್ಟ್ರೀಯ ಹಬ್ಬ ಮಹನೀಯರ ಜಯಂತಿ ಮತ್ತು ಸರ್ಕಾರದ ಸಾಧನೆ ಹಾಗೂ ಯೋಜನೆ/ಕಾರ್ಯಕ್ರಮಗಳ ಕುರಿತು ಆಕರ್ಷಕ ಮತ್ತು ಪ್ರೋತ್ಸಾಹ ರೂಪದ ಜಾಹೀರಾತುಗಳನ್ನು ಸಮುಚಿತವಾಗಿ ಬಿಡುಗಡೆ ಮಾಡಲಾಗುತ್ತಿದೆ ಎಂದು ತಿಳಿಸಿದರು.

## ಉಪರಾಷ್ಟ್ರಪತಿ ಚುನಾವಣೆ:ಇಂಡಿಯಾ ಒಕ್ಕೂಟದ ಅಭ್ಯರ್ಥಿ ಬಿ ಸುದರ್ಶನ್ ರೆಡ್ಡಿ ನಾಮಪತ್ರ ಸಲ್ಲಿಕೆ



ಮಲ್ಲಮ್ಮ ನುಡಿ ವಾರ್ತೆ ನವದೆಹಲಿ:ಅ.21:ಸುಪ್ರೀಂಕೋರ್ಟ್‌ನ ಮಾಜಿ ನ್ಯಾಯಾಧೀಶರಾದ ನ್ಯಾಯಮೂರ್ತಿ ಬಿ ಸುದರ್ಶನ್ ರೆಡ್ಡಿ ಅವರು ಸೆಪ್ಟೆಂಬರ್ 9ರಂದು ನಡೆಯಲಿರುವ ಉಪ ರಾಷ್ಟ್ರಪತಿ ಚುನಾವಣೆಗೆ ಇಂಡಿಯಾ ಬಣದ ನಾಮನಿರ್ದೇಶಿತ ಅಭ್ಯರ್ಥಿಯಾಗಿ ಇಂದು ಗುರುವಾರ ನಾಮಪತ್ರ ಸಲ್ಲಿಸಿದರು.

ಎನ್‌ಡಿಎ ಮೈತ್ರಿಕೂಟದಿಂದ ಸಿ.ಪಿ.

(2ನೇ ಪುಟ ನೋಡಿ)

## ಹೆಕ್ಟೇರ್‌ಗೆ 50 ಸಾವಿರ ರೂ ಪರಿಹಾರಕ್ಕೆ ಒತ್ತಾಯ

ಮಲ್ಲಮ್ಮನುಡಿವಾರ್ತೆ ಬೀದರ್:ಅ.21: ಜಿಲ್ಲೆಯಲ್ಲಿ ಅತಿವೃಷ್ಟಿಯಿಂದ ವ್ಯಾಪಕ ಬೆಳೆಹಾನಿ, ಸಾರ್ವಜನಿಕ ಆಸ್ತಿಪಾಸ್ತಿ ನಷ್ಟವಾಗಿದೆ.ಒಂದು ವಾರ ಸತತ ಸುರಿದ ಮಳೆ, ಪ್ರವಾಹದಿಂದ 8 ಸಾವಿರ ಹೆಕ್ಟೇರ್‌ಗೂ ಅಧಿಕ ಪ್ರದೇಶದಲ್ಲಿನ ಉದ್ದು, ಹೆಸರು, ಸೋಯಾಬೀನ್, ತೊಗರಿ ಸೇರಿದಂತೆ ವಿವಿಧ ಸಮೃದ್ಧ ಬೆಳೆಗಳು ನೀರುಪಾಲಾಗಿ ರೈತರು ಕಂಗಾಲಾಗಿದ್ದಾರೆ. ಸರ್ಕಾರ ಕೂಡಲೇ ಪ್ರತಿ ಹೆಕ್ಟೇರ್‌ಗೆ 50 ಸಾವಿರ ರೂ. ಪರಿಹಾರ ನೀಡಿ ಸಂಕಷ್ಟಕ್ಕೆ ಸಿಲುಕಿರುವ ನೆರವಿಗೆ ಬರಬೇಕೆಂದು ಶಾಸಕ ಡಾ.ಶೈಲೇಂದ್ರ ಬೆಲ್ದಾಳೆ ಒತ್ತಾಯಿಸಿದರು.



ವಿಧಾನಸಭೆ ಅಧಿವೇಶನದಲ್ಲಿ ಬುಧವಾರ ರಾತ್ರಿ ಜಿಲ್ಲೆಯ ಅತಿವೃಷ್ಟಿ ಹಾನಿ ಕುರಿತು ಮಾತನಾಡಿ ಸರ್ಕಾರದ ಗಮನ ಸೆಳೆದ ಬೆಲ್ದಾಳೆ, ವಾಡಿಕೆಗಿಂತ ಶೇ.50 ರಷ್ಟು ಹೆಚ್ಚು ಮಳೆಯಾಗಿದೆ. ಕಾರಂಜಾ ಜಲಾಶಯ ತುಂಬಿ

(2ನೇ ಪುಟ ನೋಡಿ)

## ಸಚಿವ ಖಂಡ್ರೆ,ಕಾಂಗ್ರೆಸ್ ಅಧ್ಯಕ್ಷ ಜಾಬಶೆಟ್ಟಿ ವಿರುದ್ಧ ಸಿಎಂಗೆ ದೂರು



ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು:ಅ.21:ಬೀದರ ಜಿಲ್ಲೆಯ ಸಮಸ್ಯೆ ಪರಿಹಾರ ಆಗುವವರೆಗೆ ಯಾವುದೆ ನಿಗಮ-ಮಂಡಳಿಗೆ ನಾಮ ನಿರ್ದೇಶನ ಮಾಡಬಾರದು ಹಾಗೂ ಬಿಜೆಪಿ ಮನಸ್ಥಿತಿ ಹೊಂದಿರುವ ಅಧಿಕಾರಿಗಳನ್ನು ವರ್ಗಾವಣೆ ಮಾಡಬೇಕು ಹಾಗೂ ಸಚಿವರ

(2ನೇ ಪುಟ ನೋಡಿ)

## ಜಿಎಸ್ ಟಿಯಲ್ಲಿ ಭಾರೀ ಕಡಿತ: ಶೇ. 28, ಶೇ. 12 ರಷ್ಟು ತೆರಿಗೆ ರದ್ದುಗೊಳಿಸಲು ಸಮ್ಮತಿ



ನವದೆಹಲಿ:ಅ.21:ಮಧ್ಯಮ ಮತ್ತು ಕಡಿಮೆ ಆದಾಯ ಹೊಂದಿರುವ ಜನರಿಗೆ ಮತ್ತಷ್ಟು ರಿಲೀಫ್ ನೀಡುವ ನಿಟ್ಟಿನಲ್ಲಿ ಸರಕು ಮತ್ತು ಸೇವಾ ತೆರಿಗೆ ಸ್ಲ್ಯಾಬ್ ನಲ್ಲಿ ಭಾರೀ ಕಡಿತ ಮಾಡಲು ಜಿಎಸ್ ಟಿ ಕೌನ್ಸಿಲ್ ಸಭೆ ಅನುಮೋದನೆ ನೀಡಿರುವುದಾಗಿ ವರದಿಯಾಗಿದೆ.

ಗುರುವಾರ ನಡೆದ ರಾಜ್ಯ ಸಚಿವರನ್ನೊಳಗೊಂಡ ಸಮಿತಿ ಸಭೆಯಲ್ಲಿ ನಾಲ್ಕು ದರಗಳ ವ್ಯವಸ್ಥೆಯನ್ನು ಎರಡು ಪ್ರಮುಖ ಸ್ಲ್ಯಾಬ್ ಗಳಾದ ಶೇ. 5 ಮತ್ತು ಶೇ. 18 ಕ್ಕೆ ಇಳಿಕೆ ಮಾಡಲು ಅನುಮೋದನೆ ನೀಡಿದೆ. ಜಿಎಸ್ ಟಿ 2.0 ಎಂದು ಕರೆಯಲಾಗುವ ಈ ಕ್ರಮದಿಂದಾಗಿ ಹಲವು ಅಗತ್ಯ ವಸ್ತುಗಳ ಬೆಲೆಯಲ್ಲಿ ಇಳಿಕೆಯಾಗಲಿದೆ.

ಸದ್ಯ ಶೇ.5, ಶೇ. 12, ಶೇ.18 ಮತ್ತು ಶೇ. 28 ರಂತೆ ನಾಲ್ಕು ವಿಭಿನ್ನ ದರಗಳಲ್ಲಿ ಜಿಎಸ್ ಟಿಯನ್ನು ಹಾಕಲಾಗುತ್ತಿದೆ. ನೂತನ ವ್ಯವಸ್ಥೆಯಡಿ ಶೇ. 12 ಮತ್ತು ಶೇ. 28 ರಷ್ಟು ಸ್ಲ್ಯಾಬ್‌ಗಳನ್ನು ರದ್ದುಗೊಳಿಸಲಾಗುತ್ತದೆ. ಇದರಿಂದಾಗಿ ಸರಕು ಮತ್ತು ಸೇವೆಗಳಿಗೆ ಶೇ. 5 ರಷ್ಟು ಮತ್ತು ಶೇ. 18 ರಷ್ಟು ತೆರಿಗೆ ನೀಡಬೇಕಾಗುತ್ತದೆ.

ತಂಬಾಕು ಮತ್ತು ಕೆಲವು ಐಷಾರಾಮಿ ವಸ್ತುಗಳಂತಹ ಮೇಲಿನ ಶೇ. 40 ರಷ್ಟು ತೆರಿಗೆ ಮುಂದುವರೆಯುತ್ತದೆ. ಅಲ್ಲದೇ ಐಷಾರಾಮಿ ಕಾರುಗಳನ್ನು ಶೇ. 40 ರಷ್ಟು ತೆರಿಗೆ ವ್ಯಾಪ್ತಿಗೆ ತರಲು ಸಮಿತಿ ಶಿಫಾರಸು ಮಾಡಿದೆ.

ನೂತನ ಯೋಜನೆ ಪ್ರಕಾರ, ಈ ಹಿಂದೆ ಶೇ. 12 ರಷ್ಟು ತೆರಿಗೆ ವಿಧಿಸಲಾಗುತ್ತಿದ್ದ ಶೇ. 99 ರಷ್ಟು ಸರಕುಗಳು ಈಗ ಶೇ. 5 ರಷ್ಟು ಕಡಿಮೆ ಸ್ಲ್ಯಾಬ್‌ಗೆ ಹೋಗುತ್ತವೆ. ಅಂತೆಯೇ ಶೇ. 28 ರಷ್ಟು ತೆರಿಗೆ ವಿಧಿಸಲಾಗುತ್ತಿದ್ದ ಶೇ. 90 ರಷ್ಟು ಸರಕುಗಳು ಶೇ. 18ರ ಸ್ಲ್ಯಾಬ್ ಗೆ ಬದಲಾಗುತ್ತವೆ.

ಬಿಹಾರ ಉಪ ಮುಖ್ಯಮಂತ್ರಿ ಸಾಮ್ರಾಟ್ ಚೌಧರಿ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ಉತ್ತರ ಪ್ರದೇಶದ ಹಣಕಾಸು ಸಚಿವ ಸುರೇಶ್ ಕುಮಾರ್ ಖನ್ನಾ, ರಾಜಸ್ಥಾನದ

(2ನೇ ಪುಟ ನೋಡಿ)

## ತೆಲಂಗಾಣದಲ್ಲಿ ಸೇಡಂ ಮೂಲದ ಒಂದೇ ಕುಟುಂಬದ ಐವರ ಆತ್ಮಹತ್ಯೆ



ಮಲ್ಲಮ್ಮನುಡಿವಾರ್ತೆ ಕಲಬುರಗಿ:ಅ.21: ಒಂದೇ ಕುಟುಂಬಕ್ಕೆ ಸೇರಿದ ಸೇಡಂ ತಾಲ್ಲೂಕಿನ ರಂಜೋಳಿಯ ನಿವಾಸಿಗಳಾದ ಐವರು ತೆಲಂಗಾಣದ ಹೈದ್ರಾಬಾದ್‌ನ ಮಿಯಾಪುರ್‌ನಲ್ಲಿ ಅನುಮಾನಾಸ್ಪದವಾಗಿ ಮೃತಪಟ್ಟಿದ್ದಾರೆ. ಘಟನೆಯನ್ನು ಸಾಮೂಹಿಕ ಆತ್ಮಹತ್ಯೆ ಎಂದು ಪೊಲೀಸರು ಶಂಕಿಸಿದ್ದು, ತನಿಖೆ ಆರಂಭಿಸಿದ್ದಾರೆ.

ಮೃತರನ್ನು ರಂಜೋಳಿಯ ಲಕ್ಷ್ಮಯ್ಯ (60), ವೆಂಕಟಮ್ಮ (55), ಅನಿಲ್ (32), ಕವಿತಾ (24), ಮತ್ತು ಎರಡು ವರ್ಷದ ಮಗು ಎಂದು ಗುರುತಿಸಲಾಗಿದೆ. ಕುಟುಂಬವು ಕಳೆದ

ಆರು ವರ್ಷಗಳಿಂದ ಹೈದ್ರಾಬಾದ್‌ನಲ್ಲಿ ವಾಸಿಸುತ್ತಿತ್ತು.

ಸ್ಥಳೀಯರಿಂದ ಮಾಹಿತಿ ಪಡೆದ ನಂತರ ಪೊಲೀಸರು ಘಟನಾಸ್ಥಳಕ್ಕೆ ಧಾವಿಸಿ, ಮೃತದೇಹಗಳನ್ನು ವಶಕ್ಕೆ ಪಡೆದು ಶವಪರೀಕ್ಷೆಗೆ ಕಳುಹಿಸಿದ್ದಾರೆ. ಪೊಲೀಸರ ಪ್ರಾಥಮಿಕ ತನಿಖೆಯ ಪ್ರಕಾರ, ಆರ್ಥಿಕ ಸಂಕಷ್ಟವೇ ಈ ಸಾಮೂಹಿಕ ಆತ್ಮಹತ್ಯೆಗೆ ಕಾರಣವಿರಬಹುದು ಎಂದು ಶಂಕಿಸಲಾಗಿದೆ.

## ಜನಸಂದಣಿ ನಿಯಂತ್ರಣ ವಿಧೇಯಕ: ಸದನ ಸಮಿತಿ ರಚನೆ: ಯು.ಟಿ .ಖಾದರ್

ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು:ಅ.21:ಕರ್ನಾಟಕ ಜನಸಂದಣಿ ನಿಯಂತ್ರಣ (ಕಾರ್ಯಕ್ರಮಗಳು ಮತ್ತು ಗುಂಪುಗೂಡುವ ಸ್ಥಳಗಳಲ್ಲಿ ಜನಸಂದಣಿ ನಿರ್ವಹಣೆ ವಿಧೇಯಕ, 2025 ಅನ್ನು ಪರ್ಯಾಲೋಚಿಸಿ ಅಂಗೀಕರಿಸಲು ಸದನ ಸಮಿತಿ ರಚಿಸಲಾಗುವುದು ಎಂದು ವಿಧಾನಸಭಾಧ್ಯಕ್ಷ ಯು.ಟಿ ಖಾದರ್ ಅವರು ವಿಧಾನಸಭೆಯಲ್ಲಿ ತಿಳಿಸಿದರು.

ಕರ್ನಾಟಕ ಜನಸಂದಣಿ ನಿಯಂತ್ರಣ (ಕಾರ್ಯಕ್ರಮಗಳು ಮತ್ತು ಗುಂಪುಗೂಡುವ ಸ್ಥಳಗಳಲ್ಲಿ ಜನಸಂದಣಿ ನಿರ್ವಹಣೆ ವಿಧೇಯಕ, 2025 -ನ್ನು ಪರ್ಯಾಲೋಚಿಸಿ ಅಂಗೀಕರಿಸಬೇಕೆಂದು ಕೋರಿದರು.

ವಿಧೇಯಕವು ಕಾರ್ಯಕ್ರಮಗಳು ಮತ್ತು ಸಮಾರಂಭದಲ್ಲಿ ಜನಸಂದಣಿಯನ್ನು ಪರಿಣಾಮಕಾರಿಯಾಗಿ ನಿಯಂತ್ರಿಸುವುದು ಮತ್ತು ಜನ ಗುಂಪುಗೂಡುವುದನ್ನು ನಿರ್ವಹಿಸುವುದು, ಕಾನೂನು ಬಾಹಿರವಾಗಿ ಗುಂಪುಗೂಡುವುದನ್ನು ಪ್ರತಿಬಂದಿಸುವುದು ಎಂದು ವಿಧೇಯಕದ ಮೂಲ ಉದ್ದೇಶವನ್ನು ಗೃಹಸಚಿವ ಜಿ. ಪರಮೇಶ್ವರ್ ಸದನದಲ್ಲಿ



ಪ್ರಸ್ತಾಪಿಸಿದರು.ಜನಸಂದಣಿ ನಿರ್ವಹಣೆ ಎಂಬುದು ಕಾರ್ಯಕ್ರಮ ಯೋಜನೆ, ಕಾರ್ಯಕ್ರಮದ ಪೂರ್ವದಲ್ಲಿ ಕಾರ್ಯಕ್ರಮ ಆಯೋಜಕರೊಂದಿಗೆ ಸಂಪರ್ಕ ಅನ್ವಯವಾಗುವಲ್ಲಿ ಅನುಮತಿಗಳ ನೀಡುವಿಕೆ, ಮಾಹಿತಿ ಸಂಗ್ರಹಣೆ ಮತ್ತು ಇತರೆ ವಿಧಾನಗಳ ಮೂಲಕ ಕಾನೂನು ಬದ್ಧ ಸ್ಥಿತಿಗತಿಯನ್ನು ನಿರ್ವಹಿಸುವ ಉದ್ದೇಶಕ್ಕಾಗಿ ಕಾರ್ಯಕ್ರಮದ ಮೊದಲು ನಡೆಯುವ ವೇಳೆ ಮತ್ತು ನಂತರದಲ್ಲಿನ ಕಾನೂನುಬದ್ಧ ಗುಂಪುಸೇರುವಿಕೆಯನ್ನು ನಿರ್ವಹಿಸಲು ಈ ವಿಧೇಯಕವನ್ನು ಜಾರಿಗೆ ತರಲು ಉದ್ದೇಶಿಸಿದೆ. ಈ ವಿಧೇಯಕವು ಖಾಸಗಿ ಆವರಣಗಳೊಳಗೆ ಆಚರಿಸುವ ಅಥವಾ ನಡೆಸುವ ಕೌಟುಂಬಿಕ ಸಮಾರಂಭಗಳು ಅಥವಾ ಕಾರ್ಯಕ್ರಮಗಳಾದ ಮದುವೆ ಮುಂತಾದವುಗಳಿಗೆ ಅನ್ವಯವಾಗುವುದಿಲ್ಲ ಎಂದು ವಿಧೇಯಕದ ಇತರೆ ನಿಯಮಗಳನ್ನು

(2ನೇ ಪುಟ ನೋಡಿ)

## ಕಲ್ಯಾಣ ಕರ್ನಾಟಕ-371 (ಜೆ) ಅನುಷ್ಠಾನಕ್ಕಾಗಿ ಉಪಸಮಿತಿ ರಚನೆ:ಸಿಎಂ ಸಿದ್ದರಾಮಯ್ಯ

ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು, ಆ 21 :ರಾಜ್ಯದಲ್ಲಿ ವಿಶೇಷ ಸ್ಥಾನಮಾನ ಹೊಂದಿರುವ ಕಲ್ಯಾಣ ಕರ್ನಾಟಕ-371 (ಜೆ) ಗೆ ಸಂಬಂಧಿಸಿದಂತೆ ನೇಮಕಾತಿ ಮತ್ತು ಮುಂಬಡ್ತಿಗಳಲ್ಲಿನ ಗೊಂದಲಗಳನ್ನು ಪರಿಹರಿಸಲು ಸಚಿವರ ಅಧ್ಯಕ್ಷತೆಯಲ್ಲಿ ಉಪಸಮಿತಿಯನ್ನು ರಚಿಸಲಾಗಿದ್ದು, ಯಾವುದೇ ಸಮಸ್ಯೆಗಳಿದ್ದಲ್ಲಿ ಉಪಸಮಿತಿಯ ಗಮನಕ್ಕೆ ತರಲು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ತಿಳಿಸಿದರು.

ಈ ಕುರಿತಂತೆ ಇಂದು ವಿಧಾನಪರಿಷತ್‌ನ ಕಲಾಪದ ವೇಳೆ



ಪರಿಷತ್ ಸದಸ್ಯರಾದ ಶಶೀಲ್ ಜಿ ನಮೋಶಿ ಅವರು ಪ್ರಶ್ನೆಗೆ ಉತ್ತರಿಸಿದ ಮುಖ್ಯಮಂತ್ರಿಯವರು 317 (ಜೆ) ನಡಿ ನೇಮಕಾತಿಗೆ ಸಂಬಂಧಿಸಿದಂತೆ ಕಾಲ-ಕಾಲಕ್ಕೆ ಹೊರಡಿಸಲಾಗಿರುವ ಸುತ್ತೋಲೆಗಳಿಗೆ ಸಂಬಂಧಿಸಿದಂತೆ ಇರುವ ಗೊಂದಲಗಳನ್ನು ಪರಿಹರಿಸಿ 3 ಜೂನ್ 2025 ರಂದು ಹೊಸ ಸುತ್ತೋಲೆ ಹೊರಡಿಸಲಾಗಿದೆ ಎಂದು ಹೇಳಿದರು.

ಸ್ಥಳೀಯ ವೃಂದ ಹಾಗೂ ಮಿಕ್ಕುಳಿದ ವೃಂದಕ್ಕೆ ಪ್ರತ್ಯೇಕವಾಗಿ ಪರೀಕ್ಷೆಗಳನ್ನು ನಡೆಸುವುದು ಸೇರಿದಂತೆ ನೇಮಕಾತಿಗೆ ಸಂಬಂಧಿಸಿದಂತೆ ಸ್ಪಷ್ಟವಾಗಿ ಇತ್ತೀಚಿನ ಸುತ್ತೋಲೆಯಲ್ಲಿ ಸ್ಪಷ್ಟಪಡಿಸಲಾಗಿದ್ದು, ನೇಮಕಾತಿಗೆ ಸಂಬಂಧಿಸಿದಂತೆ ಯಾವುದೇ ತಪ್ಪುಗಳಾದಲ್ಲಿ ನೇಮಕಾತಿ ಪ್ರಾಧಿಕಾರವೇ ನೇರಹೊಣೆ ಎಂದು ತಿಳಿಸಲಾಗಿದೆ ಎಂದರು.

## ಪ್ರತಿಪಕ್ಷಗಳ ಪ್ರತಿಭಟನೆ ನಡುವೆ ಲೋಕಸಭೆಯಲ್ಲಿ 12, ರಾಜ್ಯಸಭೆಯಲ್ಲಿ 15 ಮಸೂದೆ ಅಂಗೀಕಾರ

ಮಲ್ಲಮ್ಮ ನುಡಿ ವಾರ್ತೆ ನವದೆಹಲಿ:ಅ.21: ಒಂದು ತಿಂಗಳ ಕಾಲ ನಡೆದ ಸಂಸತ್ ಮುಂಗಾರು ಅಧಿವೇಶನಕ್ಕೆ ಗುರುವಾರ ತೆರೆ ಬಿದಿದ್ದು, ಪ್ರತಿಪಕ್ಷಗಳ ಪ್ರತಿಭಟನೆ, ಮುಂದೂಡಿಕೆ ಮತ್ತು ಸಭಾತ್ಯಾಗದ ನಡುವೆಯೇ ಲೋಕಸಭೆಯಲ್ಲಿ ಹನ್ನೆರಡು ಮಸೂದೆಗಳು ಮತ್ತು ರಾಜ್ಯಸಭೆಯಲ್ಲಿ 15 ಮಸೂದೆಗಳನ್ನು ಅಂಗೀಕರಿಸಲಾಗಿದೆ.

ಈ ಬಾರಿಯ ಮುಂಗಾರು ಅಧಿವೇಶನ ಜುಲೈ 21 ರಂದು ಆರಂಭವಾಯಿತು.ಎರಡೂ ಸದನಗಳಲ್ಲಿ ಆಪರೇಷನ್ ಸಿಂಧೂರ್ ಕುರಿತ ಚರ್ಚೆ ಹೊರತುಪಡಿಸಿ, ಇತರ ಯಾವುದೇ ವಿಷಯದ ಬಗ್ಗೆ ಚರ್ಚೆ ನಡೆಯಲೇ ಇಲ್ಲ. ಆಪರೇಷನ್ ಸಿಂಧೂರ್ ಕುರಿತು ಚರ್ಚೆಗೆ ಆರಂಭದಲ್ಲಿ ಒತ್ತಾಯಿಸಿದ್ದ ವಿರೋಧ ಪಕ್ಷಗಳು, ನಂತರ ಬಿಹಾರದಲ್ಲಿ ವಿಶೇಷ ಸಮಗ್ರ ಪರಿಷ್ಕರಣೆ ಕುರಿತು ಚರ್ಚೆಗೆ ಆಗ್ರಹಿಸಿ ಪ್ರತಿಭಟನೆ ಮುಂದುವರೆಸಿದವು.

ಪ್ರತಿಪಕ್ಷಗಳ ನಿರಂತರ ಪ್ರತಿಭಟನೆ ಮತ್ತು ಗದ್ದಲದ ನಡುವೆ ಸಂಸತ್ ಮಾನ್ಸೂನ್ ಅಧಿವೇಶನ ಇಂದು ಮುಕ್ತಾಯಗೊಂಡಿತು.

ಲೋಕಸಭೆ ಅಂಗೀಕರಿಸಿದ ಮಸೂದೆಗಳು

ಲೋಕಸಭೆಯಲ್ಲಿ ಗೋವಾ

(2ನೇ ಪುಟ ನೋಡಿ)

## ಸಾಲ ಮಾಡಿ ತುಪ್ಪ ತಿಂದದ್ದು ಮೋದಿ ಅಲ್ಲ, ಕಾಂಗ್ರೆಸ್: ಡಾ. ಸುಧಾ ಹಾಲಕಾಯಿ




ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ:ಆ.21: ರಾಜ್ಯದ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯಿತಿರಾಜ್, ಐಟಿಬಿಟಿ ಮತ್ತು ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ ಅವರಿಗೆ ಪ್ರಧಾನಿ ನರೇಂದ್ರ ಮೋದಿ ಅವರು ಮಾಡಿದ ಅಭಿವೃದ್ಧಿ ಕೆಲಸಗಳು ಕಣ್ಣಿಗೆ ಕಾಣದೇ ಸಾಲ ಮಾಡಿ ತುಪ್ಪ ತಿನ್ನುವ ಕೆಲಸವನ್ನು ಕೇಂದ್ರ ಸರ್ಕಾರ ಮಾಡುತ್ತಿದೆ ಎಂದು ಆರೋಪಿಸಿದ್ದಾರೆ. ಹಾಗೆ ನೋಡಿದರೆ ಸಾಲ ಮಾಡಿ ತುಪ್ಪ ತಿನ್ನುವ ಕೆಲಸವನ್ನು ಕಾಂಗ್ರೆಸ್ ಮಾಡಿದ್ದರಿಂದಲೇ ಕಲ್ಯಾಣ ಕರ್ನಾಟಕ

(2ನೇ ಪುಟ ನೋಡಿ)

## ಒಂದನೇ ಪುಟದಿಂದ

# ಜಾಬಶೆಟ್ಟಿ ವಿರುದ್ಧ ಸಿಎಂಗೆ ದೂರು

ಮತ್ತು ಪಕ್ಷದ ಜಿಲ್ಲಾಧ್ಯಕ್ಷರ ಬದಲಾವಣೆ ಮಾಡಬೇಕೆಂದು ಒತ್ತಾಯಿಸಿ ಮಾಜಿ ಸಚಿವ ರಾಜಶೇಖರ ಪಾಟೀಲ ನೇತೃತ್ವದ ನಿಯೋಗ ಮುಖ್ಯಮಂತ್ರಿಗಳಿಗೆ ಮನವಿ ಸಲ್ಲಿಸಿದೆ.

ಬೀದರ್ ಜಿಲ್ಲಾ ಉಸ್ತುವಾರಿ ಸಚಿವರಾದ ಈಶ್ವರ್ ಖಂಡ್ರೆ ಅವರ ಪಕ್ಷ ವಿರೋಧಿ ಚಟುವಟಿಕೆಗಳು ಮತ್ತು ಜಿಲ್ಲಾಧ್ಯಕ್ಷ ಬಸವರಾಜ್ ಜಾಬಶೆಟ್ಟಿ ಅವರ ಪಕ್ಷ ವಿರೋಧಿ ಚಟುವಟಿಕೆಗಳ ಹಿನ್ನೆಲೆಯಲ್ಲಿ ಜಿಲ್ಲಾ ಕಾಂಗ್ರೆಸ್ ಪಕ್ಷದಲ್ಲಿ ಯಾವುದೇ ಸರ್ಕಾರದ ನಾಮನಿರ್ದೇಶನ ಮತ್ತು ವರ್ಗಾವಣೆ ಹಾಗೂ ನೇಮಕಾತಿಗಳನ್ನು ಆರೋಪಗಳ ಸಂಪೂರ್ಣವಾಗಿ ತನಿಖೆಯಾಗುವವರೆಗೆ ಸ್ಥಗಿತಗೊಳಿಸಬೇಕೆಂದರು.

ಈಶ್ವರ್ ಖಂಡ್ರೆ ಅವರು 2021 ರಿಂದ 2023 ರವರೆಗೆ ಕೆಪಿಸಿಸಿಯ ಕಾರ್ಯಾಧ್ಯಕ್ಷರಾಗಿದ್ದರು. ಆ ಸಮಯದಲ್ಲಿ, ಜಿಲ್ಲೆಯ ಒಟ್ಟು 6 ಕ್ಷೇತ್ರಗಳ ಪೈಕಿ ಕಾಂಗ್ರೆಸ್ ಪಕ್ಷದ ಶಾಸಕರು 4 ಕ್ಷೇತ್ರಗಳಲ್ಲಿ ಗೆದ್ದಿದ್ದರು. 2023 ರಲ್ಲಿ ನಡೆದ ಚುನಾವಣೆಯಲ್ಲಿ, ಕಾಂಗ್ರೆಸ್ ಕೇವಲ 2 ಕ್ಷೇತ್ರಗಳಲ್ಲಿ ಗೆದ್ದಿತು. ಕಾರಣ, 2023 ರ ಚುನಾವಣೆಯಲ್ಲಿ, ಕೆಪಿಸಿಸಿಯ ಕಾರ್ಯಾಧ್ಯಕ್ಷ ಈಶ್ವರ್ ಖಂಡ್ರೆ ಅವರು ಜಿಲ್ಲೆಯ 5 ಕ್ಷೇತ್ರಗಳಲ್ಲಿ ಯಾವುದರಲ್ಲೂ ಪ್ರಚಾರ ಮಾಡಲಿಲ್ಲ.

ಜಿಲ್ಲಾ ಉಸ್ತುವಾರಿ ಸಚಿವರ ಬೆಂಬಲದಿಂದಾಗಿ ಬಿಜೆಪಿ ಶಾಸಕರು ಕಾಂಗ್ರೆಸ್ ನಾಯಕರ ಮೇಲೆ ರಾಜಕೀಯ ಒತ್ತಡ ಹೇರುತ್ತಿದ್ದಾರೆ ಮತ್ತು ಅವರನ್ನು ಮಾನಸಿಕವಾಗಿ ಕುಗ್ಗಿಸುತ್ತಿದ್ದಾರೆ. ಇದೇ ರೀತಿಯ ಪರಿಸ್ಥಿತಿ ಇದ್ದರೆ, ಬರುವ ಜಿಲ್ಲಾ ಪಂಚಾಯತ್ ಮತ್ತು ತಾಲೂಕು ಪಂಚಾಯತ್ ಚುನಾವಣೆಗಳಲ್ಲಿ ಪಕ್ಷ ಅಸ್ತಿತ್ವವನ್ನೇ ಕಳೆದುಕೊಳ್ಳಬೇಕಾಗುತ್ತದೆ ಎಂದರು.

ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ್ ಖಂಡ್ರೆ ತಮ್ಮ ಸ್ವಾರ್ಥಕ್ಕಾಗಿ ಇಡೀ ಪಕ್ಷವನ್ನೇ ಬಲಿ ಕೊಡುತ್ತಿದ್ದಾರೆ, ಇದು ಹೊಸದಲ್ಲ, ಅವರು 1989–90 ರಿಂದಲೂ ಇದೇ ರೀತಿ ಇವರ ಕುಟುಂಬ ಪಕ್ಷ ವಿರೋಧಿ ಚಟುವಟಿಕೆಗಳನ್ನು ಮಾಡುತ್ತಿದ್ದಾರೆ ಎಂದು ಆರೋಪಿಸಿದರು.

1989 ರ ಸಾರ್ವತ್ರಿಕ ವಿಧಾನಸಭಾ ಚುನಾವಣೆಯಲ್ಲಿ, ಇವರ ಸಹೋದರ ನನ್ನು ಪಕ್ಷೇತರರನ್ನಾಗಿ ಕಣಕ್ಕಿಳಿಸಿ ಕಾಂಗ್ರೆಸ್ ಪಕ್ಷದ ಅಧಿಕೃತ ಅಭ್ಯರ್ಥಿಯನ್ನು ಸೋಲಿಸಿದ್ದಕ್ಕೆ ಅಂದಿನ ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಮಾಣಿಕರಾವ್ ಫುಲೇಕರ್, ಅಭ್ಯರ್ಥಿಗಳಾದ ಸುಭಾಸ್ ಅಷ್ಟೂರ್, ಗಣಪತರಾವ ಖೂಬಾ, ಮಹೇಂದ್ರ ಕುಮಾರ್ ಮತ್ತು ಬಸವರಾಜ್ ಪಾಟೀಲ್ ಅವರು ಸೇರಿ ಖಂಡ್ರೆಯವರ ಪಕ್ಷ ವಿರೋಧಿ ಚಟುವಟಿಕೆಗಳ ವಿರುದ್ಧ ಪಕ್ಷದ ವರಿಷ್ಠರಿಗೆ ದೂರು ದಾಖಲಿಸಿದ್ದರು ಮತ್ತು ಅಂದು ಅವರನ್ನು ಪಕ್ಷದಿಂದ ಅಮಾನತುಗೊಳಿಸಲಾಗಿತ್ತು.

ಅದೇ ರೀತಿ, 2002ರ ವಿಧಾನ ಪರಿಷತ್ ಚುನಾವಣೆಯಲ್ಲಿ, ಪಕ್ಷದ ಅಧಿಕೃತ ಅಭ್ಯರ್ಥಿ ಬಸವರಾಜ್ ಪಾಟೀಲ್ ವಿರುದ್ಧ ಸ್ಪರ್ಧಿಸಿದ ಜನತಾ ಪಕ್ಷದ ಅಭ್ಯರ್ಥಿ ಬಾಬುರಾವ್ ಗುದಗೆ ಅವರನ್ನು ಬೆಂಬಲಿಸುವ ಮೂಲಕ ಪಕ್ಷದ ಅಭ್ಯರ್ಥಿಗೆ ಸೋಲಿಸಲು ಪ್ರಯತ್ನಿಸಿದರು. ಆದರೆ ಪಕ್ಷದ ನಾಯಕರು ಮತ್ತು ಕಾರ್ಯಕರ್ತರ ಬಲವಾದ ದೃಢಸಂಕಲ್ಪದಿಂದಾಗಿ ಪಕ್ಷದ ಅಭ್ಯರ್ಥಿ ಬಸವರಾಜ್ ಪಾಟೀಲ್ ಗೆದ್ದರು. ಇದನ್ನು ಸ್ವತಃ ಕಣ್ಣಾರೆ ಕಂಡ ಅಂದಿನ ಕೆಪಿಸಿಸಿ ಅಧ್ಯಕ್ಷರಾಗಿದ್ದ ಜನಾರ್ದನ ಪೂಜಾರಿ ಅವರು ಮಾಜಿ ಸಚಿವ ಭೀಮಣ್ಣ ಖಂಡ್ರೆ, ಶಾಸಕ ಡಾ. ವಿಜಯ್ ಕುಮಾರ್ ಖಂಡ್ರೆ ಮತ್ತು ಪಕ್ಷದ ನಾಯಕರಾಗಿದ್ದ ಈಶ್ವರ್ ಖಂಡ್ರೆ ಅವರನ್ನು 2002 ರಲ್ಲಿ 6 ವರ್ಷಗಳ ಕಾಲ ಪಕ್ಷದಿಂದ ಉಚ್ಚಾಟಿಸಿದ್ದರು. ಆದರೆ ಅವರು 2003 ರಲ್ಲಿ ಮತ್ತೆ ಪಕ್ಷಕ್ಕೆ ಸೇರಿದರು. ಇದು ಅವರ ನಡವಳಿಕೆ, ಮತ್ತೆ ಇವರು ಈಗಲೂ ಅದನ್ನೆ ಮುಂದುವರಿಸುತ್ತಿದ್ದಾರೆ ಎಂದು ಅವರು ಆರೋಪಿಸಿದರು.

ಖಂಡ್ರೆ ಅವರ ಕುಟುಂಬದ ಮೂಲಕ ಕರ್ನಾಟಕದಲ್ಲಿ ಬಿಜೆಪಿ ಪ್ರವೇಶ ಉತ್ತರ ಕರ್ನಾಟಕದಲ್ಲಿ ಬೀದರ್‌ನಿಂದ ಪ್ರಾರಂಭವಾಯಿತು. 1992 ರಲ್ಲಿ, ಕಾಂಗ್ರೆಸ್ ಬಿಟ್ಟು ರಾಮಚಂದ್ರ ವೀರಪ್ಪ ಅವರು ಬೀದರ್ ಜಿಲ್ಲೆಯಿಂದ ಬಿಜೆಪಿ ಸಂಸದರಾಗಿ ಆಯ್ಕೆಯಾದರು, ಹೀಗಾಗಿ ಬಿಜೆಪಿಗೆ ಬೀದರ್ ಜಿಲ್ಲೆಯಲ್ಲಿ ಹುಟ್ಟು ನೀಡಿದ ಕೀರ್ತಿ ಖಂಡ್ರೆ ಕುಟುಂಬಕ್ಕೆ ಸಲ್ಲುತ್ತದೆ ಎಂದರು.

ಬೇಡಿಕೆಗಳು:ಜಿಲ್ಲಾ ಕಾಂಗ್ರೆಸ್ ಸಮಿತಿ ಪಕ್ಷ ಬಲಪಡಿಸುವಲ್ಲಿ ಸಂಪೂರ್ಣ ವಿಫಲ.ಕಳೆದ ಹಲವಾರು ವರ್ಷಗಳಲ್ಲಿ, ಜಿಲ್ಲಾಧ್ಯಕ್ಷರು ಯಾವುದೇ ಬ್ಲಾಕ್ ಕಾರ್ಯಕಾರಿಣಿ ಅಥವಾ ಬ್ಲಾಕ್ ಸಭೆಗಳನ್ನು ನಡೆಸಿಲ್ಲ.ಜಿಲ್ಲಾಧ್ಯಕ್ಷರು ಮತ್ತು ಜಿಲ್ಲಾ ಉಸ್ತುವಾರಿ ಸಚಿವರು ಮತ್ತು ನಾಯಕರು ಮತ್ತು ಕಾರ್ಯಕರ್ತರ ನಡುವೆ ಯಾವುದೇ ಸಮನ್ವಯವಿಲ್ಲ.ಜಿಲ್ಲೆಯ ಎಲ್ಲಾ ಜಿಲ್ಲಾ ಸರ್ಕಾರಿ ಅಧಿಕಾರಿಗಳು ಬಿಜೆಪಿ ಮನಸ್ಥಿತಿ ಹೊಂದಿದವರು, ಇದರಿಂದಾಗಿ ಪಕ್ಷದ ನಾಯಕರು ಮತ್ತು ಕಾರ್ಯಕರ್ತರು ಬಹಳಷ್ಟು ಸಮಸ್ಯೆಗಳನ್ನು ಎದುರಿಸುತ್ತಿದ್ದಾರೆ ಮತ್ತು ಯಾವುದೇ ಕೆಲಸ ನಡೆಯುತ್ತಿಲ್ಲ

ಕಾಂಗ್ರೆಸ್ ಪಕ್ಷದ ಗೆಲುವಿಗೆ ಮೂಲ ಕಾರಣ ಮತ್ತು ಬೆನ್ನೆಲುಬು ದಲಿತರು, ಅಲ್ಪಸಂಖ್ಯಾತರು, ಹಿಂದುಳಿದ ಜನರು, ಆದರೆ ಇದೇ ಸಮುದಾಯಗಳು ಬಹಳಷ್ಟು ಸಮಸ್ಯೆಗಳನ್ನು ಎದುರಿಸುತ್ತಿವೆ.ಕಳೆದ ಆರು ತಿಂಗಳಲ್ಲಿ ಜುಲೈವರೆಗೆ, ಜಿಲ್ಲೆಯಲ್ಲಿ ಸುಮಾರು ಹತ್ತರಿಂದ ಹನ್ನೊಂದು ಜಾತಿ ನಿಂದನೆ ಪ್ರಕರಣಗಳು ದಾಖಲಾಗಿವೆ, ಅದರಲ್ಲಿ ಸುಮಾರು 10 ಪ್ರಕರಣಗಳು ಜಿಲ್ಲಾ ಉಸ್ತುವಾರಿ ಸಚಿವರ ಕ್ಷೇತ್ರದಲ್ಲಿ ನಡೆದಿವೆ, ಆ ಎಲ್ಲಾ ಪ್ರಕರಣಗಳಲ್ಲಿ, ಪ್ರತಿಯೊಂದು ಪ್ರಕರಣದ ವಿರುದ್ಧ(ಕೌಂಟರ ಕೇಸ) ಪ್ರಕರಣಗಳನ್ನು ದಾಖಲಿಸಲಾಗಿದೆ.

ದಲಿತ ಸಮುದಾಯಗಳು ಪ್ರತಿಭಟಿಸಿದರೆ ಅವರ ವಿರುದ್ಧ ಗೂಂಡಾ ಕಾಯ್ದೆಯನ್ನು ವಿಧಿಸಲು ಮತ್ತು ರೌಡಿ ಶೀಟ್ ಹೊರಡಿಸಲು ಉಸ್ತುವಾರಿ ಸಚಿವರು ಆದೇಶಿಸಿದ್ದಾರೆ ಎಂದು ಪೊಲೀಸ್ ಇಲಾಖೆ ಹೇಳುತ್ತಿದೆ, ಜಿಲ್ಲೆಯಲ್ಲಿ ಸಂವಿಧಾನದ ಉಲ್ಲಂಘನೆ ನಡೆಯುತ್ತಿದೆ, ಸಂವಿಧಾನವನ್ನು ಉಳಿಸಲು ಯಾವ(ಕಾಂಗ್ರೆಸ) ಪಕ್ಷ ಹಗಲಿರುಳು ಹೆಣಗಾಡುತ್ತಿದೆಯೋ ಅದನ್ನು ಅದೇ ಪಕ್ಷದ ಸಚಿವರು ಉಲ್ಲಂಘಿಸುತ್ತಿದ್ದಾರೆ. ಹೀಗೆ ಪಕ್ಷ ವಿರೋಧಿ ಚಟುವಟಿಕೆ ಮಾಡುತ್ತಿದಾರೆ.

ಜಿಲ್ಲೆಯಲ್ಲಿ ಗ್ರೂಪ್ "ಡಿ" ನೌಕರರ ನೇಮಕಾತಿಗೆ ಜಿಲ್ಲಾ ಉಸ್ತುವಾರಿ ಸಚಿವರು ಅಧಿಕಾರಿಗಳಿಗೆ ಆದೇಶವನ್ನು ನೀಡಿದ್ದಾರೆ. ಇದರಲ್ಲಿ ಯಾವುದೇ ರೋಸ್ಟರ್ ಇಲ್ಲ, ಮತ್ತು ರಾಜ್ಯ ಸರ್ಕಾರ ಹೊರಡಿಸಿದ ಸುತ್ತೋಲೆಯನ್ನು ಇಲ್ಲಿ ಪಾಲಿಸುತ್ತಿಲ್ಲ, ಮತ್ತು ಉಸ್ತುವಾರಿ ಸಚಿವರು ಅಧಿಕಾರಿಗಳಿಗೆ ಪತ್ರ ಬರೆದು ಡಿ ಗ್ರೂಪ್ ನೌಕರರಿಗೆ ತೆಗೆದುಕೊಳ್ಳಬೇಕಾದರೆ ನಾನು ಹೇಳಿದವರನ್ನು ಮಾತ್ರ ತೆಗೆದುಕೊಳ್ಳಬೇಕು ಬೇರೆ ಯಾವ ನಾಯಕರು ಹೇಳಿದರು ಮಾಡಬಾರದು ಯಾವ ನಾಯಕರಿಗೆ ಅಧಿಕಾರವಿಲ್ಲ ಎಂದು ಹೇಳಿದ್ದಾರೆ.ಬಿಜೆಪಿ ಶಾಸಕರು, ನಾಯಕರು ಹೇಳಿದ್ದನ್ನು ಕೆಲಸ ಮಾಡಲು ಉಸ್ತುವಾರಿ ಸಚಿವರು ಅಧಿಕಾರಿಗಳಿಗೆ ಸೂಚನೆ

ನೀಡಿದ್ದಾರೆ.

ಬೇಕಾ ಬಿಟ್ಟಿ ಕಾಮಗಾರಿಗಳನ್ನು ಮಾಡುತ್ತಿದ್ದಾರೆ.ಜಿಲ್ಲೆಯಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ (ಎಸ್ ಸಿ ಪಿ–ಟಿಎಸ್ ಪಿ) ನಿಯಮಗಳನ್ನು ಗಾಳಿಗೆ ತೂರಲಾಗುತ್ತಿದೆ.ಜಿಲ್ಲೆಯಲ್ಲಿ ಕಳ್ಳತನ, ದರೋಡೆ, ಸುಲಿಗೆ ಮತ್ತು ಕೊಲೆಗಳು ಹೆಚ್ಚುತ್ತಿವೆ, ಇದು ಕಾಂಗ್ರೆಸ್ ಪಕ್ಷದ ಸರ್ಕಾರಕ್ಕೆ ಕಪ್ಪು ಚುಕ್ಕೆಯಾಗುತ್ತಿದೆ, ಇದನ್ನು ತಡೆಯಲು ಜಿಲ್ಲಾ ಉಸ್ತುವಾರಿ ಸಚಿವರಿಗೆ ಅಧಿಕಾರಿಗಳ ಮೇಲೆ ಯಾವುದೇ ನಿಯಂತ್ರಣವಿಲ್ಲ.ಈಗಾಗಲೇ, ನಿಗಮ–ಮಂಡಳಿಗೆ ಸರ್ಕಾರದಿಂದ ಮಾಡಲಾದ ನಾಮನಿರ್ದೇಶನಗಳನ್ನು ಶೇ. 90 ಪ್ರತಿ ಶತ ಇತರ ಪಕ್ಷಗಳ ಜನರು ಅಥವಾ ಹೊಸಬರನ್ನೆ ಮಾಡಿದ್ದಾರೆ. ಹಳೆಯ ಕಾರ್ಯಕರ್ತರನ್ನು ಕೈ

ಬಿಡಲಾಗಿದೆ,ಇದರಿಂದ ಹಳೆಯ ಮತ್ತು ನಿಷ್ಠಾವಂತ ಕಾರ್ಯಕರ್ತರಲ್ಲಿ ಪಕ್ಷ ವಿರೋಧಿ ಭಾವನೆಯನ್ನು ಸೃಷ್ಟಿಸುತ್ತಿದೆ,ಮುಂಬರುವ ದಿನಗಳಲ್ಲಿ ಇದು ಪಕ್ಷಕ್ಕೆ ಹಾನಿ ಮಾಡುತ್ತಿದೆ.ದಲಿತರು ಸುಮಾರು 50 ವರ್ಷಗಳಿಂದ ಸಾಗುವಳಿ ಮಾಡುತ್ತಿದ್ದ ಕೃಷಿ ಭೂಮಿಯನ್ನು ಅರಣ್ಯ ಇಲಾಖೆ (ಒಕ್ಕಲೆಬ್ಬಿಸುತ್ತಿದೆ) ವಶಪಡಿಸಿಕೊಂಡು ದಲಿತ ಸಮುದಾಯದ ಜನ ಬೀದಿ ಪಾಲಾಗುತ್ತಿದ್ದಾರೆ.

ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಯವರು ಬಿಜೆಪಿ ಶಾಸಕರೊಂದಿಗೆ ಹೊಂದಾಣಿಕೆ ಮಾಡಿಕೊಂಡು ಪಕ್ಷದ ನಾಯಕರಿಗೆ ಮೂಲೆ ಗುಂಪು ಮಾಡುತ್ತಿದ್ದಾರೆ ಎಂದು ಮನವಿಯಲ್ಲಿ ತಿಳಿಸಿದ್ದಾರೆ.

ಕಾಂಗ್ರೆಸ್ ಅಧ್ಯಕ್ಷರಾದ ಬಸವರಾಜ ಜಾಬಶೆಟ್ಟಿ ಅವರು ಸುಮಾರು 9 ವರ್ಷಗಳ ಕಾಲ ವಿಶ್ವ ಹಿಂದೂ ಪರಿಷತ್ತಿನ ಮೂಲ ಅಧ್ಯಕ್ಷರಾಗಿದ್ದರು. ಸುಮಾರು 8 ವರ್ಷಗಳ ಕಾಲ ಕಾಂಗ್ರೆಸ ಪಕ್ಷದ ಅಧ್ಯಕ್ಷರಾಗಿದ್ದರು ಕೂಡ ಅವರು ಇನ್ನೂ ಕಾಂಗ್ರೆಸ್ ಪಕ್ಷದ ಬಗ್ಗೆ ಆ ವಿಶ್ವ ಹಿಂದು ಪರಿಷತ್ ಮನಸ್ಥಿತಿಯನ್ನು ಕಳೆದುಕೊಂಡಿಲ್ಲ.ಆದುದರಿಂದ ಜಿಲ್ಲೆಯಲ್ಲಿ ಪಕ್ಷ ಉಳಿಬೇಕು/ಸದೃಡವಾಗಿ ಇರಬೇಕಾದರೆ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಬಿ.ಖಂಡ್ರೆಯವರನ್ನ ಬದಲಾವಣೆ ಮಾಡಬೇಕು ಹಾಗೂ ಜಿಲ್ಲಾ ಕಾಂಗ್ರೆಸ ಪಕ್ಷದ ಅಧ್ಯಕ್ಷರಾದ ಬಸವರಾಜ ಜಾಬಶೆಟ್ಟಿ ಯವರನ್ನು ಬದಲಾವಣೆ ಮಾಡಬೇಕು ಹಾಗೂ ಈಗಾಗಲೆ ನೇಮಕ (ನಾಮ ನಿರ್ದೇಶನ) ಮಾಡಿದವರನ್ನು ಮರು ಪರಿಶೀಲಿಸಿ ಎಲ್ಲ ಮುಖಂಡರು ಸೂಚಿಸಿದ ಪಕ್ಷದ ನಿಷ್ಠಾವಂತರನ್ನು ನೇಮಕ ಮಾಡಬೇಕು ಹಾಗೂ ಪಕ್ಷದ ಉಳಿವಿಗಾಗಿ ನಮ್ಮ ಮನವಿಯನ್ನು ಗಂಭೀರವಾಗಿ ಪರಿಗಣಿಸಬೇಕೆಂದು ಮುಖ್ಯಮಂತ್ರಿಗಳಲ್ಲಿ ಮನವಿ ಮಾಡಿದರು.

ನಿಯೋಗದಲ್ಲಿ ಅರವಿಂದ ಕುಮಾರ ಅರಳಿ. ಮಾಜಿ ಶಾಸಕರು(ವಿ.ಪ),ಡಾ.ಚಂದ್ರಶೇಖರ ಬಿ.ಪಾಟೀಲ. ಶಾಸಕರು(ವಿ.ಪ),ಭೀಮರಾವ ಬಿ. ಪಾಟೀಲ, ಶಾಸಕರು(ವಿ.ಪ),ಕೆ. ಪುಂಡಲಿಕರಾವ ಮಾಜಿ ಶಾಸಕರು(ವಿ.ಪ),ಧನರಾಜ ತಾಳಂಪಳ್ಳಿ. ಅಧ್ಯಕ್ಷರು ಕೆಪಿಸಿಸಿ, ಸಹಕಾರ ವಿಭಾಗ,ದತ್ತಾತ್ರೇಯ ಮೂಲಗೆ,ಪ್ರಧಾನ ಕಾರ್ಯದರ್ಶಿಗಳು,ವಿದ್ಯಾಸಾಗರ ಶಿಂಧೆ ಮಾಜಿ ಜಿ.ಪಂ. ಸದಸ್ಯರು

ಪಂಡಿತರಾವ ಚಿದ್ರಿ, ಮಾಜಿ ಅಧ್ಯಕ್ಷರು ಕು.ಮತ್ತು.ಉ.ಶಬೆಂಗಳೂರು.,ಗುಂಡು ರೆಡ್ಡಿ ಕಮಾಲಪುರ. ಮಾಜಿ ಜಿ.ಪಂ ಸದಸ್ಯರು,ಪ್ರದೀಪ ವಿ.ಕುಶನೂರ.ಮಾಜಿ ಜಿ.ಪಂ.ಸದಸ್ಯರು.

ಬಸೀರೋದ್ದಿನ ಹಾಲಹಿಪ್ಪರ್ಗಾ, ಹಿರಿಯ ಕಾಂಗ್ರೆಸ ಮುಖಂಡರು,ಶಿವರಾಜ ದೇಶಮುಖ, ಮಾಜಿ ಅಧ್ಯಕ್ಷರು ಬಿಸಿಸಿ.ಔರಾದ,ಅಪ್ಪರಮಿಯಾ.

ಅಧ್ಯಕ್ಷರು ಬಿಸಿಸಿ.ನಗರ ಹುಮನಾಬಾದ, ಓಂಕಾರ ತುಂಬಾ.ಅಧ್ಯಕ್ಷರು ಬಿಸಿಸಿ. ಹುಮನಾಬಾದ,ಶಿವಮೂರ್ತಿ ಸುಬಾನೆ.ಕಾಂಗ್ರೆಸ್ ಪಕ್ಷದ ಹಿರಿಯ ಮುಖಂಡರು,ಸಂಗಮೇಶ ಪಾಟೀಲ ಮಳಚಾಪೂರ.ಪಕ್ಷದ ಮುಖಂಡರು,ಶಂಕರ ರೆಡ್ಡಿ ಚಿಟ್ಟಾ.ಡಿಸಿಸಿ.ಅಧ್ಯಕ್ಷರು ಹಿಂದುಳಿದ ವರ್ಗ.ಬೀದರ,ಅಜ್ಜತ ಪಟೇಲ. ಕೆಪಿಸಿಸಿ.ಸಂಚಾಲಕರು,ಶೇಕ ಹಾಜಿ ಮನಿಯಾರ. ಮಾಜಿ ಅಧ್ಯಕ್ಷರು ಡಿವಾಯಿಸಿಸಿ,

ಬಸವರಾಜ ದೇಶಮುಖ ಚಿಟ್ಟಗುಪ್ಪಾ ಹಿರಿಯ ಕಾಂಗ್ರೆಸ ಮುಖಂಡರು.ನಾಸೀರಖಾನ

ಅಧ್ಯಕ್ಷರು ಡಿಸಿಸಿ ಅಲ್ಪಸಂಖ್ಯಾತ ವಿಭಾಗಬೆಂಗಳೂರು,ಅಬ್ದುಲ ಮನ್ನಾನ ಸೇಠ. ಪ್ರಧಾನ ಕಾರ್ಯದರ್ಶಿ ಕೆಪಿಸಿಸಿ,ವೈಜಿನಾಥ ಯಾನಾಗುಂದೆ.ಮಾಜಿ ಕಾರ್ಯದರ್ಶಿಗಳು ಕೆಪಿಸಿಸಿ

ಲಕ್ಷಣರಾವ ಬುಳ್ಳಾ,ಮಾಜಿ.ಉಪಾಧ್ಯಕ್ಷರು ಜಿ.ಪಂ.ಬೀದರ ಹಾಗೂ ಇತರರು ನಿಯೋಗದಲ್ಲಿದ್ದರು.

# ಅಭ್ಯರ್ಥಿ ಬಿ ಸುದರ್ಶನ್ ರೆಡ್ಡಿ ನಾಮಪತ್ರ ಸಲ್ಲಿಕೆ

ರಾಧಾಕೃಷ್ಣನ್ ವಿರುದ್ಧ ಇಂಡಿಯಾ ಬಣದಿಂದ ಉಪ ರಾಷ್ಟ್ರಪತಿ ಚುನಾವಣೆಗೆ ಔಪಚಾರಿಕ ಪ್ರವೇಶ ಇದಾಗಿದೆ. ವಿರೋಧ ಪಕ್ಷದ ಮೈತ್ರಿಕೂಟದ ಸಭೆಯ ನಂತರ ಕಾಂಗ್ರೆಸ್ ಅಧ್ಯಕ್ಷ ಮತ್ತು ರಾಜ್ಯಸಭೆಯ ವಿರೋಧ ಪಕ್ಷದ ನಾಯಕ ಮಲ್ಲಿಕಾರ್ಜುನ ಖರ್ಗೆ ಅವರು ನ್ಯಾಯಮೂರ್ತಿ ರೆಡ್ಡಿ ಅವರ ಉಮೇದುವಾರಿಕೆಯನ್ನು ಘೋಷಿಸಿದ್ದರು.

ನ್ಯಾಯಮೂರ್ತಿ ಸುದರ್ಶನ್ ರೆಡ್ಡಿ ಅವರನ್ನು ಭಾರತೀಯ ನ್ಯಾಯಶಾಸ್ತ್ರದಲ್ಲಿ "ಅತ್ಯುನ್ನತ ವ್ಯಕ್ತಿ" ಎಂದು ಪರಿಗಣಿಸಲಾಗಿದೆ, ಅವರ ವೃತ್ತಿಜೀವನದಲ್ಲಿ ಹೆಗ್ಗುರುತು ತೀರ್ಪುಗಳು, ಸಾಮಾಜಿಕ, ಆರ್ಥಿಕ ಮತ್ತು ರಾಜಕೀಯ ನ್ಯಾಯಕ್ಕಾಗಿ ಅವರು ತೋರಿಸಿದ್ದ ದೃಢ ಸಮರ್ಪಣೆಗಾಗಿ ಅವರನ್ನು ಗೌರವಿಸಲಾಗಿದೆ.

# 12, ರಾಜ್ಯಸಭೆಯಲ್ಲಿ 15 ಮಸೂದೆ ಅಂಗೀಕಾರ

ವಿಧಾನಸಭಾ ಕ್ಷೇತ್ರಗಳಲ್ಲಿ ಪರಿಶಿಷ್ಟ ಪಂಗಡಗಳ ಪ್ರಾತಿನಿಧ್ಯದ ಮರುಹೊಂದಾಣಿಕೆ ಮಸೂದೆ, 2025, ಮರ್ಚೆಂಟ್ ಶಿಪ್ಪಿಂಗ್ ಮಸೂದೆ, 2025, ಮಣಿಪುರ ಸರಕು ಮತ್ತು ಸೇವಾ ತೆರಿಗೆ (ತಿದ್ದುಪಡಿ) ಮಸೂದೆ 2025, ಮಣಿಪುರ ವಿನಿಯೋಗ (ಸಂ.2) ಮಸೂದೆ 2025, ರಾಷ್ಟ್ರೀಯ ಕ್ರೀಡಾ ಆಡಳಿತ ಮಸೂದೆ 2025 ಮತ್ತು ರಾಷ್ಟ್ರೀಯ ಡೋಪಿಂಗ್ ವಿರೋಧಿ(ತಿದ್ದುಪಡಿ) ಮಸೂದೆ 2025, ಆದಾಯ ತೆರಿಗೆ ಮಸೂದೆ 2025, ತೆರಿಗೆ ಕಾನೂನುಗಳು(ತಿದ್ದುಪಡಿ) ಮಸೂದೆ, 2025, ಭಾರತೀಯ ಬಂದರು ಮಸೂದೆ 2025 ಮತ್ತು ಆನ್‌ಲೈನ್ ಗೇಮಿಂಗ್‌ನ ಪ್ರಚಾರ ಮತ್ತು ನಿಯಂತ್ರಣ ಮಸೂದೆ 2025 ಸೇರಿದಂತೆ 12 ಮಸೂದೆಗಳನ್ನು ಅಂಗೀಕರಿಸಲಾಯಿತು.

ರಾಜ್ಯಸಭೆ ಅಂಗೀಕರಿಸಿದ ಮಸೂದೆಗಳು

ಸರಕು ಸಾಗಣೆ ಮಸೂದೆ 2025, ಸಮುದ್ರದ ಮೂಲಕ ಸರಕುಗಳ ಸಾಗಣೆ ಮಸೂದೆ 2025, ಕರಾವಳಿ ಸಾಗಣೆ ಮಸೂದೆ 2025, ಮಣಿಪುರ ಸರಕು ಮತ್ತು ಸೇವಾ ತೆರಿಗೆ(ತಿದ್ದುಪಡಿ) ಮಸೂದೆ 2025, ಮಣಿಪುರ ವಿನಿಯೋಗ (ಸಂ.2) ಮಸೂದೆ 2025, ವ್ಯಾಪಾರಿ ಸಾಗಣೆ ಮಸೂದೆ 2025 ಮತ್ತು ಗೋವಾ ವಿಧಾನಸಭಾ ಕ್ಷೇತ್ರಗಳಲ್ಲಿ ಪರಿಶಿಷ್ಟ ಪಂಗಡಗಳ ಪ್ರಾತಿನಿಧ್ಯದ ಮರು ಹೊಂದಾಣಿಕೆ ಮಸೂದೆ 2025, ರಾಷ್ಟ್ರೀಯ ಕ್ರೀಡಾ ಆಡಳಿತ ಮಸೂದೆ 2025, ರಾಷ್ಟ್ರೀಯ ಡೋಪಿಂಗ್ ವಿರೋಧಿ(ತಿದ್ದುಪಡಿ) ಮಸೂದೆ 2025, ಆದಾಯ ತೆರಿಗೆ ಮಸೂದೆ 2025, ತೆರಿಗೆ ಕಾನೂನುಗಳು(ತಿದ್ದುಪಡಿ) ಮಸೂದೆ 2025, ಭಾರತೀಯ ಬಂದರು ಮಸೂದೆ 2025, ಗಣಿ ಮತ್ತು ಖನಿಜಗಳು(ಅಭಿವೃದ್ಧಿ ಮತ್ತು ನಿಯಂತ್ರಣ) ತಿದ್ದುಪಡಿ ಮಸೂದೆ 2025, ಭಾರತೀಯ ನಿರ್ವಹಣಾ ಸಂಸ್ಥೆಗಳ(ತಿದ್ದುಪಡಿ) ಮಸೂದೆ 2025 ಮತ್ತು ಆನ್‌ಲೈನ್ ಗೇಮಿಂಗ್‌ನ ಪ್ರಚಾರ ಮತ್ತು ನಿಯಂತ್ರಣ ಮಸೂದೆ, 2025.

# ಶೇ. 12 ರಷ್ಟು ತೆರಿಗೆ ರದ್ದುಗೊಳಿಸಲು ಸಮ್ಮತಿ

ಆರೋಗ್ಯ ಸಚಿವ ಗಜೇಂದ್ರ ಸಿಂಗ್, ಪಶ್ಚಿಮ ಬಂಗಾಳದ ಹಣಕಾಸು ಸಚಿವ ಚಂದ್ರಿಮಾ ಭಟ್ಟಾಚಾರ್ಯ, ಕರ್ನಾಟಕದ ಕಂದಾಯ ಸಚಿವ ಕೃಷ್ಣ ಬೈರೇ ಗೌಡ, ಕೇರಳದ ಹಣಕಾಸು ಸಚಿವ ಕೆ ಎನ್ ಬಾಲಗೋಪಾಲ್ ಮತ್ತಿತರ ಸದಸ್ಯರು ಉಪಸ್ಥಿತರಿದ್ದರು .

ಹೊಸ ಜಿಎಸ್ ಟಿ ವ್ಯವಸ್ಥೆ: ಆರೋಗ್ಯ ಮತ್ತು ಜೀವ ವಿಮೆ ಮೇಲೆ ಶೂನ್ಯ ತೆರಿಗೆ ಸಾಧ್ಯತೆ

ಹಣಕಾಸು ಸಚಿವಾಲಯದ ವಿವರವಾದ ಪ್ರಸ್ತಾವನೆಗಳನ್ನು ಪರಿಶೀಲಿಸಿದ ನಂತರ ಸಚಿವರು ನೂತನ ತೆರಿಗೆ ವ್ಯವಸ್ಥೆ ಜಾರಿಗೆ ಅನುಮೋದನೆ ನೀಡಿದ್ದಾರೆ. ಆರೋಗ್ಯ ಮತ್ತು ಜೀವ ವಿಮೆಯನ್ನು ವಿನಾಯಿತಿ ನೀಡುವ ಕೇಂದ್ರದ ಯೋಜನೆಯನ್ನು ಸಹ ಚರ್ಚಿಸಿದೆ ಎನ್ನಲಾಗಿದೆ. ಒಂದು ವೇಳೆ ಇದಕ್ಕೂ ಅನುಮೋದನೆಯಾಗಿದ್ದರೆ ಪಾಲಿಸಿದಾರರು ಇನ್ನು ಮುಂದೆ ತಮ್ಮ ಪ್ರೀಮಿಯಂಗಳ ಮೇಲೆ ಜಿಎಸ್ ಟಿ ಪಾವತಿಸುವ ಅಗತ್ಯ ಇರುವುದಿಲ್ಲ.

ಪಶ್ಚಿಮ ಬಂಗಾಳ ಆರೋಗ್ಯ ಸಚಿವೆ ಚಂದ್ರಿಮಾ ಭಟ್ಟಾಚಾರ್ಯ ಮಾತನಾಡಿ, ರಾಜ್ಯಗಳು ಆದಾಯವನ್ನು ಕಳೆದುಕೊಳ್ಳುವುದರಿಂದ ನಮಗೆ ಹೇಗೆ ಪರಿಹಾರ ನೀಡಲಾಗುವುದು ಎಂದು ನಾವು ತಿಳಿದುಕೊಳ್ಳಲು ಬಯಸುತ್ತೇವೆ ಎಂದು ನಾನು ಸಭೆಯಲ್ಲಿ ಎತ್ತಿದ್ದೇನೆ. ಎಷ್ಟು ಪ್ರಮಾಣದ ಆದಾಯ ನಷ್ಟವಾಗಬಹುದು ಎನ್ನುವುದು ನಮಗೆ ತಿಳಿದಿಲ್ಲ. ಈ ವಿವರ ಜಿಎಸ್‌ಟಿ ಕೌನ್ಸಿಲ್‌ನಲ್ಲಿ ತಿಳಿಯಬಹುದು ಎಂದು ಅವರು ತಿಳಿಸಿದರು.

ಉತ್ತರ ಪ್ರದೇಶದ ಹಣಕಾಸು ಸಚಿವ ಸುರೇಶ್ ಖನ್ನಾ ಪ್ರತಿಕ್ರಿಯಿಸಿ, ಕೇಂದ್ರದಲ್ಲಿ ನೀಡಲಾದ ಪ್ರಸ್ತಾಪದಲ್ಲಿ ಎಷ್ಟು ನಷ್ಟ ಉಂಟಾಗುತ್ತಿದೆ ಎಂಬುದನ್ನು ಉಲ್ಲೇಖಿಸಲಾಗಿಲ್ಲ. ಆದರೆ ಸಾಮಾನ್ಯ ಜನರು ಇದರಿಂದ ಪ್ರಯೋಜನ ಪಡೆಯಬೇಕು ಎಂಬುದು ನಮ್ಮ ಉದ್ದೇಶ ಎಂದರು.

# ಪರಿಹಾರಕ್ಕೆ ಒತ್ತಾಯ

ನೀರು ಬಿಟ್ಟಿದ್ದರಿಂದ, ಮಾಂಜ್ರಾ ನದಿಗೆ ಪ್ರವಾಹ ಬಂದಿದ್ದರಿಂದ ಸಾಕಷ್ಟು ಸಮಸ್ಯೆಯಾಗಿದೆ. ಬೆಳೆ ಹಾನಿ ಜೊತೆಗೆ ಅನೇಕ ಕಡೆ ರಸ್ತೆಗಳು, ಸೇತುವೆಗಳಿಗೆ ಹಾನಿಯಾಗಿದೆ. ವಿದ್ಯುತ್ ಕಂಬ, ಟ್ರಾನ್ಸ್ಫಾರ್ಮರ್ ನಾಶವಾಗಿವೆ. ಅನೇಕ ಮನೆಗಳು ಬಿದ್ದಿವೆ. ಹೀಗಾಗಿ ಅತಿವೃಷ್ಟಿಪೀಡಿತ ಜಿಲ್ಲೆಗೆ ತಕ್ಷಣ ತುರ್ತು ಪರಿಹಾರ ನೀಡಿ ನೆರವಿಗೆ ಬರುವಂತೆ ಸರ್ಕಾರದ ಗಮನ ಸೆಳೆದರು.

ಬೀದರ್ ದಕ್ಷಿಣ ಕ್ಷೇತ್ರದಲ್ಲಿ ಮಳೆಯಿಂದ ವ್ಯಾಪಕ ನಷ್ಟವಾಗಿದೆ. ಸಮೃದ್ಧ ಬೆಳೆಗಳು ನಾಶವಾಗಿ ರೈತರು ಕಣ್ಣೀರು ಸುರಿಸುತ್ತಿದ್ದಾರೆ. ಕ್ಷೇತ್ರದಲ್ಲಿ ಸದ್ಯದ ಮಾಹಿತಿ ಪ್ರಕಾರ 1 ಸಾವಿರ ಹೆಕ್ಟೇರ್ ಬೆಳೆ ಸಂಪೂರ್ಣ ಹಾಳಾಗಿದೆ. 25 ಕಿಮೀ ರಸ್ತೆ ಕಿತ್ತುಹೋಗಿದೆ. 3 ಸೇತುವೆ ಹಾಳಾಗಿವೆ. 82ಕ್ಕೂ ಮನೆಗಳು ಕುಸಿದಿವೆ. 50 ಅಂಗನವಾಡಿ ಕೇಂದ್ರಕ್ಕೆ ಹಾನಿಯಾಗಿದೆ. 200ಕ್ಕೂ ಹೆಚ್ಚು ವಿದ್ಯುತ್ ಕಂಬ ಮುರಿದಿವೆ. 12 ಟ್ರಾನ್ಸ್ಫಾರ್ಮರ್ ನಷ್ಟವಾಗಿವೆ. ಸರ್ಕಾರ ಸಂತ್ರಸ್ತರ ಸಮಸ್ಯೆ ಅರಿತು ಬೇಗ ಸಹಾಯಸ್ತ ಚಾಚಬೇಕು. ಎಲ್ಲ ಹಾನಿ ಕುರಿತು ಅಧಿಕಾರಿಗಳಿಂದ ಸಮಗ್ರ ಸಮೀಕ್ಷೆ ನಡೆಸಬೇಕು ಎಂದು ಒತ್ತಾಯಿಸಿದರು.

ಬೀದರ್ ನಗರಸಭೆಯನ್ನು ಇದೀಗ ಮಹಾನಗರ ಪಾಲಿಕೆಯಾಗಿ ಮೇಲ್ದರ್ಜೆಗೇರಿಸಲಾಗಿದೆ. ಆದರೆ ಈವರೆಗೆ ಯಾವುದೇ ಪ್ರಗತಿ ಕಾರ್ಯ ಆಗಿಲ್ಲ. ಅನುದಾನ ಸಹ ಬಿಡುಗಡೆ ಮಾಡದ ಕಾರಣ ಜನಸಾಮಾನ್ಯರು ಕಷ್ಟ ಅನುಭವಿಸುತ್ತಿದ್ದಾರೆ. ನನ್ನ ದಕ್ಷಿಣ ಕ್ಷೇತ್ರದ 9 ಗ್ರಾಮಗಳು ಮಹಾನಗರಪಾಲಿಕೆಗೆ ಸೇರಿಸಲಾಗಿದೆ. ಅನುದಾನ ಇಲ್ಲದೆ ಇಲ್ಲಿ ಮೂಲಸೌಕರ್ಯ ಕೆಲಸ ಸ್ಥಗಿತವಾಗಿವೆ. ಕೂಡಲೇ ಪಾಲಿಕೆ ಚಟುವಟಿಕೆ ಆರಂಭಿಸಿ ಸೂಕ್ತ ಅನುದಾನ ಬಿಡುಗಡೆಗೆ ಆಗ್ರಹಿಸಿದರು.

**ಶಾಸಕರ ಅನುದಾನ 5 ಕೋಟಿಗೇರಿಸಿ**

ಶಾಸಕರಿಗೆ ಇದೀಗ ಪ್ರತಿ ವರ್ಷ 2 ಕೋಟಿ ರೂ. ಅನುದಾನ ನೀಡುತ್ತಿರುವುದು ಏತಕ್ಕೂ ಸಾಲದಾಗಿದೆ. ನನ್ನ ಕ್ಷೇತ್ರದಲ್ಲಿ 125ಕ್ಕೂ ಹೆಚ್ಚು ಹಳ್ಳಿ, ತಾಂಡಾಗಳಿವೆ. ಹತ್ತಾರು ಜಾತಿ, ವರ್ಗದವರಿಂದ ಸಮುದಾಯ ಭವನ ಸೇರಿದಂತೆ ನಾನಾ ಬೇಡಿಕೆ ಬಹಳಷ್ಟಿವೆ. ಈಗಿನ ಅನುದಾನದಲ್ಲಿ ಪ್ರತಿಯೊಂದು ಸಮಾಜದವರಿಗೆ ಆದ್ಯತೆ ಮೇಲೆ ಅನುದಾನ ನೀಡುವುದು ಅಸಾಧ್ಯವಾಗಿದೆ. ಇದೇ ಸಮಸ್ಯೆ ಎಲ್ಲ ಕ್ಷೇತ್ರಗಳ ಶಾಸಕರಿಗೂ ಕಾಡುತ್ತಿದೆ. ಹೀಗಾಗಿ ಸರ್ಕಾರ ಮಹಾರಾಷ್ಟ್ರ ಇತರೆ ಬೇರೆ ರಾಜ್ಯಗಳ ಮಾದರಿಯಲ್ಲಿ ನಮಗೂ ಪ್ರತಿ ವರ್ಷ 5 ಕೋಟಿ ರೂ. ಅನುದಾನ ಕೊಡುವಂತೆ ಶಾಸಕ ಬೆಲ್ದಾಳೆ ಸರ್ಕಾರದ ಗಮನ ಸೆಳೆದರು. ಇದೊಂದು ಒಳ್ಳೆಯ ಸಲಹೆಯುಳ್ಳ ಬೇಡಿಕೆ ಎಂದು ಸ್ವತಃ ಸ್ಪೀಕರ್ ಯು.ಟಿ.ಖಾದರ್ ಅವರು ಬೆಲ್ದಾಳೆ ಅವರ ಮಾತಿಗೆ ಮನ್ನಿಸಿರುವುದು ವಿಶೇಷ ಎನಿಸಿತು.

**ಮನೆ ಬಿದ್ದರೆ ಬಿಎಸ್‌ವೈ**

**ಮಾದರಿ ನೆರವು ಕೊಡಿ**

ಬಿ.ಎಸ್.ಯಡಿಯೂರಪ್ಪ ಅವರು ಸಿಎಂ ಇದ್ದಾಗ ಅತಿವೃಷ್ಟಿಯಿಂದ ಸಂಪೂರ್ಣ ಹಾನಿಯಾದ ಪ್ರತಿ ಮನೆಗೆ 5 ಲಕ್ಷ ರೂ., ಅರ್ಧ ಹಾನಿಗೀಡಾದವರಿಗೆ 2.50 ಲಕ್ಷ ರೂ. ಹಾಗೂ ಭಾಗಶಃ ಸ್ವಲ್ಪ ಮನೆ ಕುಸಿದರೆ 50 ಸಾವಿರ ರೂ. ಪರಿಹಾರ ನೀಡಿದ್ದರು. ಆದರೆ ಈಗಿನ ಸರ್ಕಾರ ಸಂಪೂರ್ಣ ಮನೆ ಕುಸಿದ ಸಂತ್ರಸ್ತರಿಗೂ ಕೇವಲ 5 ಸಾವಿರ ರೂ.ಪರಿಹಾರ ನೀಡಿ ಕೈತೊಳೆದುಕೊಳ್ಳುತ್ತಿದೆ. ಮನೆ ಬಿದ್ದ ಸಂತ್ರಸ್ತರಿಗೆ 5 ಸಾವಿರ ರೂ. ಏತಕ್ಕೆ ಸಾಕಾಗುತ್ತದೆ? ನೆಪಮಾತ್ರಕ್ಕೆ ಪರಿಹಾರದಿಂದ ಸಂತ್ರಸ್ತರಿಗೆ ಯಾವುದೇ ನೆರವು ಸಿಗುವುದಿಲ್ಲ. ಈ ಸರ್ಕಾರಕ್ಕೆ ಬಡವರ ಬಗ್ಗೆ ನಿಜವಾದ ಕಾಳಜಿಯಿದ್ದರೆ ಯಡಿಯೂರಪ್ಪ ಅವರ ಮಾದರಿಯಂತೆ ಪರಿಹಾರ ನೀಡಲಿ ಎಂದು ಡಾ.ಬೆಲ್ದಾಳೆ ಸರ್ಕಾರದ ಮೇಲೆ ಒತ್ತಡ ಹೇರಿದರು.

# ಸದನ ಸಮಿತಿ ರಚನೆ: ಯು.ಟಿ .ಖಾದರ್

ಸದನದಲ್ಲಿ ವಿವರಿಸಿದರು.ವಿಧೇಯಕದ ನಿಯಮಗಳನ್ನು ಆಲಿಸಿದ ವಿಧಾನಸಭೆಯ ಸದಸ್ಯರು, ಶಾಸಕರು ತಮ್ಮ ಅಭಿಪ್ರಾಯಗಳನ್ನು ವ್ಯಕ್ತಪಡಿಸಿದರು. ಸುಧೀರ್ಘವಾಗಿ ಸದರಿ ವಿಧೇಯಕದ ಕುರಿತು ಚರ್ಚಿಸಿದರು. ವಿರೋಧ ಪಕ್ಷದ ನಾಯಕರು ಹಾಗೂ ವಿಧಾನಸಭೆಯ ಇತರೆ ಸದಸ್ಯರು ಇದೊಂದು ಗಂಭೀರವಾದ ವಿಧೇಯಕವಾಗಿದ್ದು ಇದನ್ನು ತ್ವರಿತವಾಗಿ ತೀರ್ಮಾನಿಸುವುದು ಸೂಕ್ತವಾಗಿರುವುದಿಲ್ಲ. ಸದನ ಸಮಿತಿಯನ್ನು ರಚಿಸಿ ಸಮಿತಿಯ ಮುಂದೆ ಮಂಡಿಸಿ ಚರ್ಚಿಸಿ ತೀರ್ಮಾನಿಸುವುದು ಉತ್ತಮವೆಂದು ತಮ್ಮ ಅಭಿಪ್ರಾಯಗಳನ್ನು ವ್ಯಕ್ತಪಡಿಸಿದರು.

ಗೃಹಸಚಿವ ಡಾ; ಜಿ.. ಪರಮೇಶ್ ಸದನ ಸಮಿತಿಯ ಮುಂದೆ ಸದರಿ ವಿಧೇಯಕವನ್ನು ಮಂಡಿಸಿ, ಪರ್ಯಾಲೋಚಿಸಿ ಅಂಗೀಕರಿಸಲು ಸದನ ಸಮಿತಿ ರಚನೆಗೆ ತಮ್ಮ ಸಹಮತಿ ನೀಡಿದರು. ವಿಧಾನಸಭೆಯ ಸಭಾಧ್ಯಕ್ಷರು ಸದರಿ ಬಿಲ್‌ಗೆ ಸದನ ಸಮಿತಿಯನ್ನು ರಚಿಸಲು ತೀರ್ಮಾನಿಸಿ ವಿಧೇಯಕವನ್ನು ಸದನ ಸಮಿತಿಯ ಮುಂದೆ ಮಂಡಿಸಿ ಇತ್ಯರ್ಥಪಡಿಸಲಾಗುವುದು ಎಂದು ತಿಳಿಸಿದರು.

# ಜಗಜೀವನರಾಂ ಭವನ ನಿರ್ಮಾಣಕ್ಕೆ ವಿಶೇಷ ಅನುದಾನ ಮಂಜೂರಿಗೆ ಸಚಿವರ ಭರವಸೆ

ಬೀದರ. ಆ. 21 : ಬೀದರನಲ್ಲಿ ಡಾ. ಬಾಬು ಜಗಜೀವನರಾಂ ಭವನ ನಿರ್ಮಾಣಕ್ಕೆ ವಿಶೇಷ ಅನುದಾನ ಮಂಜೂರು ಮಾಡಲಾಗುವುದು ಎಂದು ಸಮಾಜ ಕಲ್ಯಾಣ ಸಚಿವ ಎಚ್.ಸಿ. ಮಹಾದೇವಪ್ಪ ಭರವಸೆ ನೀಡಿದ್ದಾರೆ.

ಬೆಂಗಳೂರಿನಲ್ಲಿ ಗುರುವಾರ ಸಚಿವರನ್ನು ಭೇಟಿ ಮಾಡಿದ ಕಾಂಗ್ರೆಸ್ ಕಿಸಾನ್ ವಿಭಾಗದ ರಾಷ್ಟ್ರೀಯ ಜಂಟಿ ಸಂಯೋಜಕ ಜಾನಸನ್ ಘೋಡೆ ಅವರ ಮನವಿಗೆ ಸ್ಪಂದಿಸಿ ಅವರು ಈ ಆಶ್ವಾಸನೆ ನೀಡಿದರು.



ಚಿಕ್ಕಪೇಟೆಯ ಸರ್ವೆ ಸಂಖ್ಯೆ 61 ರಲ್ಲಿ ಭವನ ನಿರ್ಮಾಣಕ್ಕೆ ಸರ್ಕಾರ ಈಗಾಗಲೇ ಒಂದು ಎಕರೆ ಜಮೀನು ಒದಗಿಸಿದೆ. 12 ವರ್ಷಗಳ ಹಿಂದೆ ರೂ. 50 ಲಕ್ಷ ಅನುದಾನ ಕೂಡ ಮಂಜೂರು ಮಾಡಿದೆ. ಆದರೆ, ಈ ಅನುದಾನದಲ್ಲಿ ಭವನ ನಿರ್ಮಾಣ ಅಸಾಧ್ಯವಾಗಿದೆ ಎಂದು ಜಾನಸನ್ ಘೋಡೆ ಸಚಿವರ ಗಮನ ಸೆಳೆದರು.

ಭವನ ನಿರ್ಮಾಣದಿಂದ ಜಿಲ್ಲಾ ಕೇಂದ್ರದಲ್ಲಿ ವಾಸಿಸುವ ದೀನ, ದಲಿತರು ಹಾಗೂ ಬಡವರಿಗೆ ಸಭೆ, ಸಮಾರಂಭ ಹಾಗೂ ಇತರ ಕಾರ್ಯಕ್ರಮಗಳಿಗೆ ಅನುಕೂಲವಾಗಲಿದೆ. ಹೀಗಾಗಿ ಭವನಕ್ಕೆ ರೂ. 5 ಕೋಟಿ ವಿಶೇಷ ಅನುದಾನ ಕಲ್ಪಿಸಬೇಕು ಎಂದು ಮನವಿ ಮಾಡಿದರು.

ನಮ್ಮ ಮನವಿಗೆ ಸ್ಪಂದಿಸಿ ಸಚಿವರು ವಿಶೇಷ ಅನುದಾನ ಮಂಜೂರು ಮಾಡುವ ಭರವಸೆ ನೀಡಿದ್ದಾರೆ ಎಂದು ಜಾನಸನ್ ಘೋಡೆ ತಿಳಿಸಿದರು.

# ಕಾಂಗ್ರೆಸ್: ಡಾ. ಸುಧಾ ಹಾಲಕಾಯಿ

ಇನ್ನೂ ಹಿಂದುಳಿದ ಪ್ರದೇಶವಾಗಿದೆ. ಈ ಕುರಿತು ಸಚಿವ ಖರ್ಗೆಯವರು ಶ್ವೇತ ಪತ್ರ ಹೊರಡಿಸಬೇಕು ಎಂದು ಬಿಜೆಪಿ ರಾಜ್ಯ ವಕ್ತಾರೆ ಡಾ. ಸುಧಾ ಹಾಲಕಾಯಿ ಅವರು ಸವಾಲು ಹಾಕಿದರು.

ನಗರದ ಪತ್ರಿಕಾ ಭವನದಲ್ಲಿ ಗುರುವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಪ್ರಧಾನಿ ನರೇಂದ್ರ ಮೋದಿ ಅವರಿಗೆ ಸಚಿವ ಪ್ರಿಯಾಂಕ್ ಖರ್ಗೆಯವರು ಕಳೆದ ಹತ್ತು ವರ್ಷಗಳಲ್ಲಿ 130 ಲಕ್ಷ ಕೋಟಿ ರೂ.ಗಳ ಸಾಲ ಯಾಕೆ ಮಾಡಿದ್ದೀರಿ ಎಂದು ಬಾಲಿಶವಾಗಿ ಪ್ರಶ್ನಿಸಿದ್ದಾರೆ. ದೇಶದ ಪ್ರಗತಿಗೆ ಆ ಸಾಲ ಅತ್ಯಂತ ಅಗತ್ಯವಾಗಿತ್ತು. ಆ ಸಾಲದಿಂದ ಮೂಲ ಸೌಕರ್ಯಗಳನ್ನು ಅಭಿವೃದ್ಧಿಪಡಿಸಲಾಗಿದೆ. ಆ ಮೂಲಕ ಜಗತ್ತಿನಲ್ಲಿ ಹತ್ತನೇ ಆರ್ಥಿಕ ಶಕ್ತಿಯಾಗಿದ್ದ ಭಾರತವೀಗ ಕೇವಲ ಹತ್ತು ವರ್ಷಗಳಲ್ಲಿ ನಾಲ್ಕನೇ ಸ್ಥಾನಕ್ಕೆ ಏರಿದೆ ಎಂದು ಸಚಿವ ಖರ್ಗೆಯವರಿಗೆ ತಿರುಗೇಟು ನೀಡಿದರು.

40 ವರ್ಷಗಳ ಸುದೀರ್ಘ ಕಾಲದ ರಾಜಕಾರಣದಲ್ಲಿ ಕಲ್ಯಾಣ ಕರ್ನಾಟಕಕ್ಕೆ ತಮ್ಮ ಸಾಧನೆಯೇನು?, ಮಾತನಾಡುವುದೇ ಸಾಧನೆಯಾಗಬಾರದು. ತಮ್ಮ ಕಾರ್ಯಗಳು ಎದ್ದು ಕಾಣುವ ರೀತಿ ಇರಬೇಕು. ತಾವು ಯಾವ ಸಾಧನೆ ಮಾಡಿದ್ದೀರಿ?, ಯಾವುದೋ ಸೀಮಿತ ಪರಿಮಿತಿಯೊಳಗೆ ಈ ಭಾಗಕ್ಕೆ ಯೋಜನೆಗಳನ್ನು ತಂದು ಅನುಷ್ಠಾನ ಮಾಡಿದ್ದೀರಾ?, ಪ್ರಧಾನಿಯವರು ಈ ಭಾಗಕ್ಕೆ ಜವಳಿ ಪಾರ್ಕ್‌ನ್ನು ಘೋಷಣೆ ಮಾಡಿದರು. ಆದಾಗ್ಯೂ, ಈತನಕ ಆ ಜವಳಿ ಪಾರ್ಕ್‌ನ ಜಾಗಕ್ಕೆ ಒಂದು ಕಂಪೌಂಡ್ ನಿರ್ಮಿಸುವುದಕ್ಕಾದರೂ ನಿಮ್ಮ ಕೈಲಿ ಸಾಧ್ಯವಾಯಿತಾ?, ಅದಕ್ಕೆ ಬೇಕಾದ ಪರಿಸರ ಅನುಮತಿ ಪಡೆದುಕೊಳ್ಳುವುದಕ್ಕೆ ಸಾಧ್ಯವಾಯಿತೇ? ಎಂದು ಅವರು ಸರಣಿ ಪ್ರಶ್ನೆಗಳನ್ನು ಹಾಕಿದರು.

ಎಸ್‌ಎಸ್‌ಎಲ್‌ಸಿ ಮತ್ತು ಪಿಯುಸಿಯಲ್ಲಿ ಈ ಭಾಗ ಕಟ್ಟಕಡೆಯ ಸ್ಥಾನ ತಲುಪಿದ್ದು ಹೇಗೆ?, ಶಿಕ್ಷಕರ ನೇಮಕಾತಿ ಮಾಡಿಕೊಳ್ಳಲು ನಿಮ್ಮ ಕೈಲಿ ಆಗುತ್ತಿಲ್ಲ. ಜವಳಿ ಪಾರ್ಕ್ ಅನುಷ್ಠಾನ ಮಾಡಲು ಸಾಧ್ಯವಿಲ್ಲ. ಯಾವುದೇ ಕೆಲಸ ಮಾಡದೇ ಬರೀ ದೂಷಣೆ ಮಾಡುವುದನ್ನೇ ಕಾಯಕ ಮಾಡಿಕೊಂಡಿರುವ ನೀವು ಒಂದು ಕುಟುಂಬಕ್ಕೆ ಗುಲಾಮಗಿರಿ ಮಾಡಿಕೊಂಡಿದ್ದು ಒಂದು ದೊಡ್ಡ ಸಾಧನೆಯೇ? ಎಂದು ಅವರು ಲೇವಡಿ ಮಾಡಿದರು.

ರಾಜ್ಯದ ಎಸ್‌ಸಿ, ಎಸ್‌ಟಿ, ಸಿಎಸ್‌ಪಿ ಹಣವನ್ನು ರಾಜ್ಯ ಸರ್ಕಾರ ಗ್ಯಾರಂಟಿಗಳಿಗೆ ಬಳಸಿಕೊಳ್ಳುತ್ತಿದೆ. ಯಾವ ಸಮುದಾಯಕ್ಕೆ ಧ್ವನಿಯಾಗಬೇಕಿತ್ತೋ ಆ ಕೆಲಸವನ್ನು ಮಾಡುತ್ತಿಲ್ಲ. ಎಲ್ಲ ರಂಗಗಳಲ್ಲಿಯೂ ವೈಫಲ್ಯ ಕಂಡಿರುವ ನೀವು ಪ್ರಧಾನಿ ನರೇಂದ್ರ ಮೋದಿ ಅವರಿಗೆ ಟೀಕೆ ಮಾಡುವ ದಾಷ್ಟ್ರ್ಯ ಪ್ರದರ್ಶಿಸುತ್ತಿದ್ದೀರಿ ಎಂದು ಖಂಡಿಸಿದ ಅವರು, ತಾವು ಏನೂ ಸಾಧನೆ ಮಾಡದೇ ಬೇರೆಯವರ ಮೇಲೆ ಬೆಟ್ಟು ಮಾಡುವುದು ಬೇಡ. ಕಳೆದ 40 ವರ್ಷಗಳ ತಮ್ಮ ಕುಟುಂಬ ರಾಜಕಾರಣದಿಂದ ಈ ಭಾಗಕ್ಕೆ ಏನೆಲ್ಲ ಮಾಡಿದ್ದೀರಿ ಎನ್ನುವ ಕುರಿತು ಶ್ವೇತಪತ್ರ ಹೊರಡಿಸಿ ಎಂದು ಒತ್ತಾಯಿಸಿದರು.

ಸಿಎಜಿಯವರು ತಿಳಿಸಿದಂತೆ ರಾಜ್ಯವನ್ನು ಸಾಲಗ್ರಸ್ತವನ್ನಾಗಿ ಮಾಡಿದ್ದು ಬಿಟ್ಟರೆ ಬೇರೆ ಏನನ್ನೂ ಮಾಡಿಲ್ಲ ಎಂದು ದೂರಿದ ಅವರು, ಗ್ಯಾರಂಟಿಗಳ ಮೂಲಕ ಕರ್ನಾಟಕ ರಾಜ್ಯವನ್ನು ಹಿಂದಕ್ಕೆ ತಳ್ಳಿರುವುದು ಬಿಟ್ಟರೆ ಬೇರೇನೂ ಮಾಡಿಲ್ಲ. ಆದಷ್ಟು ಬೇಗ ದಿಶಾ ಸಭೆಯನ್ನು ಕರೆದು ಈ ಭಾಗದ ವಿಕಾಸಕ್ಕೆ ಬೇಕಾದ ಕಾರ್ಯಕ್ರಮಗಳನ್ನು ರೂಪಿಸಿ ಎಂದು ಆಗ್ರಹಿಸಿದ ಅವರು, ಸುಖಾ ಸುಮ್ಮನೇ ಆರೋಪ ಮಾಡಿಕೊಂಡು ಕಾಲಹರಣ ಮಾಡುವುದು ಸರ್ವಥಾ ಸರಿಯಲ್ಲ ಎಂದು ಸಲಹೆ ಮಾಡಿದರು. ಸುದ್ದಿಗೋಷ್ಠಿಯಲ್ಲಿ ಸಪ್ನಾ ಆರ್. ಮಂಗಲಗಿ, ಗಿರೀಶ್ ಎಲ್. ಭಜಂತ್ರಿ, ಬಸವರಾಜ್ ಮದ್ದರಕಿ, ಶಿವಕುಮಾರ್ ಪಾಟೀಲ್ ಮುಂತಾದವರು ಉಪಸ್ಥಿತರಿದ್ದರು.

# "ಚಂದ್ರಶೇಖರ್ ದಂಡಿನ್ ಅವರಿಗೆ "ವಿಜಯರತ್ನ" ಪ್ರಶಸ್ತಿ ಪ್ರದಾನ



ಹುಣಸಗಿ : ತಾಲೂಕಿನ ಚಂದ್ರಶೇಖರ ದಂಡಿನ್ ವರಿಗೆ ಒಲಿದ ವಿಜಯ ರತ್ನ ಪ್ರಶಸ್ತಿ

ಮಲೇಶಿಯಾದಲ್ಲಿ ವಿಜಯವಾಣಿ ಪತ್ರಿಕೆಯ ವತಿಯಿಂದ ನಡೆದ ಭವ್ಯ ಸಮಾರಂಭದಲ್ಲಿ ಹುಣಸಿಗಿ ತಾಲೂಕಿನ ಚಂದ್ರಶೇಖರ್ ದಂಡಿನ್ ಅವರಿಗೆ "ವಿಜಯರತ್ನ" ಪ್ರಶಸ್ತಿ ಪ್ರದಾನ ಮಾಡಲಾಯಿತು. ಸಮಾರಂಭವು ಅದ್ದೂರಿಯಾಗಿ ನಡೆಯಿದ್ದು, ಪ್ರಶಸ್ತಿಯನ್ನು ಖ್ಯಾತ ಮಾಧ್ಯಮವ್ಯಕ್ತಿತ್ವಹಾಗೂ ವಿಜಯವಾಣಿ ಪತ್ರಿಕೆಯ ಆಡಳಿತ ನಿರ್ದೇಶಕರಾದ ಶ್ರೀ ಆನಂದ್ ಸಂಕೇಶ್ವರ ಅವರು ಪ್ರಧಾನ ಮಾಡಿದರು.

ಚಂದ್ರಶೇಖರ್ ದಂಡಿನ್ ಅವರು ಹಲವು ವರ್ಷಗಳಿಂದ ಸಮಾಜ ಸೇವೆಯಲ್ಲಿ ತೊಡಗಿಸಿಕೊಂಡಿದ್ದು, ಶೈಕ್ಷಣಿಕ, ಸಾಂಸ್ಕೃತಿಕ ಹಾಗೂ ಮಾನವೀಯ ಕ್ಷೇತ್ರಗಳಲ್ಲಿ ಬಹುಮುಖ್ಯ ಕೊಡುಗೆ ನೀಡಿದ್ದಾರೆ. ಗ್ರಾಮೀಣ ಪ್ರದೇಶದಲ್ಲಿ ಸಾರ್ವಜನಿಕ ಅಭಿವೃದ್ಧಿಗೆ ಅವರು ಸಲ್ಲಿಸಿರುವ ಸೇವೆ ಗಮನಾರ್ಹವಾಗಿದ್ದು, ಈ ಪ್ರಶಸ್ತಿ ಅವರ ಸೇವೆಗೆ ಸಮ್ಮಾನವಾಗಿದೆ.

ಈ ಪ್ರಶಸ್ತಿ ಮೂಲಕ ಭಾರತೀಯರು ಅಂತರರಾಷ್ಟ್ರೀಯ ಮಟ್ಟದಲ್ಲಿ ಸಾಧನೆ ಮಾಡುತ್ತಿರುವ ಬಗ್ಗೆ ಮತ್ತೊಂದು ಹೆಮ್ಮೆ ಸೇರ್ಪಡೆಗೊಂಡಿದೆ. ಚಂದ್ರಶೇಖರ್ ದಂಡಿನ್ ಅವರು ಪ್ರಶಸ್ತಿಯನ್ನು ಸ್ವೀಕರಿಸಿ, ತಮ್ಮ ಸಾಧನೆಗೆ ನೀಡಲಾದ ಗೌರವಕ್ಕಾಗಿ ವಿಜಯವಾಣಿ ಹಾಗೂ ಆಯೋಜಕರಿಗೆ ಧನ್ಯವಾದ ವ್ಯಕ್ತಪಡಿಸಿದರು.!

# ಸಿದ್ಧಾರೂಢ ಮಠ: ನಾಳೆ ಶ್ರಾವಣ ಸಮಾರೋಪ

ಬೀದರ. ಆ. 21 : ಇಲ್ಲಿಯ ಸಿದ್ಧಾರೂಢ ಮಠದಲ್ಲಿ ಆಗಸ್ಟ್ ನಾಳೆ ಶ್ರಾವಣ ಪ್ರವಚನ ಸಮಾರೋಪ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.

ಮಠದ ಪೀಠಾಧಿಪತಿ ಡಾ. ಶಿವಕುಮಾರ ಸ್ವಾಮೀಜಿ ಅವರ ಸಾನಿಧ್ಯದಲ್ಲಿ ಬೆಳಿಗ್ಗೆ 10ಕ್ಕೆ ಭಜನೆ, ಬೆಳಿಗ್ಗೆ 11ಕ್ಕೆ ಪಾದ ಪೂಜೆ ಹಾಗೂ ಮಧ್ಯಾಹ್ನ 12ಕ್ಕೆ ಶ್ರೀ ಮನ್ನಿಜಗುಣ ಶಿವಯೋಗಿಗಳ ಕೈವೈಲ್ಯ ಪದ್ಧತಿಯ ನೀತಿ ಕ್ರಿಯಾಚಾರ್ಯಸ್ಥಲ ಕುರಿತ ಪ್ರವಚನ ಸಮಾರೋಪ ಜರುಗಲಿದೆ.

ಭಕ್ತಾದಿಗಳು ಕಾರ್ಯಕ್ರಮದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಸದ್ಗುರುವಿನ ಕೃಪೆಗೆ ಪಾತ್ರರಾಗಬೇಕು



ಎಂದು ಮಠದ ಆಡಳಿತಾಧಿಕಾರಿ ಡಾ. ಹಾವಗಿರಾವ್ ಮೈಲಾರೆ ಮನವಿ ಮಾಡಿದ್ದಾರೆ.

# ಹೆಚ್‌ಐವಿ ಕುರಿತು ಜಾಗೃತಿ ಇರಲಿ: ಡಾ.ಎನ್.ಬಸರೆಡ್ಡಿ



ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಆ.21–ಹೆಚ್‌ಐವಿ ಸೋಂಕಿಗೆ ಜೀವನ ಪರ್ಯಂತ್ಯ ಚಿಕಿತ್ಸೆಗೊಳಪಡಬೇಕಾದಅನಿವಾರ್ಯವಿದ್ದು, ಯುವ ಪೀಳಿಗೆಯು ಹೆಚ್‌ಐವಿ ಸೋಂಕು ಬಗೆಗಿನ ಜಾಗೃತಿ ಹೊಂದಬೇಕು ಎಂದು ಜಿಲ್ಲಾ ಶಸ್ತ್ರಚಿಕಿತ್ಸಕ ಡಾ.ಎನ್ ಬಸರೆಡ್ಡಿ ಅವರು ಹೇಳಿದರು.

ರಾಜ್ಯ ಏಡ್ಸ್ ಪ್ರಿವೆನ್ಷನ್ ಸೊಸೈಟಿ ಬೆಂಗಳೂರು, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಹಾಗೂ ಜಿಲ್ಲಾ ಏಡ್ಸ್ ನಿಯಂತ್ರಣ ಘಟಕ,ಶ್ರೀಮೇಧಾ ಪದವಿ ಕಾಲೇಜು, ವಿಮುಕ್ತಿ ಏಡ್ಸ್‌ತಡೆಗಟ್ಟುವ ಮಹಿಳಾ ಸಂಘ ಇವರ ಸಂಯುಕ್ತಾಶ್ರಯದಲ್ಲಿ 'ಹೆಚ್‌ಐವಿ ತಡೆಗಟ್ಟಲು ತೀವ್ರಗೊಳಿಸಿದ ಐಇಸಿ ಪ್ರಚಾರ ಅಂದೋಲನ' ಅಂಗವಾಗಿ ನಗರದ ಕೋಟೆ ಪ್ರದೇಶದ ಶ್ರೀಮೇಧಾ ಪದವಿ ಮಹಾವಿದ್ಯಾಲಯದ ಆವರಣದಲ್ಲಿ ಗುರುವಾರ ಆಯೋಜಿಸಿದ್ದ ಬೈಕ್ ರ್‍ಯಾಲಿಗೆ ಹಸಿರು ನಿಶಾನೆ ಹಾರಿಸುವ ಮೂಲಕ ಚಾಲನೆ ನೀಡಿ ಅವರು ಮಾತನಾಡಿದರು.

ಹೆಚ್‌ಐವಿಯನ್ನುತಡೆಗಟ್ಟಬಹುದದಾದ ಕಾಯಿಲೆಯಾಗಿದ್ದು, ಹೆಚ್‌ಐವಿ ಸೋಂಕಿತರು ಬಳಸಿದ ಸೂಜಿ, ಸಿರಿಂಜ್‌ಗಳನ್ನುಬಳಕೆಮಾಡಬಾರದು. ಹೆಚ್‌ಐವಿ ಸೋಂಕು, ಅದರ ಕಳಂಕ ತಾರತಮ್ಯ ಮತ್ತು ಅದರಿಂದ ಉಂಟಾಗುವ ಮರಣಗಳನ್ನುಸೊನ್ನೆಗೆ ತರಲು ಎಲ್ಲರೂ ಶ್ರಮಿಸಬೇಕಿದೆ. ಯುವಜನತೆಯುಜಾಗೃತರಾಗಬೇಕು ಎಂದು ಕರೆ ನೀಡಿದರು.

ಜಿಲ್ಲಾ ಏಡ್ಸ್ ನಿಯಂತ್ರಣ ಘಟಕಾಧಿಕಾರಿ ಡಾ.ಇಂದ್ರಾಣಿ ಅವರು ಮಾತನಾಡಿ,ಹೆಚ್‌ಐವಿಯು ಅಸುರಕ್ಷಿತ ಲೈಂಗಿಕ ಕ್ರಿಯೆ, ಪರೀಕ್ಷೆ ಮಾಡದ ರಕ್ತ ಪಡೆಯುವುದರಿಂದ ಈ ಸೋಂಕು ಹರಡುತ್ತದೆ. ಹೀಗಾಗಿ ಹೆಚ್‌ಐವಿ ಸುರಕ್ಷ ಕವಚಗಳನ್ನು ಬಳಸುವುದರಿಂದ, ಮುಂಜಾಗ್ರತಾ ಕ್ರಮಗಳನ್ನುಅನುಸರಿಸುವುದರಂದ, ಹೆಚ್‌ಐವಿಸೋಂಕನ್ನುತಡೆಗಟ್ಟಬಹುದಾಗಿದೆ ಎಂದರು.

ಜಿಲ್ಲೆಯ ಎಲ್ಲಾ ಗ್ರಾಮಗಳಲ್ಲಿ ಹೆಚ್‌ಐವಿ ಕುರಿತು ಜಾಗೃತಿ ಮೂಡಿಸುವ ಕಾರ್ಯ ಮಾಡಲಾಗುತ್ತಿದೆ. ಹೆಚ್‌ಐವಿ ಸೋಂಕು ಮುಕ್ತ ಜಿಲ್ಲೆಯನ್ನಾಗಿಸಲು ಎಲ್ಲರೂ ಕೈಜೋಡಿಸುವ ಮೂಲಕ ಜಾಗರೂಕರಾಗಬೇಕಿದೆ ಎಂದರು.

ಆಗಸ್ಟ್ 12–ಅಂತರಾಷ್ಟ್ರೀಯ ಯುವ ದಿನಾಚರಣೆ ಮತ್ತು ಹೆಚ್‌ಐವಿ ಸೋಂಕಿನ ಜಾಗೃತಿ ಕುರಿತು ಕಾಲೇಜಿನಲ್ಲಿ ಏರ್ಪಡಿಸಿದ್ದ ರಕ್ತದಾನ ಶಿಬಿರದಲ್ಲಿ 121 ಯುನಿಟ್ ರಕ್ತ ಸಂಗ್ರಹಿಸಿಲಾಗಿದೆ. ಇದೇ ವೇಳೆ ರಕ್ತದಾನ ಮಾಡಿದ ವಿದ್ಯಾರ್ಥಿಗಳಿಗೆ ಬೈಕ್ ಹೆಲ್ಮೆಟ್ ವಿತರಿಸಲಾಯಿತು.

ಹೆಚ್‌ಐವಿ ಜಾಗೃತಿ ಅಂಗವಾಗಿ ನಗರದ ಶ್ರೀಮೇಧಾ ಪದವಿ ಮಹಾವಿದ್ಯಾಲಯದ ಆವರಣದಿಂದ ಬೈಕ್ ರ್‍ಯಾಲಿಯು ಎಸ್.ಪಿ ಸರ್ಕಲ್, ಕುಮಾರ ಸ್ವಾಮಿ ದೇವಸ್ಥಾನ,

# ಮಹಿಳೆ ಕಾಣೆ; ಪತ್ತೆಗೆ ಮನವಿ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಆ.21–ಸಂಡೂರು ಪೊಲೀಸ್ ಠಾಣೆ ವ್ಯಾಪ್ತಿಯ ಮುರಾರಿಪುರ ಗ್ರಾಮದ ಬಸಮ್ಮ ಎನ್ನುವ 67 ವರ್ಷದ ಮಹಿಳೆಯು ಜು.04 ರಂದು ಸಂಡೂರು ಸರ್ಕಾರಿ ಆಸ್ಪತ್ರೆಗೆ ಹೋಗಿಬರುತ್ತೇನೆ ಎಂದು ಮರಳಿ ಬಾರದೇ ಕಾಣೆಯಾಗಿದ್ದು, ಈ ಕುರಿತು ಪ್ರಕರಣ ದಾಖಲಾಗಿದ್ದು, ಪತ್ತೆಗೆ ಸಹಕರಿಸಬೇಕು ಎಂದು ಸಂಡೂರು ಠಾಣಾಧಿಕಾರಿ ಮನವಿ ಮಾಡಿದ್ದಾರೆ.

ಚಹರೆ ಗುರುತು:

ಅಂದಾಜು 5 ಅಡಿ ಎತ್ತರ, ಗೋಧಿಮೈಬಣ್ಣ, ಕೋಲು ಮುಖ, ಸಾಧಾರಣ ಮೈಕಟ್ಟುಹೊಂದಿರುತ್ತಾಳೆ. ಕಾಣೆಯಾದ ಸಂದರ್ಭದಲ್ಲಿ ನೀಲಿ ಬಣ್ಣದ ಬ್ಲೌಸ್ ಮತ್ತು ಕೆಂಪು ಬಣ್ಣದ ಸೀರೆ ಧರಿಸಿರುತ್ತಾಳೆ. ಕನ್ನಡ ಭಾಷೆ ಮಾತನಾಡುತ್ತಾಳೆ.

ಕಾಣೆಯಾದ ಮಹಿಳೆಯ ಬಗ್ಗೆ ಮಾಹಿತಿ ಸಿಕ್ಕಲ್ಲಿ ಬಳ್ಳಾರಿ ಪೊಲೀಸ್ ಕಂಟ್ರೋಲ್ ರೂಂ ದೂ.08392–258100 ಅಥವಾ ಸಂಡೂರು ವೃತ್ತ ಸಿ.ಪಿ.ಐ ದೂ.08395–260100, 9480803036,ಸಂಡೂರು ಪೊಲೀಸ್ ಠಾಣೆ ಮೊ.9480803061, 8548080425ಗೆ ಸಂಪರ್ಕಿಸಬಹುದು ಎಂದು ಪ್ರಕಟಣೆಯಲ್ಲಿ ಮನವಿ ಮಾಡಿದ್ದಾರೆ.

# ಕಂಪ್ಲಿ: ಆ.24 ರಂದು ವಿದ್ಯುತ್ ವ್ಯತ್ಯಯ

ಬಳ್ಳಾರಿ,ಆ.21–ಕಂಪ್ಲಿ ಜೆಸ್ಕಾಂ ವ್ಯಾಪ್ತಿಯ 110/33/11ಕೆವಿ ಉಪ ಕೇಂದ್ರದಲ್ಲಿ ವಿದ್ಯುತ್ ನಿರ್ವಹಣೆ ಕಾರ್ಯ ಕೈಗೊಳ್ಳುತ್ತಿರುವುದರಿಂದ ಆ.24 ರಂದು ಬೆಳಿಗ್ಗೆ 10 ರಿಂದ ಸಂಜೆ 05 ಗಂಟೆಯವರೆಗೆ ಕಂಪ್ಲಿ ಉಪಕೇಂದ್ರದ ವ್ಯಾಪ್ತಿಗೆ ಬರುವ ಪಟ್ಟಣ ಮತ್ತು ಗ್ರಾಮಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ.

***ವಿದ್ಯುತ್ ವ್ಯತ್ಯಯವಾಗುವ ಪ್ರದೇಶಗಳು:**

ಕಂಪ್ಲಿ ವ್ಯಾಪ್ತಿಯ ನಿರಂತರ ಜ್ಯೋತಿ ಮಾರ್ಗಗಳಾದ ಎಫ್2–ಕಂಪ್ಲಿ ಮತ್ತು ಎಫ್3–ಕೈಗಾರಿಕಾ, ಎಫ್4–ಕಂಪ್ಲಿ ಕೊಟ್ಟಾಲ್, ಎಫ್12–ಬಸವೇಶ್ವರನಗರ, ಎಫ್13–ಪ್ರಭು ಕ್ಯಾಂಪ್ ಮತ್ತು ಎಫ್6–ವಿದ್ಯಾಪೀಠ, ಎಫ್11–ಹಂಪಾದೇವನಹಳ್ಳಿ ವ್ಯಾಪ್ತಿಯಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ.

ಪಂಪ್‌ಸೆಟ್ ವಿದ್ಯುತ್ ಮಾರ್ಗಗಳಾದ ಎಫ್1–ದೇವಸಮುದ್ರ, ಎಫ್5–ಜಾನೂರು, ಎಫ್7–ಸಣಾಪುರ, ಎಫ್8–ಕೆ.ತಿಮ್ಮಲಾಪುರ ಹಾಗೂ 33ಕೆವಿ ಕಂಪ್ಲಿ ಉಪ ಕೇಂದ್ರದ ವ್ಯಾಪ್ತಿಗೆ ಬರುವ ಮಾರ್ಗಗಳಾದ ಎಫ್4–ರಾಮಸಾಗರ, ಎಫ್5–ಗೌರಮ್ಮಕೆರೆ ಮತ್ತು ಎಫ್3–ಬೆಳಗೋಡುಹಾಳ್ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ.

ಕಂಪ್ಲಿಗೆ ಸಂಬಂಧಿಸಿದ ಪಂಪ್ ಸೆಟ್(ಐಪಿ ಸೆಟ್) ಮೇಲೆ ತಿಳಿಸಿದ ಮಾರ್ಗಗಳಲ್ಲಿ ಬೆಳಿಗ್ಗೆ 03 ರಿಂದ 10 ರವರೆಗೆ (7ತಾಸು) ವಿದ್ಯುತ್ ಸರಬರಾಜು ಮಾಡಲಾಗುವುದು.

ಆ ಸಂದರ್ಭದಲ್ಲಿ ಸಾರ್ವಜನಿಕರು ಯಾವುದೇ ತರಹದ ವಿದ್ಯುತ್ ದುರಸ್ಥಿ ಕಾರ್ಯ ಪೂರ್ವಾನುಮತಿ ಇಲ್ಲದೇ ಮಾಡಬಾರದು,ಒಂದುವೇಳೆ ವಿದ್ಯುತ್ ಅಪಘಾತ ಸಂಭವಿಸಿದ್ದಲ್ಲಿ ಜೆಸ್ಕಾಂ ಕಂಪನಿ ಜವಾಬ್ದಾರಿಯಾಗಿರುವುದಿಲ್ಲ. ಹಾಗಾಗಿ ವಿದ್ಯುತ್ ಗ್ರಾಹಕರು, ಸಾರ್ವಜನಿಕರು ಸಹಕರಿಸಬೇಕು ಎಂದು ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಗೌರಿ ಗಣೇಶ ಹಬ್ಬದ ಪ್ರಯುಕ್ತ ಶೇ.15 ರಿಯಾಯಿತಿ ದರದಲ್ಲಿ ಲಿಡ್‌ಕರ್ ನ ಚರ್ಮವಸ್ತುಗಳು ಮಾರಾಟ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಆ.21–ಡಾ.ಬಾಬು ಜಗನ್ ಜೀವನ್ ರಾಂ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮ ನಿಯಮಿತದಿಂದ ಗೌರಿ ಗಣೇಶ ಹಬ್ಬದ ಪ್ರಯುಕ್ತ ಲಿಡ್‌ಕರ್ ನ ಎಲ್ಲಾ ಚರ್ಮವಸ್ತುಗಳಿಗೆ ಶೇ.15 ರಿಯಾಯಿತಿ ದರದಲ್ಲಿ ಮಾರಾಟ ಮಾಡಲಾಗುವುದು ಎಂದು ಲಿಡ್‌ಕರ್ ನ ಜಿಲ್ಲಾ ಸಂಯೋಜಕರು ತಿಳಿಸಿದ್ದಾರೆ.

ವಿಳಾಸ: ನಗರದ ಹೆಚ್.ಆರ್. ಗವಿಯಪ್ಪ ವೃತ್ತದ ಬಳಿಯ ಬುಡಾ ಕಾಂಪ್ಲೆಕ್ಸ್ ನ ಲಿಡ್‌ಕರ್ ಲೆದರ್ ಎಂಪೋರಿಯಮ್ ಶಾಪ್ ನಂ:24 ರಲ್ಲಿ ರಿಯಾಯಿತಿ ದರದಲ್ಲಿ ಮಾರಾಟ ಮಾಡಲಾಗುವುದು. ಆಗಸ್ಟ್ 19 ರಿಂದ 26 ರವರೆಗೆ (8 ದಿನ ಮಾತ್ರ) ರಿಯಾಯಿತಿ ದರ ನೀಡಲಾಗುತ್ತಿದೆ.

ಹೆಚ್ಚಿನ ಮಾಹಿತಿಗಾಗಿ ದೂ.08392–271741, ಮೊ.9844667691 ಗೆ ಸಂಪರ್ಕಿಬಹುದು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮಕ್ಕಳ ಹಕ್ಕುಗಳ ರಕ್ಷಣೆ, ಸಾಮಾಜಿಕ ನ್ಯಾಯಕ್ಕೆ ಶ್ರಮಿಸಿ: ನ್ಯಾ.ರಾಜೇಶ್ ಎನ್.ಹೊಸಮನೆ



ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಆ.21–ಬಾಲ್ಯ ವಿವಾಹ ಪ್ರಕರಣಗಳನ್ನು ಶೂನ್ಯಕ್ಕೆ ತರಲು ಎಲ್ಲಾ ಇಲಾಖೆಗಳ ಅಧಿಕಾರಿಗಳು ಒಗ್ಗೂಡಿ ಶ್ರಮಿಸಬೇಕು ಎಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶರಾದ ರಾಜೇಶ್ ಎನ್.ಹೊಸಮನೆ ಅವರು ಹೇಳಿದರು.

ಮಕ್ಕಳ ರಕ್ಷಣಾ ನಿರ್ದೇಶನಾಲಯ, ಬೆಂಗಳೂರು, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಪದವಿಪೂರ್ವ ಶಾಲಾ ಶಿಕ್ಷಣ ಇಲಾಖೆ, ಜಿಲ್ಲಾ ಮಕ್ಕಳ ರಕ್ಷಣಾ ಘಟಕ ಇವರ ಸಂಯುಕ್ತಾಶ್ರಯದಲ್ಲಿ ನಗರದ ತಾಲ್ಲೂಕು ಪಂಚಾಯತ್ ಸಭಾಂಗಣದಲ್ಲಿ "ಬಾಲ್ಯವಿವಾಹ ನಿಷೇಧ ಕಾಯ್ದೆ ಹಾಗೂ ಪೋ–ಕ್ಸೋ ಕಾಯ್ದೆ ಅನುಷ್ಠಾನ" ಕುರಿತು ಸರ್ಕಾರಿ/ಸರ್ಕಾರೇತರ ಪದವಿ ಪೂರ್ವ ಕಾಲೇಜಿನ ಪ್ರಾಂಶುಪಾಲರಿಗೆ ಬುಧವಾರ ಏರ್ಪಡಿಸಿದ್ದ ಒಂದು ದಿನದ ತರಬೇತಿ ಕಾರ್ಯಾಗಾರ ಉದ್ಘಾಟಿಸಿ ಅವರು ಮಾತನಾಡಿದರು.

ಬಾಲ್ಯವಿವಾಹನಿಷೇಧಾಧಿಕಾರಿಗಳಾಗಿ ನಿಯೋಜನೆಗೊಂಡಿರುವ ಕಾಲೇಜುಗಳ ಪ್ರಾಂಶುಪಾಲರು ತಮ್ಮ ವ್ಯಾಪ್ತಿಯಲ್ಲಿ ಇಲಾಖೆಗಳೊಂದಿಗೆ ಸಕ್ರಿಯವಾಗಿ ಭಾಗವಹಿಸಿ ಬಾಲ್ಯವಿವಾಹ ತಡೆಯಲು ಕ್ರಮವಹಿಸಬೇಕು. ಈ ಮೂಲಕ ಮಕ್ಕಳ ಹಕ್ಕುಗಳ ರಕ್ಷಣೆ, ಸಾಮಾಜಿಕ ನ್ಯಾಯಕ್ಕೆ ಮುಂದಾಗಬೇಕು ಎಂದರು.

ಕಲ್ಯಾಣ ಕರ್ನಾಟಕ ಭಾಗದಲ್ಲಿ ಬಾಲ್ಯವಿವಾಹಗಳು ಹೆಚ್ಚಾಗಿ ಕಂಡುಬರುತ್ತಿದ್ದು, ಕಾಲೇಜು ವಿದ್ಯಾರ್ಥಿಗಳಿಗೆ ಬಾಲ್ಯವಿವಾಹ, ಪೋಕ್ಸೋ ಕಾಯ್ದೆ ಮತ್ತು ಮಾದಕ ವಸ್ತುಗಳ ದುಷ್ಪರಿಣಾಮಗಳ ಕುರಿತು ನಿರಂತರ ಜಾಗೃತಿ ಮೂಡಿಸಬೇಕು ಎಂದು ತಿಳಿಸಿದರು.

ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಎಳೆನಾಗಪ್ಪ, ಬಾಲ್ಯವಿವಾಹ ಮತ್ತು ಪೋಕ್ಸೋ ಕಾಯ್ದೆ ಕುರಿತು ಜನಜಾಗೃತಿ ಮೂಡಿಸುವ ಅಗತ್ಯತೆ ಕುರಿತು ಹಾಗೂ ವಿವಿಧ ರೀತಿಯ ಸಂಕಷ್ಟದಲ್ಲಿರುವ ಮಕ್ಕಳ ರಕ್ಷಣೆ, ದತ್ತು ಪ್ರಕ್ರಿಯೆ ಮತ್ತು ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಸೇವೆಗಳ ಕುರಿತು ಪ್ರಾಸ್ತಾವಿಕವಾಗಿ ಮಾತನಾಡಿದರು.

ಮಹಿಳಾ ಪೊಲೀಸ್ ಠಾಣೆಯ ಪೊಲೀಸ್ ಇನ್ಸ್‌ಪೆಕ್ಟರ್ ರಮೇಶ್ ಕುಲಕರ್ಣಿ ಮಾತನಾಡಿ, ಮಕ್ಕಳ ಮೇಲಿನ ದೌರ್ಜನ್ಯಗಳನ್ನು ತಡೆಯುವಲ್ಲಿ ಪ್ರಾಂಶುಪಾಲರ ಪಾತ್ರವು ಇದ್ದು, ಮಕ್ಕಳ ಮೇಲಿನ ದೌರ್ಜನ್ಯ ಪ್ರಕರಣಗಳು ಕಂಡುಬಂದರೆ ಮಕ್ಕಳ ಸಹಾಯವಾಣಿ ಸಂ–ಖ್ಯೆ 1098 ಹಾಗೂ ಪೊಲೀಸ್ ತುರ್ತು ಸಹಾಯವಾಣಿ 112ಗೆ ಕರೆ ಮಾಡಲು ತಿಳಿಸಿದರು.

ಪದವಿ ಪೂರ್ವ ಶಿಕ್ಷಣ ಇಲಾಖೆಯ ನಾಗಲಿಂಗಸ್ವಾಮಿ ಅವರು ಮಾತನಾಡಿ, ಪ್ರಾಂಶುಪಾಲರು ಈ ತರಬೇತಿಯ ಉದ್ದೇಶ ಅರ್ಥಮಾಡಿಕೊಂಡು ತಮ್ಮ ಕಾಲೇಜಿನ ವಿದ್ಯಾರ್ಥಿಗಳಿಗೆ ಜಾಗೃತಿ ಮೂಡಿಸಬೇಕು ಮತ್ತು ಕಾನೂನು ಅರಿವು ಮೂಡಿಸುವ ಮೂಲಕ ಅವರ ಆತ್ಮಸ್ಥೈರ್ಯ ಹೆಚ್ಚಿಸಬೇಕು ಎಂದು ತಿಳಿಸಿದರು.

ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಮಾಜಿ ಸದಸ್ಯ ಡಾ.ಹೆಚ್.ಸಿ.ರಾಘವೇಂದ್ರ ಅವರು ಸಂಪನ್ಮೂಲವ್ಯಕ್ತಿಯಾಗಿ ಭಾಗವಹಿಸಿ, ಬಾಲ್ಯವಿವಾಹ ಮತ್ತು ಪೋಕ್ಸೋ ಕಾಯ್ದೆ ಅನುಷ್ಠಾನ ಕುರಿತು ಸವಿವರ ಮಾಹಿತಿ ಮಂಡಿಸಿದರು.

ಕಾರ್ಯಾಗಾರದಲ್ಲಿ ಬಳ್ಳಾರಿ ತಾಪಂ ಇಒ ಡಾ.ಶ್ರೀಧರ್ ಐ ಬಾರಿಕರ್, ಮಕ್ಕಳ ಕಲ್ಯಾಣ ಸಮಿತಿಯ ಸದಸ್ಯ ಮಂಜುನಾಥ, ಸಹಾಯಕ ಶಿಶು ಅಭಿವೃದ್ಧಿ ಯೋಜನಾ ಅಧಿಕಾರಿ ನಂದಿನಿ ಶಿಂಧೆ, ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಚನ್ನಬಸಪ್ಪ, ಮಂಜುನಾಥ, ರವಿ, ಸುಧಾ, ನಿಲೋಫಿಯಾ, ಮಕ್ಕಳ ಸಹಾಯವಾಣಿ ಸಂಯೋಜಕರಾದ ಆನಂದ ಮತ್ತು 60ಕ್ಕೂ ಕಾಲೇಜಿನ ಪ್ರಾಂಶುಪಾಲರು ಉಪಸ್ಥಿತರಿದ್ದರು.

# ಪರಿಸರಕ್ಕೆ ಹಾನಿಯಾಗದಂತೆ ಗಣೇಶ ಹಬ್ಬ ಆಚರಿಸಿ: ಟಿ.ಎಂ.ಸಿದ್ದೇಶ್ವರ ಬಾಬು



ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಆ.21–ಗೌರಿ ಗಣೇಶ ಹಬ್ಬವು ಭಕ್ತಿ ಭಾವನೆ ಪೂಜೆ–ಯ ಹಬ್ಬವಾಗಿದ್ದು, ಪರಿಸರಕ್ಕೆ ಹಾನಿಯಾಗದಂತೆ ಆಚರಿಸಬೇಕು ಎಂದು ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯ ಪರಿಸರ ಅಧಿಕಾರಿ ಟಿ.ಎಂ.ಸಿದ್ದೇಶ್ವರ ಬಾಬು ಹೇಳಿದರು. ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್, ಜಿಲ್ಲಾ ಸಂಸ್ಥೆ ಬಳ್ಳಾರಿ ಹಾಗೂ ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ, ಬಳ್ಳಾರಿ ಇವರ ಸಂಯುಕ್ತಾಶ್ರಯದಲ್ಲಿ ನಗರದ ಜಿಲ್ಲಾ ಸ್ಕೌಟ್ಸ್ ಮತ್ತು ಗೈಡ್ಸ್ ಭವನದಲ್ಲಿ ಬುಧವಾರ ಆಯೋಜಿಸಿದ್ದ 'ಪರಿಸರ ಸ್ನೇಹಿ ಗಣೇಶ' ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಗಣೇಶ ಹಬ್ಬವನ್ನು ವಾಯು ಮಾಲಿನ್ಯ, ಜಲ ಮಾಲಿನ್ಯ, ಶಬ್ದ ಮಾಲಿನ್ಯ ಮಣ್ಣು ಮಾಲಿನ್ಯ ರಹಿತವಾಗಿ ಪರಿಸರ ಸ್ನೇಹಿಯಾಗಿ ಆಚರಿಸುವಂತೆ ಕರೆ ನೀಡಿದರು.

ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯ ಅಧೀಕ್ಷಕ ಅಲ್ತಾಫ್ ಹುಸೇನ್, ಕ್ಷೇತ್ರ ಸಹಾಯಕ ಕೆ.ಸೋಮಶೇಖರ್ ಅವರು ಮಾತನಾಡಿದರು. ಬಳ್ಳಾರಿ ಜಿಲ್ಲಾ ಸಂಸ್ಥೆಯ ಜಿಲ್ಲಾ ಸ್ಕೌಟ್ ಆಯುಕ್ತ ಡಾ.ಕುಪ್ಪಗಲ್ ವೀರೇಶ್ ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು.

ಈ ಸಂದರ್ಭದಲ್ಲಿ ರಾಜ್ಯ ಸಹಾಯಕ ಸಂಘಟನಾ ಆಯುಕ್ತರು ಹಾಗೂ ಕಲ್ಯಾಣ ಕರ್ನಾಟಕದ ಉಸ್ತುವಾರಿಗಳಾದ ಮಲ್ಲೇಶ್ವರಿ ಜುಜಾರೆ, ಜಿಲ್ಲಾ ಸ್ಕೌಟ್ಸ್ ಮತ್ತು ಗೈಡ್ಸ್ ಸಹಾಯಕ ಮಹಮ್ಮದ್ ಶರ್ಫುದ್ದೀನ್, ಜಿಲ್ಲಾ ತರಬೇತಿ ಆಯುಕ್ತ ಎಂ.ನಾಗರಾಜ್, ಜಂಟಿ ಕಾರ್ಯದರ್ಶಿ ಚಂದ್ರಯ್ಯ ಮಠದ, ಜಿಲ್ಲಾ ಸ್ಥಾನಿಕ ಆಯುಕ್ತ ಅನಂತ್ ಕುಮಾರ್ ಶೆಟ್ಟಿ, ಸ್ಕೌಟ್ ಮಾಸ್ಟರ್ ಹಾಗೂ ಗೈಡ್ ಕ್ಯಾಪ್ಟನ್ ವರಲಕ್ಷ್ಮೀ ರಾಜಲಕ್ಷ್ಮೀ, ರೋವರ್ ಸ್ಕೌಟ್ ಲೀಡರ್ ಗಂಟೆಪ್ಪ ಸೇರಿದಂತೆ ರೋವರ್ಸ್, ರೇಂಜರ್ಸ್, ಸ್ಕೌಟ್ಸ್–ಗೈಡ್ಸ್ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಆ.28 ರಂದು ನಿಧಿ ಆಪ್ಕೆ ನಿಕಟ್ ಕಾರ್ಯಕ್ರಮ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಆ.21–ಕಾರ್ಮಿಕರ ಭವಿಷ್ಯ ಸಂಸ್ಥೆ ಬಳ್ಳಾರಿ ಪ್ರಾದೇಶಿಕ ಕಚೇರಿ ವತಿಯಿಂದ ಭವಿಷ್ಯ ನಿಧಿ ನಿಮ್ಮ ಹತ್ತಿರಕ್ಕೆ ಎಂಬ ಅಂಶದಡಿ 'ನಿಧಿ ಆಪ್ಕೆ ನಿಕಟ್' ಕಾರ್ಯಕ್ರಮವನ್ನು ಆ.28 ರಂದು ಬೆಳಿಗ್ಗೆ 09 ರಿಂದ ಸಂಜೆ 06 ಗಂಟೆಯವರೆಗೆ ಎರಬನಹಳ್ಳಿ ಸುಲ್ತಾನಪುರ ರಸ್ತೆಯ ಮಿನೆರಾ ಸ್ಟೀಲ್ಸ್ ಅಂಡ್ ಪವರ್ ಲಿಮಿಟೆಡ್ ನಲ್ಲಿ ಆಯೋಜಿಸಲಾಗಿದೆ ಎಂದು ಪ್ರಾದೇಶಿಕ ಭವಿಷ್ಯ ನಿಧಿ ಬಳ್ಳಾರಿ ಪ್ರಾದೇಶಿಕ ಕಚೇರಿಯ ಆಯುಕ್ತ ಕೆ.ವಿ ಪ್ರವೀಣ್ ಅವರು ತಿಳಿಸಿದ್ದಾರೆ.

ಕಾರ್ಮಿಕರ, ಪಿಂಚಣಿದಾರರ ಮತ್ತು ಉದ್ಯೋಗದಾತರರ ಕುಂದು ಕೊರತೆ ಪರಿಹಾರ, ಮಾಹಿತಿ ವಿನಿಮಯ ಮಾಡಿಕೊಳ್ಳಬಹುದು. ಉದ್ಯೋಗದಾತರ ಕರ್ತವ್ಯ ಮತ್ತು ಜವಾಬ್ದಾರಿಗಳ ಕುರಿತು ಅರಿವು, ಕಾರ್ಮಿಕರಿಗೆ, ಉದ್ಯೋಗದಾತರಿಗೆ, ಪ್ರಧಾನ ಉದ್ಯೋಗದಾತರಿಗೆ ಮತ್ತು ಗುತ್ತಿಗೆದಾರರಿಗೆ ಲಭ್ಯವಿರು ಆನ್‌ಲೈನ್ ಸೇವೆಗಳ ಮಾಹಿತಿ, ಹೊಸ ಉಪಕ್ರಮಗಳು ಹಾಗೂ ಸುಧಾರಣೆ ಕ್ರಮಗಳ ಕುರಿತು ಮಾಹಿತಿ ಒದಗಿಸುವ ಕಾರ್ಯಕ್ರಮವಾಗಿದೆ.

ಕಾರ್ಮಿಕರು, ಪಿಂಚಣಿದಾರರು, ಉದ್ಯೋಗದಾತರು ಆ.28 ರಂದು ನಡೆಯುವ ನಿಧಿ ಆಪ್ಕೆ ನಿಕಟ್ ಕಾರ್ಯಕ್ರಮದಲ್ಲಿ ಭಾಗವಹಿಸಿ ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ರೈತರು ಬೆಳೆ ರೋಗ, ಕೀಟ ಪಸರಿಸದಂತೆ ಮುನ್ನೆಚ್ಚರಿಕೆ ಕ್ರಮವಹಿಸಿ



ಬಳ್ಳಾರಿ,ಆ.21–ಪ್ರಸ್ತುತ ಸಾಲಿನ ಮುಂಗಾರು ಹಂಗಾಮಿನಲ್ಲಿ ಅಧಿಕ ಮಳೆಯಾಗುತ್ತಿದ್ದು, ಮೋಡ ಕವಿದ ವಾತವರಣ ಹಾಗೂ ತಾಪಮಾನ ಏರುಪೇರುನಿಂದ ತೋಟಗಾರಿಕೆ ಬೆಳೆಗಳ ಇಳುವರಿ ಮೇಲೆ ಪರಿಣಾಮ ಬೀರುವ ಸಾದ್ಯತೆಯಿದ್ದು, ರೈತರು ಈ ಸಂಧರ್ಭದಲ್ಲಿ ರೋಗ ಮತ್ತು ಕೀಟ ಪಸರಿಸದಂತೆ ಮುನ್ನೆಚ್ಚರಿಕೆ ಕ್ರಮವಾಗಿ ಸಮಗ್ರ ರೋಗ ಮತ್ತು ಕೀಟ ನಿಯಂತ್ರಣ ಪ್ರಕ್ರಿಯೆ ಅಳವಡಿಸಿಕೊಳ್ಳಬೇಕು ಎಂದು ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು ತಿಳಿಸಿದ್ದಾರೆ.

ಬಳ್ಳಾರಿ, ಕುರುಗೋಡು ಮತ್ತು ಕಂಪ್ಲಿ ತಾಲ್ಲೂಕಿನಲ್ಲಿ ವಾಣಿಜ್ಯ ಬೆಳೆಯಾಗಿ ಮೆಣಸಿನಕಾಯಿ ಬೆಳೆ ಮತ್ತು ಹಣ್ಣಿನ ಬೆಳೆಗಳಾಗಿ ದಾಳಿಂಬೆ, ಪಪ್ಪಾಯ, ಅಂಜೂರ ಮತ್ತು ಸೀಬೆ ಬೆಳೆಗಳನ್ನು ಬೆಳೆಯಲಾಗುತ್ತಿದೆ.

ಸಾಂಬಾರುಬೆಳೆಯಾದಮೆಣಸಿನಕಾಯಿ ಬೆಳೆಯನ್ನು ಅಂದಾಜು 28,000 ಹೆಕ್ಟೇರ್ ಗೂ ಅಧಿಕ ಪ್ರದೇಶದಲ್ಲಿ ಮತ್ತು ಅಂಜೂರ ಬೆಳೆಯನ್ನು 484 ಹೆಕ್ಟೇರ್ ಗೂ ಅಧಿಕ ಪ್ರದೇಶದಲ್ಲಿ ಬೆಳೆಯಲಾಗುತ್ತಿದೆ. ಪ್ರಸ್ತುತ ಸಾಲಿನ ವಾಯುಭಾರ ಕುಸಿತದಿಂದ ತಾಲ್ಲೂಕಿನಾದ್ಯಂತ ಅಧಿಕ ಮಳೆಯಾಗುತ್ತಿದ್ದು, ಮೋಡ ಕವಿದ ವಾತಾವರಣ ಇರುವುದರಿಂದ ರೈತರು ಮುಂಜಾಗ್ರತಾ ವಹಿಸಬೇಕು ಎಂದು ತಿಳಿಸಿದ್ದಾರೆ.

***ಕೈಗೊಳ್ಳಬೇಕಾದ ಕ್ರಮಗಳು:***

ಮೆಣಸಿನಕಾಯಿ ಬೆಳೆಯಲ್ಲಿ ಹಣ್ಣು ಕೊಳೆ ರೋಗ, ಕಾಯಿ ಕೊರಕ, ರಸ ಹೀರುವ ಕೀಟಗಳು (ಥ್ರಿಪ್ಸ್), ಗೊಣ್ಣೆಹುಳುಗಳು, ಸೊರಗು ರೋಗ, ಕಾಂಡ ಕೊರಕ ಹುಳುಗಳ ಬಾದೆ ಹೆಚ್ಚಾಗುತ್ತಿರುವ ಸಂಭವವಿದ್ದು, ರೈತರು ಥೈಯೊಮೆಥಾಕ್ಸಿಮ್ 0.5 ಗ್ರಾಂ ಅಥವಾ ಸ್ಪೈನೋಸ್ಯಾಡ್ 0.25 ಮಿ.ಲೀ ಪ್ರತಿ ಲೀಟರ್ ನೀರಿಗೆ ಬೆರಸಿ ಸಿಂಪರಣೆ ಮಾಡಬಹುದು.

ದಾಳಿಂಬೆ ಬೆಳೆಯಲ್ಲಿ ಕಾಯಿ ಕೊಳೆ ರೋಗದ ಬಾದೆಗೆ ಕಾಪರ್ ಹೈಡ್ರಾಕ್ಸೈಡ್ 2 ಗ್ರಾಂ ಅಥವಾ ಜೈರಮ್ 2 ಗ್ರಾಂ ಆಥವಾ ಪ್ರೊಪಿನೆಬ್ 2.5 ಗ್ರಾಂ ಅಥವಾ ಕ್ಯಾಪ್ಟನ್ 2 ಗ್ರಾಂ ಪ್ರತಿ ಲೀಟರ್ ನೀರಿಗೆ ಬೆರಸಿ ಸಿಂಪರಣೆ ಮಾಡಬಹುದು. ಅಂಜೂರ ಬೆಳೆಯಲ್ಲಿ ಕಟಾವಿಗೆ ಬಂದಂತಹ ಹಣ್ಣುಗಳನ್ನು ಕೊಯ್ಲು ಮಾಡಿದ ನಂತರ ಗಿಡಗಳಿಗೆ ಹೆಕ್ಸಾಕೋನಾಜೋಲ್ 1ಮಿ.ಲೀ ಅಥವಾ ಡೈಫೆನ್–ಕೊನಜೋಲ್ 1ಮಿ.ಲೀ ಪ್ರತಿ ಲೀಟರ್ ನೀರಿಗೆ ಬೆರಸಿ ಸಿಂಪರಣೆ ಮಾಡಬಹುದು.

ಪಪಾಯ ಬೆಳೆಯಲ್ಲಿ ಬುಡ ಕೊಳೆ ರೋಗಕ್ಕೆ ಹೆಕ್ಸಾಕೋನಾಜೋಲ್ 2ಮಿ.ಲೀ ಪ್ರತಿ ಲೀಟರ್ ನೀರಿಗೆ ಬೆರಸಿ ಬುಡದ ಸುತ್ತ ಹಾಕಬೇಕು. ಕಾಯಿ ಕೊಳೆ ರೋಗಕ್ಕೆ ಡೈಫೆನ್–ಕೊನಜೋಲ್ 1ಮಿ.ಲೀ ಪ್ರತಿ ಲೀಟರ್ ನೀರಿಗೆ ಬೆರಸಿ ಸಿಂಪರಣೆ ಮಾಡುಬಹುದು. ಪೇರಲ/ಸೀಬೆ ಬೆಳೆಯಲ್ಲಿ ಹಣ್ಣಿನ ನೊಣದ ಬಾದೆಯ ಹತೋಟಿಗಾಗಿ ಪ್ರತಿ ಎಕರೆಗೆ 8 ರಿಂದ 10 ಮೋಹಕ ಬಲೆಗಳನ್ನು ಅಳವಡಿಸಬಹುದು. ಹೆಚ್ಚಿನ ಮಾಹಿತಿಗಾಗಿ ಸಮೀಪದ ರೈತ ಸಂಪರ್ಕ ಕೇಂದ್ರದ ಸಹಾಯಕ ತೋಟಗಾರಿಕೆ ಅಧಿಕಾರಿಗಳನ್ನು ಅಥವಾ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರ ಕಚೇರಿಗೆ ಸಂಪರ್ಕಿಸಬಹುದು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸದ್ಭಾವನಾ ದಿನ: ಜಿಲ್ಲಾಡಳಿತದ ಭವನದಲ್ಲಿ ಪ್ರತಿಜ್ಞಾ ವಿಧಿ ಸ್ವೀಕಾರ

ಮಲ್ಲಮ್ಮ ನುಡಿವಾರ್ತೆ

ಕೊಪ್ಪಳ : ಸದ್ಭಾವನಾ ದಿನದ ಅಂಗವಾಗಿ ಜಿಲ್ಲಾಡಳಿತ ಭವನದ ಜಿಲ್ಲಾಧಿಕಾರಿಗಳ ಕಛೇರಿ ಸಭಾಂಗಣದಲ್ಲಿ ಬುಧವಾರ ಪ್ರತಿಜ್ಞಾ ವಿಧಿ ಸ್ವೀಕಾರ ಕಾರ್ಯಕ್ರಮ ನಡೆಯಿತು.

ಅಪರ ಜಿಲ್ಲಾಧಿಕಾರಿ ಸಿದ್ರಾಮೇಶ್ವರ ಅವರು "ಜಾತಿ, ಧರ್ಮ, ಪ್ರದೇಶ, ಮತ ಅಥವಾ ಭಾಷೆಯ ಬೇಧ ಭಾವವಿಲ್ಲದೇ ಭಾರತದ ಎಲ್ಲಾ ಜನತೆಯ ಭಾವೈಕ್ಯ ಮತ್ತು ಸೌಹಾರ್ದಕ್ಕಾಗಿ ಕಾರ್ಯ ನಿರ್ವಹಿಸುತ್ತೇನೆಂದು ನಾನು ಪ್ರತಿಜ್ಞೆ ಮಾಡುತ್ತೇನೆ. ಅಲ್ಲದೇ, ವೈಯಕ್ತಿಕವಾಗಿಯಾಗಲೀ ಅಥವಾ ಸಾಮೂಹಿಕವಾಗಿಯಾಗಲೀ ನಮ್ಮಲ್ಲಿರುವ ಎಲ್ಲಾ ಬೇಧಭಾವಗಳನ್ನು ಹಿಂಸಾಚಾರಕ್ಕೆ ಅವಕಾಶ ನೀಡದೆ ಸಮಾಲೋಚನೆ ಹಾಗೂ ಸಂವಿಧಾನಾತ್ಮಕ ಕ್ರಮಗಳ ಮೂಲಕ ಪರಿಹರಿಸುತ್ತೇನೆಂದು ಸಹ ಪ್ರತಿಜ್ಞೆ ಮಾಡುತ್ತೇನೆ" ಎನ್ನುವ ಪ್ರತಿಜ್ಞಾ ವಿಧಿಯನ್ನು ಜಿಲ್ಲಾ ಮಟ್ಟದ ವಿವಿಧ ಇಲಾಖೆಯ ಅಧಿಕಾರಿ ಮತ್ತು ಸಿಬ್ಬಂದಿಗಳಿಗೆ ಬೋಧಿಸಿದರು.

ಈ ಸಂದರ್ಭದಲ್ಲಿ ವಿವಿಧ ಇಲಾಖೆಗಳ ಹಾಗೂ ಜಿಲ್ಲಾಧಿಕಾರಿ ಕಛೇರಿಯ ಅಧಿಕಾರಿ, ಸಿಬ್ಬಂದಿ ಉಪಸ್ಥಿತರಿದ್ದರು.

# ಮರು ವಿನ್ಯಾಸಗೊಳಿಸಲಾದ ಹವಾಮಾನ ಆಧಾರಿತ ಬೆಳೆ ವಿಮೆ ಯೋಜನೆಯಡಿ ನೋಂದಣಿ ಅವಧಿ ವಿಸ್ತರಣೆ

ಬಳ್ಳಾರಿ,ಆ.21–ಲ್ಲೆಯಲ್ಲಿ ಪ್ರಸ್ತಕ ಸಾಲಿಗೆ ಮುಂಗಾರು ಹಂಗಾಮು ಅವಧಿಗೆ ಮರು ವಿನ್ಯಾಸಗೊಳಿಸಲಾದ ಹವಾಮಾನ ಆಧಾರಿತ ಬೆಳೆ ವಿಮೆ ಯೋಜನೆಗೆ ಈಗಾಗಲೇ ನೋಂದಣಿ ಪ್ರಕ್ರಿಯೆ ಪ್ರಾರಂಭವಾಗಿದ್ದು, ಬೆಳೆಗಳ ವಿಮೆ ನೋಂದಾಣಿಯನ್ನು ಆಗಸ್ಟ್ 30 ರವರೆಗೆ ವಿಸ್ತರಿಸಲಾಗಿದೆ ಎಂದು ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು ತಿಳಿಸಿದ್ದಾರೆ.

ರೈತರು ಪ್ರಸಕ್ತ ಸಾಲಿನ ಪಹಣಿ ಪತ್ರಿಕೆ, ಎಫ್‌ಐಡಿ ಸಂಖ್ಯೆ, ಆಧಾರ್ ಕಾರ್ಡ್ ಹಾಗೂ ಬ್ಯಾಂಕ್ ಪಾಸ್ ಪುಸಕ್ತದ ಪ್ರತಿಯೊಂದಿಗೆ ಹತ್ತಿರದ ಗ್ರಾಮ ಒನ್ ಕೇಂದ್ರ ಅಥವಾ ಬ್ಯಾಂಕ್ ಗಳಲ್ಲಿ ಅಥವಾ ಸಿ.ಎಸ್.ಸಿ ಕೇಂದ್ರಗಳಲ್ಲಿ ವಿಮಾ ಯೋಜನೆಗೆ ನೋಂದಾಯಿಸಿಕೊಳ್ಳಬಹುದು.

ಬೆಳೆ ಸಾಲ ಪಡೆಯುವ ಮತ್ತು ಬೆಳೆ ಸಾಲ ಪಡೆಯದ ರೈತರಿಗೆ ವಿಮಾ ಮೊತ್ತವು ಹಾಗೂ ಪಾವತಿಸಬೇಕಾದ ವಿಮಾ ಕಂತಿನ ಮೊತ್ತವು ಒಂದೇ ಆಗಿರುತ್ತದೆ. ನೋಂದಣಿ ಮಾಡಲು ಉದ್ದೇಶಿಸಿರುವ ಬೆಳೆಯು ಹಿಂದಿನ ವರ್ಷಗಳ/ಋತುಗಳ (ಮುಂಗಾರಿನ) ಬೆಳೆ ಸಮೀಕ್ಷೆಯಲ್ಲಿ ಕಂಡುಬರದಿದ್ದರೆ ನೋಂದಣಿಗೆ ಅನುಮತಿ ಇರುವುದಿಲ್ಲ.

ಮರು ವಿನ್ಯಾಸಗೊಳಿಸಿದ ಹವಾಮಾನ ಆಧಾರಿತ ಬೆಳೆ ವಿಮಾ ಯೋಜನೆಯನ್ನು ಅನುಷ್ಠಾನಗೊಳಿಸಲು ಬಳ್ಳಾರಿ ಜಿಲ್ಲೆಗೆ ಎಸ್.ಬಿ.ಐ ಇನ್ಸುರೆನ್ಸ್ ಕಂಪನಿಯು ವಿಮಾ ಸಂಸ್ಥೆಯಾಗಿದೆ.

ಹವಾಮಾನ ಅಂಶಗಳಾದ ಮಳೆ ಪ್ರಮಾಣ, ಗಾಳಿಯ ವೇಗ ಇತ್ಯಾದಿ ಮಾಹಿತಿಗಳನ್ನು ಸ್ಥಳೀಯವಾಗಿ ಲಭ್ಯವಿರುವ ಟೆಲಿ ಮೆಟ್ರಿಕ್ ಮಳೆಮಾಪನ ಕೇಂದ್ರಗಳಲ್ಲಿ ದಾಖಲಿಸುವ ಅಂಶಗಳ ಆಧಾರದ ಮೇಲೆ ಬೆಳೆ ವಿಮೆ ನಷ್ಟವನ್ನು ತೀರ್ಮಾನಿಸಲಾಗುತ್ತದೆ.

ವಿಮಾ ಯೋಜನೆಯಡಿ ಒಳಪಡುವ ಬೆಳೆಗಳು ಹಸಿ ಮೆಣಸಿನಕಾಯಿ ಮತ್ತು ದಾಳಿಂಬೆ ಬೆಳೆಗಳಾಗಿವೆ.

ಬಳ್ಳಾರಿ ತಾಲ್ಲೂಕಿನ ಬಳ್ಳಾರಿ, ಮೋಕಾ, ರೂಪನಗುಡಿ, ಕುರುಗೋಡು ತಾಲ್ಲೂಕಿನ ಕುರುಗೋಡು, ಕೋಳೂರು ಮತ್ತು ಕಂಪ್ಲಿ ತಾಲ್ಲೂಕುಗಳ ಎಲ್ಲಾ ಗ್ರಾಮ ಪಂಚಾಯಿತಿಗಳು ವಿಮೆಗೆ ಒಳಪಡುವ ಪ್ರದೇಶಗಳಾಗಿದ್ದು, ಹಸಿಮೆಣಸಿನಕಾಯಿ ಬೆಳೆಗೆ ಪ್ರತಿ ಹೆಕ್ಟರ್‌ಗೆ ವಿಮಾ ಮೊತ್ತ ರೂ.71 ಸಾವಿರ ಹಾಗೂ ರೈತರು ಪಾವತಿಸಬೇಕಾದ ವಿಮಾ ಕಂತಿನ ದರ ರೂ.3550 ಆಗಿರುತ್ತದೆ.

ದಾಳಿಂಬೆ ಬೆಳೆಗೆ ಪ್ರತಿ ಹೆಕ್ಟರ್‌ಗೆ ವಿಮಾ ಮೊತ್ತ 1 ಲಕ್ಷ 27 ಸಾವಿರ ಹಾಗೂ ರೈತರು ಪಾವತಿಸಬೇಕಾದ ವಿಮಾ ಕಂತಿನ ದರ ರೂ.6,350 ಆಗಿರುತ್ತದೆ.

ಹೆಚ್ಚಿನ ಮಾಹಿತಿಗಾಗಿ ಬಳ್ಳಾರಿ ಮತ್ತು ಕುರುಗೋಡು, ಕಂಪ್ಲಿ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರ(ಜಿಪಂ) ದೂ: 08392–278177 ಹಾಗೂ ಮೊ. 9448511649, ಬಳ್ಳಾರಿ ತಾಲ್ಲೂಕು ಸಹಾಯಕ ತೋಟಗಾರಿಕೆ ನಿರ್ದೇಶಕರ ಮೊ.8095367328, ಬಳ್ಳಾರಿ ರೈತ ಸಂಪರ್ಕ ಕೇಂದ್ರ ಸಹಾಯಕ ತೆ–ೂೕಟಗಾರಿಕೆ ಅಧಿಕಾರಿ ಮೊ.9742966767, ಸಹಾಯಕ ತೋಟಗಾರಿಕೆ ಅಧಿಕಾರಿ ರೈತ ಸಂಪರ್ಕ ಕೇಂದ್ರ ರೂಪನಗುಡಿ ಮೊ.8095088837, ಸಹಾಯಕ ತೆ–ೂೕಟಗಾರಿಕೆ ಅಧಿಕಾರಿ ರೈತ ಸಂಪರ್ಕ ಕೇಂದ್ರ ಮೋಕಾ ಮೊ.9901921073, ಸಹಾಯಕ ತೋಟಗಾರಿಕೆ ಅಧಿಕಾರಿ ರೈತ ಸಂಪರ್ಕ ಕೇಂದ್ರ ಕುರುಗೋಡು ಮೊ.9740775129, ಸಹಾಯಕ ತೋಟಗಾರಿ–ಕೆ ಅಧಿಕಾರಿ ರೈತ ಸಂಪರ್ಕ ಕೇಂದ್ರ ಕೋಳೂರು ಮೊ.9108168056, ಸಹಾಯಕ ತೋಟಗಾರಿಕೆ ಅಧಿಕಾರಿ ರೈತ ಸಂಪರ್ಕ ಕೇಂದ್ರ ಕಂಪ್ಲಿ ಮೊ.9901921073 ಗೆ ಸಂಪರ್ಕಿಸಬಹುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಆಯುರ್ವೇದ ಕಾಲೇಜಿನ ನೂತನ ಕಟ್ಟಡದಲ್ಲಿ ಪೂಜೆ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಆ.21–ನಗರದ ಬಿವಿವಿಎಸ್ ಯೋಗ ಮತ್ತು ಪ್ರಕೃತಿ ಚಿಕಿತ್ಸಾ ವೈದ್ಯಕೀಯ ಮಹಾವಿದ್ಯಾಲಯ ಮತ್ತು ಆಸ್ಪತ್ರೆ ಹಾಗೂ ಬಿವಿವಿಎಸ್ ಆಯುರ್ವೇದ ವೈದ್ಯಕೀಯ ಮಹಾವಿದ್ಯಾಲಯದ ನೂತನ ಕಟ್ಟಡದಲ್ಲಿ ವಾಸ್ತು ಶಾಂತಿ, ನವಗ್ರಹ ಹೋಮ, ಧನ್ವಂತರಿ ಹೋಮ ಮತ್ತು ಸತ್ಯನಾರಾಯಣ ಪೂಜಾ ಸಮಾರಂಭ ಜರುಗಿತು.

ಪೂಜೆಯಲ್ಲಿ ಭಾಗವಹಿಸಿ ಮಾತನಾಡಿದ ಬಿ.ವಿ.ವಿ.ಸಂಘ ಸಂಘದ ಕಾರ್ಯಾಧ್ಯಕ್ಷ ವೀರಣ್ಣ ಚರಂತಿಮಠ, 2025–26 ನೇ ಸಾಲಿನ ಶೈಕ್ಷಣಿಕೆ ವರ್ಷದಿಂದ ನ್ಯಾಚುರಪತಿ ಹಾಗೂ ಯೋಗವೈದ್ಯಕೀಯ ಮಹಾವಿದ್ಯಾಲಯ ಹಾಗೂ ಆಸ್ಪತ್ರೆ ನೂತನ ಕಟ್ಟಡದಲ್ಲಿ ಪ್ರಾರಂಭವಾಗುತ್ತಿವೆ. ಇದು ಸಂಘದ ಮತ್ತೊಂದು ಮೈಲುಗಲ್ಲಾಗಿದೆ ಎಂದರು.

ಮಹಾವಿದ್ಯಾಲಯದಲ್ಲಿ ಡಿಜಿಟಲ್ ಕ್ಲಾಸ್ ರೂಮ್, ಲೈಬ್ರೇರ್ರಿ, ಲ್ಯಾಭ್ರೋಟಿಸ್, ಯೋಗಾ ಹಾಲ್, ಪ್ಲೇಗ್ರೌಂಡ್ ಹಾಗೂ ವಿದ್ಯಾರ್ಥಿ ಮತ್ತು ವಿದ್ಯಾರ್ಥಿನಿಯರಿಗೆ ಪ್ರತ್ಯೇಕ ಊಟ ಮತ್ತು ವಸತಿ ಸೌಲಭ್ಯವಿದೆ. ಮಹಾವಿದ್ಯಾಲಯದೊಂದಿಗೆ ತಜ್ಞ ವೈದ್ಯರನ್ನು ಒಳಗೊಂಡ ಹೊಸ ಸುಸಜ್ಜಿತ ಆಸ್ಪತ್ರೆ, ಅಲ್ಲಿ ಜಲ ಚಿಕಿತ್ಸೆ, ಸೂಜಿ ಚಿಕಿತ್ಸೆ, ಮಣ್ಣಿನ ಚಿಕಿತ್ಸೆ ,ಅಕ್ಯುಪಂಕಚರ್, ಯೋಗ ಉಪವಾಸ ಚಿಕಿತ್ಸೆ, ಕ್ರೋಮೋ ಮತ್ತು ಮ್ಯಗ್ನೆಟಿಕ್ ಥೆರಪಿ ಪಿಜಿಯೋಥೆರಪಿ ಸೇರಿದಂತೆ ವಿವಿಧ ಪ್ರಕೃತಿ ಚಿಕಿತ್ಸಾ ಪದ್ದತಿಗಳು ಲಭ್ಯವಿದ್ದು, ಸಾರ್ವಜನಿಕರು ಇವುಗಳು ಉಪಯೋಗವನ್ನು ಪಡೆದುಕೊಳ್ಳಬೇಕು ಎಂದು ಚರಂತಿಮಠ ಹೇಳಿದರು.

ಗೌರವ ಕಾರ್ಯದರ್ಶಿ ಮಹೇಶ ಅಥಣಿ, ಫಾರ್ಮಸಿ, ಆಯುರ್ವೇದ, ಹೋಮಿಯೋಪಥಿ, ನ್ಯಾಚರೋಪಥಿ ಕಾಲೇಜುಗಳ ಆಡಳಿತ ಮಂಡಳಿ ಕಾರ್ಯಾಧ್ಯಕ್ಷ ಮಲ್ಲಿಕಾರ್ಜುನ ಸಾಸನೂರ, ಗುರುಬಸವ ಸೂಳಿಭಾವಿ, ಅಶೋಕ ಸಜ್ಜನ ಬೇವೂರ, ಮಹಾಂತೇಶ ಶೆಟ್ಟರ, ಮಹೇಶ ಕಕರೆಡ್ಡಿ, ಕುಮಾರಸ್ವಾಮಿ ಹಿರೇಮಠ, ಸಂಘದ ಎಲ್ಲ ಸದಸ್ಯರು, ಪ್ರಾಚಾರ್ಯ ಡಾ.ಎಂ.ಎಸ್.ಹಿರೇಮಠ, ಡಾ.ಆರ್.ಆಯ್.ಜಂಬಗಿ, ಡಾ.ವಿ.ಎಸ್.ಚೌದರಿ, ಪಿ.ಅರ್.ದೇಪಾಂಡೆ, ಡಾ.ಎಸ್.ಎಸ್.ಸಾರವಾಡ, ಡಾ.ಪಿ.ಎಸ್.ಪೋಲೀಸಪಾಟೀಲ ಸೇರಿದಂತೆ ಅನೇಕರು ಭಾಗವಹಿಸಿದ್ದರು,

# ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ:ಆಗಸ್ಟ21–ಗ್ರಾಮೀಣ ಕ್ರೀಡೆಗಳ ಉತ್ತೇಜನಕ್ಕಾಗಿ ಬಾಗಲಕೋಟೆ ಜಿಲ್ಲೆಯಲ್ಲಿರುವ ಸಂಘ–ಸಂಸ್ಥೆಗಳಿಂದ ಆಯೋಜಿಸಲಾಗುವ ಎತ್ತಿನ ಬಂಡೆ ಓಟ ಸ್ಪರ್ಧೆಗಳಿಗೆ ರಾಜ್ಯ ಸರ್ಕಾರದಿಂದ ಪ್ರೋತ್ಸಾಹಧನವಾಗಿ ಪ್ರತಿ ಸಂಸ್ಥೆಗೆ ರೂ.2.00 ಲಕ್ಷ ಅನುದಾನ ನೀಡಲಾಗುತ್ತಿದೆ.

ಅರ್ಹ ಸಂಘ–ಸಂಸ್ಥೆಗಳು ತಮ್ಮ ಅರ್ಜಿಗಳನ್ನು ಆ.25 ರೊಳಗೆ ಸಲ್ಲಿಸಬೇಕು. ನಿಗದಿತ ದಿನಾಂಕದ ನಂತರ ಸಲ್ಲಿಸಲಾದ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ:08354–235896, 9739722700, 9945284771 ಅನ್ನು ಸಂಪರ್ಕಿಸಬಹುದು ಎಂದು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ: ಆಗಸ್ಟ 21 – 2025–26ನೇ ಸಾಲಿನ ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟಪಂಗಡಗಳ ಅಭಿವೃದ್ಧಿ ನಿಗಮದಿಂದ ಪರಿಶಿಷ್ಟ ಪಂಗಡ ಸಮುದಾಯದ ಆರ್ಥಿಕ ಅಭಿವೃದ್ಧಿಗಾಗಿ ಯೋಜನೆಗಳಿಗೆ ಆನ್ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

ಸ್ವಯಂ ಉದ್ಯೋಗ ನೇರ ಸಾಲ, ಉದ್ಯಮಶೀಲತಾ ಅಭಿವೃದ್ಧಿ ಯೋಜನೆಗಳು, ಹೈನುಗಾರಿಕೆ, ಸ್ವಾವಲಂಬಿ ಸಾರಥಿ ಯೋಜನೆ, ಮೈಕ್ರೋ ಕ್ರೆಡಿಟ್ ಯೋಜನೆ, ಗಂಗಾ ಕಲ್ಯಾಣ ಯೋಜನೆ,ಭೂ ಒಡೆತನ ಯೋಜನೆಗೆ ಅರ್ಜಿ ಆಹ್ವಾನಿಸಲಾಗಿದ್ದು, ಸೆಪ್ಟೆಂಬರ್ 17 ರೊಳಗಾಗಿ ಅರ್ಜಿ ಸಲ್ಲಿಸಬಹುದಾಗಿದೆ. 2023–24 ಮತ್ತು 2024–25ನೇ ಸಾಲಿನಲ್ಲಿ ಈಗಾಗಲೇ ಅರ್ಜಿ ಸಲ್ಲಿಸಿರುವ ಮತ್ತೊಮ್ಮೆ ಅರ್ಜಿ ಸಲ್ಲಿಸುವ ಅವಶ್ಯಕತೆಯಿರುವುದಿಲ್ಲ.ಹೊಸದಾಗಿ ಅರ್ಜಿ ಸಲ್ಲಿಸಲು ಇಚ್ಛಿಸುವವರು https://sevasindhu.karnataka.gov.in/ ಅಂತರ್ಜಾಲದಲ್ಲಿ ಮತ್ತು ಗ್ರಾಮ ಒನ್/ ಬೆಂಗಳೂರು ಒನ್/ಕರ್ನಾಟಕ ಒನ್ ಕೇಂದ್ರಗಳಲ್ಲಿ ಅರ್ಜಿ ಸಲ್ಲಿಸಬಹುದಾಗಿದೆ . ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ವ್ಯವಸ್ಥಾಪಕರ ಕಛೇರಿ, ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟಪಂಗಡಗಳ ಅಭಿವೃದ್ಧಿ ನಿಗಮ, ಕೊಠಡಿ ಸಂಖ್ಯೆ 225, ಜಿಲ್ಲಾ ಆಡಳಿತ ಭವನ ನವನಗರ , ಬಾಗಲಕೋಟೆ ಕಛೇರಿಗೆ ಸಂಪರ್ಕಿಸಬಹುದು ಎಂದು ಜಿಲ್ಲಾ ವ್ಯವಸ್ಥಾಪಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಬೀದಿ ನಾಯಿಗಳ ಹಾವಳಿ ತಡೆಗೆ ಕ್ರಮ: ಸಂಗಪ್ಪ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಆ.21–ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಬೀದಿ ನಾಯಿಗಳ ಹಾವಳಿಯಿಂದ ಸಾರ್ವಜನಿಕರಿಗೆ ಹಾಗೂ ಮಕ್ಕಳಿಗೆ ತೊಂದರೆಯಾಗುತ್ತಿದ್ದು, ಅವುಗಳ ಹತೋಟಿಗೆ ಕ್ರಮಕೈಗೊಳ್ಳುವಂತೆ ಜಿಲ್ಲಾಧಿಕಾರಿ ಸಂಗಪ್ಪ ಅಧಿಕಾರಿಗಳಿಗೆ ಸೂಚಿಸಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಗುರುವಾರ ಬೀದಿ ನಾಯಿಗಳ ಹಾವಳಿ ತಡೆಗಟ್ಟುವ ಕುರಿತು ಜರುಗಿದ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಬೀದಿನಾಯಿಗಳು ಸಣ್ಣ ಮಕ್ಕಳಿಗೆ ಕಚ್ಚಿದ ಪ್ರಕರಣಗಳು ಕಂಡುಬರುತ್ತಿವೆ. ಅಲ್ಲದೇ ರಸ್ತೆಗಳಲ್ಲಿ ವಾಹನಗಳ ಮಧ್ಯೆ ಬರುತ್ತಿರುವುದರಿಂದ ಅಪಘಾತ ಸಂಭವಿಸುತ್ತಿವೆ. ಹೀಗಾಗಿ ನಾಯಿಗಳ ಹಾವಳಿಯನ್ನು ಹತೋಟಿಗೆ ತರಲು ಸಂತಾನಹರಣ ಶಸ್ತ್ರಚಿಕಿತ್ಸೆಗೆ ಮುಂದಾಗಿರುವುದಾಗಿ ಜಿಲ್ಲಾಧಿಕಾರಿಗಳು ತಿಳಿಸಿದರು.

ರೇಬಿಸ್ ಸೋಂಕು ತಗುಲಿ ಕೆರೂರ ಮತ್ತು ಬಾದಾಮಿಯಲ್ಲಿ ತಲಾ ಒಬ್ಬರು ಮೃತಪಟ್ಟಿರುತ್ತಾರೆ. ರೇಬಿಸ್ ಸೋಂಕಿತ ನಾಯಿ ಹಾಗೂ ಅದರಿಂದ ಉಳಿದ ನಾಯಿಗಳಿಗೂ ಸಹ ಸೋಂಕಿತರಾಗುತ್ತಿರುವದರಿಂದ ಬೀದಿ ನಾಯಿಗಳು ಕಚ್ಚಿದ ವ್ಯಕ್ತಿಗೆ ರೇಬಿಸ್ ಹರಡುತ್ತಿರುವದರಿಂದ ಇದನ್ನು ತಡೆಯುವ ಕೆಲಸವಾಗಬೇಕು. ಆದ್ದರಿಂದ ಜಿಲ್ಲೆಯಲ್ಲಿರುವ ಬೀದಿ ನಾಯಿಗಳನ್ನು ಕಡಿಮೆ ಮಾಡುವ ನಿಟ್ಟಿನಲ್ಲಿ ಅವುಗಳನ್ನು ಸಂತಾಹರಣ ಶಸ್ತ್ರಚಿಕಿತ್ಸೆಗೆ ಒಳಪಡಿಸಲು ಕ್ರಮಕೈಗೊಳ್ಳುವ ಅಗತ್ಯವಿದೆ ಎಂದರು.

20ನೇ ಗಣತಿ ಪ್ರಕಾರ ಜಿಲ್ಲೆಯಲ್ಲಿ ಒಟ್ಟು 4937 ಬೀದಿನಾಯಿಗಳ ಗುರುತಿಸಿದ್ದು, ಅದರಲ್ಲಿ ಬಾಗಲಕೋಟೆ ತಾಲೂಕಿನಲ್ಲಿ 1550, ಬಾದಾಮಿ 481, ಹುನಗುಂದ 700, ಬೀಳಗಿ 97, ಗುಳೇದಗುಡ್ಡ 590, ಜಮಖಂಡಿ 219, ಮುಧೋಳ 406, ಇಲಕಲ್ಲ 212 ಹಾಗೂ ರಬಕವಿ–ಬನಹಟ್ಟಿ ತಾಲೂಕಿನಲ್ಲಿ 682 ಬೀದಿ ನಾಯಿಗಳು ಇದ್ದು, ಅವುಗಳನ್ನು ಹಂತ ಹಂತವಾಗಿ ಸಂತಾಹಹರಣ ಶಸ್ತ್ರಚಿಕಿತ್ಸೆಗೆ ಒಳಪಡಿಸಲು ಎಲ್ಲ ರೀತಿಯ ಕ್ರಮಕೈಗೊಳ್ಳುವಂತೆ ಜಿಲ್ಲಾ ಪಾಲಿಕ್ಲಿನಿಕ್‌ನ ಉಪನಿರ್ದೇಶಕ ಡಾ.ಹೊಳೆಪ್ಪಗೋಳ ಅವರಿಗೆ ಜಿಲ್ಲಾಧಿಕಾರಿಗಳು ಸೂಚನೆ ನೀಡಿ, ವಾರದಲ್ಲಿ ಎರಡು ದಿನ ಶಸ್ತ್ರಚಿಕಿತ್ಸೆ ಕಾರ್ಯ ಮಾಡಲು ತಿಳಿಸಿದರು.

ವಿದ್ಯಾಗಿರಿಯ ಕೆಲವು ಎನ್‌ಜಿಓಗಳು ಸ್ವಯಂ ಪ್ರೇರಿತವಾಗಿ ಈ ಕಾರ್ಯಕ್ಕೆ ಕೈಜೋಡಿಸುತ್ತಿದ್ದು, ನಗರದಲ್ಲಿ ಶಸ್ತ್ರಚಿಕಿತ್ಸೆಗೆ ಸೂಚಿಸಿದ ಸ್ಥಳಕ್ಕೆ ನಗರದಲ್ಲಿರುವ ಬೀದಿನಾಯಿಗಳನ್ನು ಕರೆದುಕೊಂಡು ಬರುವ ಕಾರ್ಯ ಮಾಡಲಿದ್ದಾರೆ. ಈಗಾಗಲೇ ಮುಧೋಳ ಮತ್ತು ಜಮಖಂಡಿಯಲ್ಲಿ ಈ ಕಾರ್ಯ ನಡೆಯುತ್ತಿದ್ದು, ಬಾಗಲಕೋಟೆ ನಗರದಲ್ಲಿ ವ್ಯವಸ್ಥಿತವಾಗಿ ಮಾಡಲು ತಿಳಿಸಿದರು.

ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಶಶಿಧರ ಕುರೇರ ಬೀದಿ ನಾಯಿಗಳಿಂದ ಸಾರ್ವಜನಿಕರಿಗೆ ತೊಂದರೆ–ಯಾಗುತ್ತಿದ್ದು, ಸಂತಾನಹರಣ ಶಸ್ತ್ರಚಿಕಿತ್ಸೆ ವ್ಯವಸ್ಥಿತವಾಗಿ ಮಾಡಬೇಕು. ಸದ್ಯ ಪಾಲಿಕ್ಲಿನಿಕ್‌ನಲ್ಲಿದ್ದ ಪಶು ವೈದ್ಯರನ್ನು ಬಳಸಿಕೊಂಡು ವಾರದಲ್ಲಿ ಎರಡು ದಿನ ಎಷ್ಟು ಸಾಧ್ಯವೋ ಅಷ್ಟು ಬೀದಿ ನಾಯಿಗಳಿಗೆ ಚಿಕಿತ್ಸೆಗೆ ಒಳಪಡಿಸುವ ಕಾರ್ಯವಾಗಬೇಕು ಎಂದು ತಿಳಿಸಿದರು.

ಸಭೆಯಲ್ಲಿ ಪಶುಪಾಲನಾ ಇಲಾಖೆಯ ಉಪನಿರ್ದೇಶಕ ಎಸ್.ಎಚ್.ಕರಡಿಗುಡ್ಡ, ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕರ ಸುರುಖೋಡ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಮಂಜುನಾಥ ಡಿ, ನಗರಸಭೆ ಪೌರಾಯುಕ್ತ ವಾಸಣ್ಣ ಆರ್ ಸೇರಿದಂತೆ ವಿವಿಧ ಎನ್‌ಜಿಓಗಳ ಪ್ರತಿನಿಧಿಗಳಾದ ಶ್ವೇತಾ ಹೊಸಗೌಡರ, ಸುಮಂಗಲಾ ಹದ್ಲಿ, ನಾಗರಾಜ ಹದ್ಲಿ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಪುಸ್ತಕ ಪ್ರದರ್ಶನ ಆಕ್ಷೇಪಣೆ ಸಲ್ಲಿಕೆ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ:ಆಗಸ್ಟ21–2022ರಲ್ಲಿ ಪ್ರಥಮ ಮುದ್ರಣವಾಗಿ ಪ್ರಕಟಗೊಂಡು ರಾಜ್ಯಮಟ್ಟದ ಆಯ್ಕೆ ಸಮಿತಿಯಿಂದ ಆಯ್ಕೆಯಾದ ಹಾಗೂ ಆಯ್ಕೆಯಾಗದ ಪುಸ್ತಕಗಳ ಪ್ರದರ್ಶನವನ್ನು ಆಗಸ್ಟ 20 ರಿಂದ ಆಗಸ್ಟ 22ರವರೆಗೆ ಬೆಳಗ್ಗೆ 10 ರಿಂದ ಸಂಜೆ 5.30 ರವರೆಗೆ ಬೆಂಗಳೂರು ವಿಜಯನಗರದ ಡಾ. ವಿಷ್ಣುವರ್ಧನ್ ಸ್ಪರ್ಧಾತ್ಮಕ ಪರೀಕ್ಷಾ ಅಧ್ಯಯನ ಕೇಂದ್ರದಲ್ಲಿ ಏರ್ಪಡಿಸಲಾಗಿದೆ. ತಾತ್ಕಾಲಿಕ ಆಯ್ಕೆ ಪಟ್ಟಿ ಜಿಲ್ಲೆ, ನಗರ ಕೇಂದ್ರ ಗ್ರಂಥಾಲಯಗಳಲ್ಲಿ ಹಾಗೂ dpl.karnataka.gov.in ಜಾಲತಾಣದಲ್ಲಿ ಲಭ್ಯವಿದೆ. ಬಾಗಲಕೋಟೆ ಜಿಲ್ಲೆಯ ಲೇಖಕರು, ಪ್ರಕಾಶಕರು, ವಿತರಕರು, ಮಾರಾಟಗಾರರು ಯಾವುದೇ ಆಕ್ಷೇಪಣೆಗಳನ್ನು ಆ.30 ಸಂಜೆ 5.30ರೊಳಗೆ ಸಾರ್ವಜನಿಕ ಗ್ರಂಥಾಲಯ ಇಲಾಖಾ ಆಯುಕ್ತರಿಗೆ ಲಿಖಿತವಾಗಿ ಸಲ್ಲಿಸಬಹುದು ಎಂದು ಜಿಲ್ಲಾ ಕೇಂದ್ರ ಗ್ರಂಥಾಲಯ ಪ್ರಕಟಣೆ ತಿಳಿಸಿದೆ.

# ಡಿ. ದೇವರಾಜ ಅರಸರು ಬಡವ, ಶೋಷಿತರ ಧ್ವನಿ : ಲಕ್ಷ್ಮಣ ತೂರೆ



ಮಲ್ಲಮ್ಮ ನುಡಿ ವಾರ್ತೆ

ಔರಾದ(ಬಾ) : ನಗರದ ಹೃದಯಭಾಗದಲ್ಲಿರುವ ನಾಲಂದಾ ಕಲಾ, ವಾಣಿಜ್ಯ ಮತ್ತು ವಿಜ್ಞಾನ ಸಂಯುಕ್ತ ಪದವಿ ಪೂರ್ವ ಮಹಾವಿದ್ಯಾಲಯ ಹಾಗೂ ನಾಲಂದಾ ಪ್ರೌಢ ಶಾಲೆಯಲ್ಲಿ ಇಂದು ಕರ್ನಾಟಕದ ನಿರ್ಮಾಪಕ, ಹಿಂದುಳಿದ ವರ್ಗಗಳ ನಾಯಕ, ಕ್ರಾಂತಿಕಾರಿ ನಾಯಕ ಮತ್ತು ಮಾಜಿ ಮುಖ್ಯಮಂತ್ರಿ ಡಿ. ದೇವರಾಜ ಅರಸುರವರ ಜಯಂತ್ಯೋತ್ಸವವು ಜರುಗಿತು.

ಕಾರ್ಯಕ್ರಮಕ್ಕೆ ಮುಖ್ಯ ಅತಿಥಿ–ಯಾಗಿ ಆಗಮಿಸಿದ ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆ(ಡಯಟ) ನೌಬಾದ, ಬೀದರನಲ್ಲಿ ಹಿಂದಿ ಭಾಷಾ ಪರಿವೀಕ್ಷಕರಾಗಿ ಸೇವೆ ಸಲ್ಲಿಸುತ್ತಿರುವ ಶ್ರೀ ಲಕ್ಷ್ಮಣರಾಂವ ತೂರೆಯವರು ಡಿ. ದೇವರಾಜ ಅರಸುರವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿದ ಬಳಿಕ ಮಾತನಾಡುತ್ತಾ ಸ್ವಾತಂತ್ರ್ಯ ಪಡೆದ ನಂತರ ದೇಶದಲ್ಲಿ ನಡೆದ ಮೊದಲ ಚುನಾವಣೆಗಳಲ್ಲಿ ಸ್ಪರ್ಧಿಸುವ ಮೂಲಕ ರಾಜಕೀಯ ಪ್ರವೇಶಿಸಿದ ಡಿ. ದೇವರಾಜ್ ಅರಸುರವರು ಒಬ್ಬ ಸಮಾಜ ಸುಧಾರಕರಾಗಿದ್ದುಕೊಂಡು, ಬಡವರ ಪರವಾಗಿ ಹೋರಾಡಿದರು ಮತ್ತು ಕರ್ನಾಟಕದಲ್ಲಿ 'ಮೌನ ಸಾಮಾಜಿಕ ಕ್ರಾಂತಿ'ಗೆ ನಾಂದಿ ಹಾಡಿದರು. ಅವರು ಕೇವಲ ಬಡವರ ಧ್ವನಿಯಾಗಿರುವುದಲ್ಲದೆ, ಡಿ. ದೇವರಾಜ ಅರಸುರವರು ಕರ್ನಾಟಕದ ಮಾಜಿ ಮುಖ್ಯಮಂತ್ರಿಯಾಗಿ 1972 ರಿಂದ 1977 ಮತ್ತು 1978 ರಿಂದ 1980 ರವರೆಗೆ ಎರಡು ಬಾರಿ ಸೇವೆ ಸಲ್ಲಿಸಿದರು. ಅವರ ಅಧಿಕಾರಾವಧಿಯಲ್ಲಿ, ಅವರು ಭೂ ಸುಧಾರಣೆ ಕಾಯ್ದೆ, ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ ಸ್ಥಾಪನೆ ಮುಂತಾದ ಮಹತ್ವದ ಯೋಜನೆಗಳನ್ನು ಜಾರಿಗೆ ತಂದಿರುವುದರಿಂದ ರಾಜ್ಯದ ಸಾಮಾಜಿಕ ಮತ್ತು ಆರ್ಥಿಕ ಭೂಪಟವನ್ನು ಬದಲಾಯಿಸಲು ಕಾರಣವಾಯಿತು ಎಂದರು.

ಅರಸು ಅವರ ಮುಖ್ಯ ಕೊಡುಗೆಗಳಲ್ಲಿ ಒಂದಾದ 'ಉಳುವವನಿಗೆ ಭೂಮಿ' ಎನ್ನುವ ಘೋಷಣೆಯೊಂದಿಗೆ ಜಾರಿಗೆ ತಂದ ಭೂ ಸುಧಾರಣೆ ಕಾಯ್ದೆಯು ಜಮೀನುದಾರರ ಹಿಡಿತದಲ್ಲಿದ್ದ ಭೂಮಿಯನ್ನು ಸಾಗುವಳಿದಾರರಿಗೆ ಹಸ್ತಾಂತರಿಸುವ ಮೂಲಕ ರೈತರ ಜೀವನವನ್ನು ಸುಧಾರಿಸಿತು. ಹಿಂದುಳಿದ ವರ್ಗಗಳ ಅಭಿವೃದ್ಧಿಗಾಗಿ ಡಿ. ದೇವರಾಜ ಅರಸರು ಒಂದು ಪ್ರತ್ಯೇಕ ನಿಗಮವನ್ನು ಸ್ಥಾಪಿಸಿದರು, ಅದು ಇಂದಿಗೂ ಹಿಂದುಳಿದ ವರ್ಗಗಳ ಅಭಿವೃದ್ಧಿಗೆ ಶ್ರಮಿಸಿರುವುದನ್ನ ತೂರೆ ಸ್ಮರಿಸಿದರು.

ಈ ಸಂದರ್ಭದಲ್ಲಿ ನಾಲಂದಾ ಮಹಾವಿದ್ಯಾಲಯದ ಪ್ರಾಂಶುಪಾಲ ಡಾ. ಮನ್ಮಥ ಡೋಳೆ ಹಾಗೂ ಪ್ರೌಢ ಶಾಲೆಯ ಸಹಶಿಕ್ಷಕರಾದ ಶ್ರೀ ದಿಲೀಪಕುಮಾರ. ಎನ್.ಮೇತ್ರೆ, ಪರಮೇಶ್ವರ.ಬಿ.ಬಿರಾದಾರ, ಸಹಶಿಕ್ಷಕಿಯರಾದ ಪ್ರೀಯಾ. ಎಮ್.ಬಿರಾದಾರ, ಜ್ಯೋತಿ.ಡಿ.ಘೂಳೆ, ಮುಂಡೆ ಜ್ಞಾನೇಶ್ವರಿ.ಎಸ್ ಮತ್ತು ಕಾಲೇಜಿನ ಉಪನ್ಯಾಸಕರು ಸೇರಿದಂತೆ ಬೋಧಕೇತರ ಸಿಬ್ಬಂಧಿ ವರ್ಗದವರು ಉಪಸ್ಥಿತರಿದ್ದರು. ಶಿಕ್ಷಕರಾದ ಸಿದ್ಧಾರ್ಥ. ಜೆ.ಕಾಂಬಳೆಯವರು ಕಾರ್ಯಕ್ರಮವನ್ನ ನಿರೂಪಿಸಿ, ವಂದಿಸಿದರು. ಮಕ್ಕಳು ಹಾಜರಿದ್ದರು.

# ಸ್ಕೌಟ್ಸ್, ಗೈಡ್ಸ್ ಸೇವಾ ಮನೋಭಾವ ಬೆಳೆಸುತ್ತವೆ: ಪ್ರಮೋದ್



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಆ.21–ಯುವ ಸಮೂಹದಲ್ಲಿ ಶಿಸ್ತು, ಸೇವೆ ಮಾಡುವ ಮನೋಭಾವವನ್ನು ಭಾರತ ಸ್ಕೌಟ್ಸ್ ಮತ್ತು ಗೈಡ್ಸ್ ಬೆಳೆಸುತ್ತವೆ. ಆರೋಗ್ಯಕರ ಸಮಾಜ ನಿರ್ಮಾಣದಲ್ಲಿ ನಮ್ಮ ಭಾರತ ಸ್ಕೌಟ್ಸ ಮತ್ತು ಗೈಡ್ಸ್ ಘಟಕಗಳ ರೋವರ್ಸ್ ಮತ್ತು ರೇಂಜರ್‌ಗಳ ಕೊಡುಗೆ ಅಪಾರ ಎಂದು ಭಾರತ ಸ್ಕೌಟ್ಸ್ ಮತ್ತು ಗೈಡ್ಸ್ ಜಿಲ್ಲಾ ಸಂಘಟಕರಾದ ಪ್ರಮೋದ್ ಚೌಗಲೆ ಹೇಳಿದರು.

ಬಾಗಲಕೋಟೆ ನವನಗರದ ಸರಕಾರಿ ಪ್ರಥಮ ದರ್ಜೆ ಕಾಲೇಜಿನ ಭಾರತ ಸ್ಕೌಟ್ಸ್ ಮತ್ತು ಗೈಡ್ಸ್ ಘಟಕಗಳ ಆಶ್ರಯದಲ್ಲಿ ಹಮ್ಮಿಕೊಂಡಿದ್ದ ವಿಶ್ವ ಸ್ಕಾರ್ಫ್ ದಿನಾಚರಣೆ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಮಾತನಾಡಿದ ಅವರು, ಸಮಾಜದಲ್ಲಿ ಸೇವಾ ಮನೋಭಾವ ಕುರಿತು ಅರಿವು ಮೂಡಿಸಿ, ಮನಸ್ಸುಗಳ ಪರಿವರ್ತಿಸುವ ಕೆಲಸ ಮಾಡಿ, ಉತ್ತಮ ಸಮಾಜ ನಿರ್ಮಾಣಕ್ಕೆ ಭಾರತ ಸ್ಕೌಟ್ಸ್ ಮತ್ತು ಗೈಡ್ಸ್ ಘಟಕಗಳ ರೋವರ್ಸ್ ಮತ್ತು ರೇಂಜರ್ಸ್ ಕಾರ್ಯವನ್ನು ಮಾಡುವ ಮೂಲಕ ಭಾರತ ಸ್ಕೌಟ್ಸ್ ಆಂಡ್ ಗೈಡ್ಸ್ ವಿಶ್ವ ಮಟ್ಟದಲ್ಲಿ ಬೆಳೆದಿದೆ ಎಂದು ಹೇಳಿದರು.

ಇನ್ನೋರ್ವ ಮುಖ್ಯ ಅತಿಥಿ ಭಾರತ ಸ್ಕೌಟ್ಸ್ ಮತ್ತು ಗೈಡ್ಸ್ ಜಿಲ್ಲಾ ಶಿಕ್ಷಕ ಘಟಕದ ಸಂಚಾಲಕ ನಾರಾಯಣ ಯಳ್ಳಿಗುತ್ತಿ ಮಾತನಾಡಿ, ಭಾರತ ಸ್ಕೌಟ್ಸ್ ಮತ್ತು ಗೈಡ್ಸ್ ಘಟಕಗಳು ವಿದ್ಯಾರ್ಥಿಗಳಲ್ಲಿ ಮಾನವೀಯ ಮೌಲ್ಯಗಳನ್ನು ಬೆಳೆಸಿ, ಸಮಾಜದಲ್ಲಿ ಆದರ್ಶ ವ್ಯಕ್ತಿಗಳನ್ನಾಗಿ ರೂಪಿಸುತ್ತವೆ ಎಂದು ಹೇಳಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಪ್ರಾಚಾರ್ಯ ಡಾ.ಅರುಣಕುಮಾರ ಗಾಳಿ, ಸ್ಕೌಟ್ಸ್ ಮತ್ತು ಗೈಡ್ಸ್ ವಿದ್ಯಾರ್ಥಿಗಳಲ್ಲಿ ಬೌದ್ಧಿಕ ಮತ್ತು ಭೌತಿಕ ಸಾಮಾರ್ಥ್ಯದ ಗುಣಮಟ್ಟವನ್ನು ಹೆಚ್ಚಿಸುತ್ತವೆ ಇದ–ರಿಂದ ರೋವರ್ಸ್ ರೇಂಜರ್ಸ್‌ಗಳು ತಮ್ಮ ಬದುಕಿನಲ್ಲಿ ಮಾನವೀಯ ಮೌಲ್ಯಗಳನ್ನು ಬೆಳೆಸಿಕೊಳ್ಳಲು ಸಾಧ್ಯವಾಗುತ್ತದೆ ಎಂದು ಹೇಳಿದರು.

ವೇದಿಕೆಯಲ್ಲಿ ಕಾಲೇಜಿನ ರೇಂಜರ್ಸ್ ಘಟಕದ ಲೀಡರ್ ಡಾ.ಸುಮಂಗಲಾ ಮೇಟಿ, ರೋವರ್ಸ ಘಟಕದ ಲೀಡರ್ ಪರಸಪ್ಪ ತಳವಾರ, ಡಾ.ಚಂದ್ರಶೇಖರ ಕಾಳನ್ನವರ ಉಪಸ್ಥಿತರಿದ್ದರು. ವಿಶ್ವ ಸ್ಕಾರ್ಫ್ ದಿನಾಚರಣೆ ಅಂಗವಾಗಿ ಪ್ರಬಂಧ ಸ್ಪರ್ಧೆ ಏರ್ಪಡಿಸಲಾಗಿತ್ತು. ವಿಜೇತ ವಿದ್ಯಾರ್ಥಿಗಳಿಗೆ ಪ್ರಶಸ್ತಿ ನೀಡಲಾಯಿತು.

# ಮೆಡಿಕಲ್ ಕಾಲೇಜ ಶಿವಾಲಯದಲ್ಲಿ ಅನ್ನಸಂತರ್ಪಣೆ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಆ.21–ಶ್ರಾವಣ ಮಾಸದ ಪ್ರಯುಕ್ತ ನಗರದ ನಿಜಲಿಂಗಪ್ಪ ವೈದ್ಯಕೀಯ ಮಹವಿದ್ಯಾಲಯದ ಆವರಣದಲ್ಲಿರುವ ಶಿವಾಲಯದಲ್ಲಿ ಗುರುವಾರ ವಿಶೇಷ ಪೂಜೆ ಮತ್ತು ಅನ್ನ ಸಂತರ್ಪಣೆ ಜರುಗಿತು.

ಬೆಳಿಗ್ಗೆ ದೇವಾಲಯದಲ್ಲಿ ಅಭಿಷೇಕ, ವಿಶೇಷ ಪೂಜಾ ಕೈಂಕರ್ಯಗಳು ನಡೆದವು. ಬಿವಿವಿ ಸಂಘದ ಕಾರ್ಯಾಧ್ಯಕ್ಷ ವೀರಣ್ಣ ಚರಂತಿಮಠ ದೇವಾಲಯಕ್ಕೆ ಆಗಮಿಸಿ ದರ್ಶನ ಪಡೆದು ಈಶ್ವರ ದೇವರು ಎಲ್ಲರಿಗೂ ಸನ್ಮಂಗಳವುಂಟು ಮಾಡಲಿ ಎಂದು ಕೋರಿದರು.

ನಗರ ಹಾಗೂ ಗ್ರಾಮೀಣ ಪ್ರದೇಶದಿಂದ ಭಕ್ತರು ಆಗಮಿಸಿ ದೇವರ ದರ್ಶನ ಪಡೆದು ಅನ್ನ ಪ್ರಸಾದ ಸ್ವೀಕರಿಸಿದರು. ಬಿ.ವಿ.ವಿ ಸಂಘದ ಗೌರವ ಕಾರ್ಯದರ್ಶಿ ಮಹೇಶ ಅಥಣಿ, ವೈದ್ಯಕೀಯ ಆಡಳಿತ ಮಂಡಳಿ ಕಾರ್ಯಾಧ್ಯಕ್ಷ ಅಶೋಕ ಸಜ್ಜನ, ಹಾಸ್ಟೆಲ್ ಕಮಿಟಿ ಕಾರ್ಯಾಧ್ಯಕ್ಷ ಕುಮಾರಸ್ವಾಮಿ ಹಿರೇಮಠ, ಕಟ್ಟಡ ಸಮಿತಿ ಕಾರ್ಯಾಧ್ಯಕ್ಷ ಮಹೇಶ ಕಕರಡ್ಡಿ, ಬಿ.ವಿ.ವಿ ಸಂಘದ ಸದಸ್ಯರು, ಮೆಡಿಕಲ್ ಕಾಲೇಜಿನ ಪ್ರಾಚಾರ್ಯೆ ಡಾ.ಭುವನೇಶ್ವರಿ ಯಳಮಲಿ, ಡೆಂಟಲ್ ಕಾಲೇಜ್ ಪ್ರಾಚಾರ್ಯ ಡಾ.ಶ್ರೀನಿವಾಸ ವನಕಿ, ನರ್ಸಿಂಗ್ ಕಾಲೇಜ್ ಪ್ರಾಚಾರ್ಯ ಡಾ.ದಿಲೀಪ್ ನಾಟೆಕರ್, ವೈದ್ಯಕೀಯ ಅಧೀಕ್ಷಕ ಡಾ.ಶ್ರೀರಾಮ ಕೋರಾ, ಡೆಂಟಲ್ ಆಸ್ಪತ್ರೆ ಆಡಳಿತಾಧಿಕಾರಿ ಡಾ.ಕಾಶಿನಾಥ ಅರಬ್ಬಿ ಮತ್ತು ಎಲ್ಲ ಆರೋಗ್ಯ ವಿಜ್ಞಾನ ಸಂಸ್ಥೆಗಳ ಬೋಧಕ ಮತ್ತು ಬೋಧಕೇತರ ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ಪಾಲ್ಗೊಂಡು ಪ್ರಸಾದ ಸ್ವೀಕರಿಸಿದರು.

# ಗ್ರಾಮೀಣ ಪ್ರತಿಭೆಗಳ ಪ್ರೋತ್ಸಾಹಕ ಕ್ರೀಡಾಕೂಟ



ಮಲ್ಲಮ್ಮ ನುಡಿವಾರ್ತೆ

ಕೊಪ್ಪಳ : ಕುಕನೂರು ತಾಲೂಕಿನ ಬೇಣಕಲ್ ಗ್ರಾಮದ ನೃಪತುಂಗ ಪ್ರೌಢಶಾಲೆ ಮತ್ತು ಸರ್ಕಾರಿ ಪ್ರಾಥಮಿಕ ಶಾಲೆಗಳ ಇವರ ಸಹಯೋಗದಲ್ಲಿ ಎರಡು ದಿನಗಳ ವಲಯ ಮಟ್ಟದ ಪ್ರೌಢ ಶಾಲೆ ಮತ್ತು ಗ್ರಾಮೀಣ ಮಟ್ಟದ ಪ್ರಾಥಮಿಕ ಶಾಲೆಗಳ ಕ್ರೀಡಾಕೂಟ ಗುರುವಾರ ಪ್ರಾರಂಭವಾಯಿತು.

ಕ್ರೀಡಾಕೂಟದಲ್ಲಿ ತಳಕಲ್ ವಲಯ ಮತ್ತು ಕುಕನೂರು ಗ್ರಾಮೀಣ ಮತ್ತು ಬಿನ್ನಾಳ್ ಕ್ಲಸ್ಟರ್ ಮಟ್ಟದ ಶಾಲೆಯ ಕ್ರೀಡಾಪಟಗಳು ಕೂಟದಲ್ಲಿ ಭಾಗವಹಿಸಿದ್ದರು.

ಉದ್ಘಾಟನೆ ಕಾರ್ಯಕ್ರಮದಲ್ಲಿ ತಾಲೂಕು ದೈಹಿಕ ಶಿಕ್ಷಣಾ ಧಿಕಾರಿ ವೀರಭದ್ರಪ್ಪ ಅಂಗಡಿ, ಗ್ರಾಂ ಪಂ ಅಧ್ಯಕ್ಷೆ ಲಕ್ಷ್ಮವ್ವ ನಡುಲಮನಿ, ಉಪಾಧ್ಯಕ್ಷೆ ವಿದ್ಯಾ ತಳವಾರ್, ಸದಸ್ಯ ಮಲ್ಲಪ್ಪ ಬಳಗೇರಿ. ಮುದುಕಣ್ಣ ವಜ್ರಬಂಡಿ, ಎಸ್ ಡಿ ಎಂ ಸಿ ಅಧ್ಯಕ್ಷರು, ಸದಸ್ಯರು, ಶಿಕ್ಷಕ ವೃಂದ, ಇತರರು ಉಪಸ್ಥಿತರಿದ್ದರು.

# ವಚನ ದಾರಿಯಲ್ಲಿ ಅರಿವನ ಬೆಳಕು ಪ್ರವಚನ, ಮನೆಗೊಂದು ಬಸವಜ್ಯೋತಿ ಸಮಾರೋಪ ಕಾರ್ಯಕ್ರಮ



ಮಲ್ಲಮ್ಮ ನುಡಿ ವಾರ್ತೆ

ಕಮಲನಗರ:ತಾಲೂಕಿನ ನಿಡೋದಾ ಗ್ರಾಮದ ಬಸವ ಮಂಟಪದಲ್ಲಿ ರಾಷ್ಟ್ರೀಯ ಬಸವ ದಳ ಹಾಗೂ ಅನುಭವ ಮಂಟಪ, ಬಸವಕಲ್ಯಾಣ ಸಹಯೋಗದಲ್ಲಿ ಶ್ರಾವಣ ಮಾಸದ ನಿಮಿತ್ತ ಆಗಸ್ಟ್ 22 ರಂದು ವಚನ ದಾರಿಯಲ್ಲಿ ಅರಿವನ ಬೆಳಕು ಮನೆಗೊಂದು ಬಸವ ಜ್ಯೋತಿ ಕಾರ್ಯಕ್ರಮ ಶ್ರಾವಣ ಪ್ರವಚನ ಸಮಾರೋಪ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.

ಕೊಡಲಸಂಗಮ ಬಸವ ಪೀಠದ ದ್ವಿತೀಯ ಮಹಿಳಾ ಜಗದ್ಗುರು ನಿರಂಜನ ಮಹಾ ಜಗದ್ಗುರು ಮಾತೆ ಗಂಗಾದೇವಿ ಮತ್ತು ನಾಡೋಜ ಡಾ. ಬಸವಲಿಂಗ ಪಟ್ಟದ್ದೇವರು ದಿವ್ಯಸಾನಿಧ್ಯದಲ್ಲಿ ಬೆಳಿಗ್ಗೆ 10:30 ಗಂಟೆಗೆ ಇಷ್ಟಲಿಂಗ ದೀಕ್ಷೆ ಮತ್ತು ಮನೆಗೊಂದು ಬಸವ ಜ್ಯೋತಿ ಕಾರ್ಯಕ್ರಮದ ಕುರಿತ ಪ್ರವಚನ ಮುಕ್ತಾಯ ಸಮಾರಂಭ ಜರುಗಲಿದೆ.

ಭಾಲ್ಕಿ ಡಿವೈಎಸ್‌ಪಿ ಶಿವಾನಂದ ಪವಾಡಶೇಟ್ಟಿ ಉದ್ಘಾಟಿಸಲಿದ್ದು, ಔರಾದ್ ತಾಪಂ ಸಹಾಯಖ ನಿರ್ದೇಶಕ ಶಿವಕುಮಾರ ಘಾಟೆ ಧ್ವಜಾರೋಹಣ ನೆರವರಿಸಲಿದ್ದಾರೆ.

ಈ ಸಂದರ್ಭದಲ್ಲಿ ಪ್ರವಚನಕಾರರು ಶಿಕ್ಷಕಿ ಸುರೇಖಾ ಹಾಗೂ ಶಿಕ್ಷಕ ಶಿವಶರಣಪ್ಪ ವಲ್ಲೆಪುರೆ ದಂಪತಿಗಳು, ಬಸವ ಬಳಗ ಜಿಲ್ಲಾಧ್ಯಕ್ಷ ಸಂಜುಕುಮಾರ ಜುಮ್ಮಾ, ಯಾದಗಿರಿ ಜಿಲ್ಲಾ ವೈದ್ಯಾಧಿಕಾರಿ ಡಾ. ಮಹೇಶ ಬಿರಾದರ, ನಿವೃತ್ತ ಶಿಕ್ಷಕ ರಘುನಾಥರಾವ ರೋಟ್ಟೆ ಪಾಲ್ಗೊಳ್ಳಲಿದ್ದಾರೆ.

# ಗೊಬ್ಬರಕ್ಕಾಗಿ ಗೋಳಾಡುತ್ತಿರುವ ರೈತ ಗೊಬ್ಬರ ಸಿಗದೇ ಪರದಾಟ



ಮಲ್ಲಮ್ಮ ನುಡಿವಾರ್ತೆ

ಕೊಪ್ಪಳ : ತಾಲೂಕಿನ ಇರಕಲ್ ಗಡ ಗ್ರಾಮದಲ್ಲಿ ಗೊಬ್ಬರಕ್ಕಾಗಿ ರೈತರ ಗೋಳಾಟ ಜಿಲ್ಲೆಯ ಬಹುತೇಕ ಕಡೆ ಗೊಬ್ಬರದ ಕೊರತೆ ಎದುರಾಗಿದ್ದು ಆಗ್ರೋ ಕೇಂದ್ರಗಳಿಗೆ ಸಾಗಿಸುವ ರಸಗೊಬ್ಬರ ರೋಡ್ ರಸ್ತೆ ಮಧ್ಯದಲ್ಲಿ ಟ್ರ್ಯಾಕ್ಟರ್ ಮತ್ತು ಲಾರಿಗಳಲ್ಲಿ ಅನಧಿಕೃತವಾಗಿ ಗೊಬ್ಬರವನ್ನು ಇಳಿಸಲಾಗುತ್ತಿದೆ ಎನ್ನುವ ಆರೋಪಗಳು ಕೇಳುತ್ತಿವೆ ಜಿಲ್ಲೆಯಲ್ಲಿ ಎಲ್ಲಿ ನೋಡಿದರೂ ರಸಗೊಬ್ಬರ ಕೊರತೆ ಎದುರಾಗಿದೆ ಬಿತ್ತನೆ ಮಾಡಿದ ರೈತರು ಗೊಬ್ಬರಕ್ಕಾಗಿ ಅಲೆದಾಡುತ್ತಿದ್ದಾನೆ ಆದರೆ ಗೊಬ್ಬರ ಮಾತ್ರ ರೈತನ ಕೈಗೆ ಎಟುಕುತ್ತಿಲ್ಲ ಅಗತ್ಯಕ್ಕೆ ತಕ್ಕಂತೆ ರಸಗೊಬ್ಬರ ರೈತನಿಗೆ ಸಿಗದೆ ಆಕ್ರೋಶ ವ್ಯಕ್ತಪಡಿಸುತ್ತಿದ್ದಾನೆ ಇದಕ್ಕೆ ನಿರ್ದರ್ಶನ ಎನ್ನುವಂತೆ ಗಂಗಾವತಿ ವಿಧಾನಸಭಾ ಕ್ಷೇತ್ರದ ಇರಕಲಗಡ ಜಿಲ್ಲಾ ಪಂಚಾಯತ್ ಸರ್ಕಲ್ ನಲ್ಲಿ ಸುಮಾರು ಹಳ್ಳಿಗಳು ವ್ಯಾಪ್ತಿಗೆ ಒಳಪಡುತ್ತವೆ ಸಾವಿರಾರು ರೈತರನ್ನು ಹೊಂದಿರುವ ಮತ್ತು ಕೃಷಿಯನ್ನೇ ಮೂಲ ಕಸುಬನಾಗಿ ಮಾಡಿಕೊಂಡಿರುವ ಇಲ್ಲಿನ ರೈತರಿಗೆ ಸುಮಾರು ದಿನಗಳಿಂದ ಸಮಯಕ್ಕೆ ಸರಿಯಾಗಿ ರಸಗೊಬ್ಬರ ದೊರೆಯುತ್ತಿಲ್ಲ ಇದಕ್ಕೆ ಇಲ್ಲಿನ ಅಧಿಕಾರಿಗಳು ಕ್ಯಾರೆ ಎನ್ನುತ್ತಿಲ್ಲ ವರದಿಗಾರರ ಜೊತೆ ಮಾತನಾಡಿದ ಬಿಜೆಪಿ ಮುಖಂಡ ಗಂಗಾಧರ ಸ್ವಾಮಿ ಹಿರೇಮಠ ಜಿಲ್ಲೆಯಲ್ಲಿ ಈಗಾಗಲೇ ಮುಂಗಾರು ಆರಂಭವಾಗಿದ್ದು ಬಿತ್ತನೆ ಮಾಡಿದ ರೈತನಿಗೆ ಸರಿಯಾದ ಸಮಯಕ್ಕೆ ಗೊಬ್ಬರ ಸಿಗಲಿಲ್ಲವೆಂದರೆ ಮಾಡಿದ ಕೃಷಿಯಲ್ಲ ವ್ಯರ್ಥವಾಗುತ್ತದೆ ರೈತ ಭೂಮಿ ಹದ ಮಾಡಿ ಈ ವರ್ಷ ಮಳೆ ಚೆನ್ನಾಗಿ ಆಗಿರುವುದರಿಂದ ಫಸಲನ್ನು ನಂಬಿ ಬಿತ್ತನೆ ಮಾಡಿದ್ದಾನೆ ಗೊಬ್ಬರ ಸಿಗದಿದ್ದರೆ ಮಾಡಿದ್ದೆಲ್ಲ ವ್ಯರ್ಥವಾಗುತ್ತದೆ ಮತ್ತು ಜಿಲ್ಲೆಯಲ್ಲಿ ರೈತರಿಗೆ ರಸಗೊಬ್ಬರ ಗೋಳಾಟ ತಪ್ಪುತಿಲ್ಲ ನಿತ್ಯ ರಸಗೊಬ್ಬರಕ್ಕೆ ಅಲೆಯುವಾದೆ ಒಂದು ಕಾಯಕವಾಗಿದೆ ಸರ್ಕಾರ ಮತ್ತು ಅಧಿಕಾರಿಗಳು ಈಗಲಾದರೂ ಎಚ್ಚೆತ್ತುಕೊಂಡು ಈ ಭಾಗದ ರೈತರಿಗೆ ಗೊಬ್ಬರದ ತೊಂದರೆಯಾಗದಂತೆ ಎಚ್ಚರ ವಹಿಸಬೇಕಾಗಿ ಆಕ್ರೋಶ ವ್ಯಕ್ತಪಡಿಸಿದರು.

# ಕೃಷ್ಣ ಹಾಗೂ ಭೀಮಾ ನದಿಗಳ ಪ್ರವಾಹ ಪರಿಸ್ಥಿತಿ ನಿಭಾಯಿಸಲು ಸಕಲ ಕ್ರಮ ಕೈಗೊಳ್ಳಿ: ಜಿಲ್ಲಾಧಿಕಾರಿ ಹರ್ಷಲ್ ಭೋಯರ್



ಯಾದಗಿರಿ:ಆ:20: ಕೃಷ್ಣ ಹಾಗೂ ಭೀಮಾ ನದಿ ತೀರದ ವ್ಯಾಪ್ತಿಯಲ್ಲಿ ಪ್ರವಾಹ ಪರಿಸ್ಥಿತಿ ನಿರ್ವಹಿಸಲು ಜಿಲ್ಲಾಡಳಿತ

ಸರ್ವ ರೀತಿಯಲ್ಲೂ ಸನ್ನದ್ಧಗೊಂಡಿದೆ ಎಂದು ಜಿಲ್ಲಾಧಿಕಾರಿ ಶ್ರೀ ಹರ್ಷಲ್ ಭೋಯರ್ ಅವರು ತಿಳಿಸಿದರು.

ಕೆಸ್ವಾನ್ ಮೂಲಕ ಇಂದು ವಿವಿಧ ಇಲಾಖೆಗಳ ಅಧಿಕಾರಿಗಳೊಂದಿಗೆ ಜಿಲ್ಲಾ ಮಟ್ಟದ ವಿಪತ್ತು ನಿರ್ವಹಣಾ ಪ್ರಾಧಿಕಾರ ಸಭೆ ನಡೆಸಿದ ಅವರು ಈ ನದಿಗಳ ಪಾತ್ರದ ಜನರಲ್ಲಿ ಪ್ರವಾಹದ ಸಂದರ್ಭದಲ್ಲಿ ಕೈಗೊಳ್ಳಬೇಕಾದ ಮುನ್ನೆಚ್ಚರಿಕೆಗಳ ಬಗ್ಗೆ ಸೂಕ್ತ ಜಾಗೃತಿ ಮೂಡಿಸಬೇಕು ಎಂದು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು.

ಜಿಲ್ಲಾಧಿಕಾರಿಗಳ ಕಾರ್ಯಾಲಯ ಹಾಗೂ ತಾಲೂಕು ವ್ಯಾಪ್ತಿಯಲ್ಲಿ ಸಹಾಯವಾಣಿ ಸ್ಥಾಪಿಸಲಾಗಿದ್ದು, ನದಿ ಪಾತ್ರದ ಹಾಗೂ ಜಿಲ್ಲೆಯ ನಾಗರಿಕರಿಗೆ ಸಮಸ್ಯೆ ಬಂದಲ್ಲಿ ಸಂಪರ್ಕಿಸುವಂತೆ ಅವರು ಸೂಚಿಸಿದರು.

ಜಿಲ್ಲೆಯಲ್ಲಿ ಜಾನುವಾರುಗಳಿಗೆ ತೊಂದರೆಯಾಗದಂತೆ ನಿಗಾವಹಿಸಬೇಕು. ಪ್ರವಾಹ ಪರಿಸ್ಥಿತಿ ನಿಭಾಯಿಸಲು ಸಕಲ ಕ್ರಮಗಳನ್ನು ಕೈಗೊಳ್ಳುವಂತೆ ಅವರು ಅಧಿಕಾರಿಗಳಿಗೆ ಸೂಚನೆ ನೀಡಿ ಯಾವುದೇ ಸಂದರ್ಭದಲ್ಲಿ ಅನುಮತಿ ಇಲ್ಲದೆ ಕೇಂದ್ರ ಸ್ಥಾನ ಬಿಡದಿರಲು ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

ಕೃಷ್ಣಾ ಮತ್ತು ಭೀಮಾ ನದಿ ಪಾತ್ರದಲ್ಲಿ ಸೂಕ್ತ ಮುಂಜಾಗೃತಾ ಕ್ರಮ ಕೈಗೊಳ್ಳಲು ನೇಮಕ ಮಾಡಲಾದ ನೋಡಲ್ ಅಧಿಕಾರಿಗಳು ಕಡ್ಡಾಯವಾಗಿ ನಿಮಗೆ ವಹಿಸಲಾದ ಗ್ರಾಮಗಳಿಗೆ ಭೇಟಿ ನೀಡಿ ಸಾರ್ವಜನಿಕರಿಗೆ ಅರಿವು ಮೂಡಿಸಲು ಸೂಚಿಸಿದರು.

ಭಾರಿ ಮಳೆಯಿಂದ ಹಾನಿಯಾದ ಜಮೀನುಗಳಿಗೆ ಭೇಟಿ ನೀಡಿ ಜಂಟಿ ಸಮೀಕ್ಷೆ ವರದಿಯನ್ನು ಸಲ್ಲಿಸಲು ಕೃಷಿ, ತೋಟಗಾರಿಕೆ, ಕಂದಾಯ ಇಲಾಖೆ ಅಧಿಕಾರಿಗಳಿಗೆ ಸೂಚಿಸಿದರು.

ಜಿಲ್ಲೆಯಲ್ಲಿ ಸುರಿದ ಮಳೆಯಿಂದ ಹಾನಿಯಾಗಿರುವ ಮನೆಗಳ ಜಂಟಿ ಸಮೀಕ್ಷೆ ಕೈಗೊಂಡು ವರದಿ ಸಲ್ಲಿಸುವಂತೆ, ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸಿದರು.

ಪ್ರವಾಹ ಪರಿಸ್ಥಿತಿಯಲ್ಲಿ ಅಗತ್ಯ ಮುಂಜಾಗ್ರತೆ ಕ್ರಮವಹಿಸಲು ಅಗ್ನಿಶಾಮಕ ಇಲಾಖೆ ಅಧಿಕಾರಿ/ಸಿಬ್ಬಂದಿಗಳು ಸನ್ನದ್ದರಿದ್ದು, ಅವಶ್ಯವಿದ್ದಲ್ಲಿ ಅವರ ಸಹಾಯ ಪಡೆಯಲು ಸೂಚಿಸಿದರು.

ಪ್ರವಾಹ ಪರಿಸ್ಥಿತಿಯನ್ನು ಎದುರಿಸಲು ಜಿಲ್ಲಾಡಳಿತ ಸಂಪೂರ್ಣ ಸನ್ನದ್ದವಾಗಿದ್ದು, ಜನ ಜಾನುವಾರುಗಳಿಗೆ ಯಾವುದೇ ರೀತಿ ತೊಂದರೆಯಾಗದಂತೆ ಸೂಕ್ತ ರಕ್ಷಣೆ ನೀಡಲಾಗುವುದು ಎಂದು ತಿಳಿಸಿದರು.

ಎಲ್ಲಾ ಜಿಲ್ಲಾಮಟ್ಟದ ಹಾಗೂ ತಾಲ್ಲೂಕು ಮಟ್ಟದ ಅಧಿಕಾರಿಗಳು ರಜೆ ಮೇಲೆ ತೆರಳದಂತೆ ಹಾಗೂ ಕೇಂದ್ರಸ್ಥಾನ ಬಿಟ್ಟು ಹೋಗದಂತೆ ಸೂಚಿಸಿದರು.

ಮಳೆಯಿಂದ ಶಾಲಾ, ಕಾಲೇಜು, ಅಂಗನವಾಡಿ,

ಪ್ರಾಥಮಿಕ ಆರೋಗ್ಯ ಕೇಂದ್ರ, ವಿದ್ಯುತ್ ಸರಬರಾಜು ಕಡಿತ ಈ ಎಲ್ಲಾ ಅಂಶಗಳ ಕುರಿತು ಪರಿಶೀಲಿಸಿ ವರದಿ ಸಲ್ಲಿಸಲು ಸೂಚಿಸಿದರು. ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಲವೀಶ್ ಒರಡಿಯಾ, ಅಪರ ಜಿಲ್ಲಾಧಿಕಾರಿ ರಮೇಶ ಕೋಲಾರ ಇತರೆ ಅಧಿಕಾರಿಗಳು ಉಪಸ್ಥಿತರಿದ್ದರು.

# ಹಾವು ಕಡಿತದಿಂದ ಹಸು ಸಾವು



ಬೀದರ. ಆ. 21 : ಹಾವು ಕಡಿತದಿಂದ ಹಸು ಸಾವಿಗೀಡಾಗಿರುವ ಘಟನೆ ಬೀದರ್ ತಾಲೂಕಿನ ಯರನಳ್ಳಿ ಗ್ರಾಮದಲ್ಲಿ ನಡೆದಿದೆ.

ಶರಣಪ್ಪ ಗಣಪತಿ ಧೋಬಿ ಅವರಿಗೆ ಸೇರಿರುವ ಆಕಳು ಸೋಮವಾರ ಹೊಲದಲ್ಲಿ ಮೆಯ್ಯುತ್ತಿರುವಾಗ ಹಾವು ಕಡಿತದಿಂದ ಉಸಿರು ಚಲ್ಲಿದೆ. ಜನವಾಡ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿರುತ್ತದೆ.

ಹಸುವನ್ನು ಸಾಕಿ ಕೂಲಿ ನಾಲಿ ಮಾಡಿ ಬದುಕುತ್ತಿರುವ ಶರಣಪ್ಪ ಗಣಪತಿ ಧೋಬಿ ಅವರ ಜೀವನ ಈಗ ಕಷ್ಟಮಯವಾಗಿದ್ದು, ಅವರಿಗೆ ಸರ್ಕಾರದಿಂದ ಸೂಕ್ತ ಪರಿಹಾರ ನೀಡಬೇಕೆಂದು ಗ್ರಾಮಸ್ಥರು ಜಿಲ್ಲಾಡಳಿತಕ್ಕೆ ಒತ್ತಾಯಿಸಿದ್ದಾರೆ.

# ರೇಬಿಸ್ ರೋಗದ ಬಗ್ಗೆ ಜಾಗೃತಿ ವಹಿಸಿ




ಬೀದರ. ಆ. 21: ಸಾರ್ವಜನಿಕರು ರೇಬಿಸ್ ರೋಗದ ಬಗ್ಗೆ ಜಾಗೃತಿ ವಹಿಸಬೇಕು ಎಂದು ಮುಖ್ಯ ಪಶು ವೈದ್ಯಾಧಿಕಾರಿ ಡಾ. ಸಮುದ್ರ ಕುಲಕರ್ಣಿ ಸಲಹೆ ಮಾಡಿದರು.

ಬೀದರನ ಗ್ಲೋಬಲ್ ಸೈನಿಕ ಅಕಾಡೆಮಿಯಲ್ಲಿ ಈಚೆಗೆ ನಡೆದ ರೇಬಿಸ್ ರೋಗ ಜಾಗೃತಿ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಪ್ರಾಣಿಗಳಿಂದ ಮನುಷ್ಯರಿಗೆ ಹರಡುವ ರೇಬಿಸ್ ಮಾರಣಾಂತಿಕ ರೋಗವಾಗಿದೆ. ಸೋಂಕಿತ ಪ್ರಾಣಿ ಇನ್ನೊಂದು ಪ್ರಾಣಿ, ಮನುಷ್ಯನನ್ನು ಪರಚಿದಾಗ ಅಥವಾ ಕಚ್ಚಿದಾಗ ರೋಗ ಹರಡುತ್ತದೆ. ರೋಗ ಪೀಡಿತ ಪ್ರಾಣಿಯ ಜೊಲ್ಲು ಪ್ರಾಣಿ ಅಥವಾ ಮನುಷ್ಯನ ಲೋಳೆ ಪೊರೆ ಸಂಪರ್ಕಕ್ಕೆ ಬಂದಾಗ ರೋಗ ವರ್ಗಾವಣೆ ಆಗುತ್ತದೆ ಎಂದು ತಿಳಿಸಿದರು.

ರೋಗ ತಗಲುವಿಕೆ ಹಾಗೂ ಲಕ್ಷಣ ಗೋಚರಿಸಲು ಮೂರು ತಿಂಗಳು ಹಿಡಿಯಲಿದೆ. ಜ್ವರ, ತಲೆ ನೋವು, ವಾಕರಿಕೆ, ಅತಿಯಾಗಿ ಜೊಲ್ಲು ಸೋರುವುದು, ನುಂಗಲು ಕಷ್ಟವಾಗುವುದು, ನೀರು ಕಂಡರೆ ಭಯ ಉಂಟಾಗುವುದು ರೋಗದ ಲಕ್ಷಣಗಳಾಗಿವೆ. ಪ್ರಾಣಿಗಳು ಕಚ್ಚಿದರೆ ಮಕ್ಕಳು ಹಿರಿಯರ ಗಮನಕ್ಕೆ ತರಬೇಕು ಎಂದು ಹೇಳಿದರು.

ರೇಬಿಸ್ ರೋಗಕ್ಕೆ ನಿಖರ ಚಿಕಿತ್ಸೆ ಇಲ್ಲ. ಹೀಗಾಗಿ ಸಾರ್ವಜನಿಕರು ರೇಬಿಸ್ ಶಂಕಿತ ಪ್ರಾಣಿ ಕಚ್ಚಿದರೆ 0, 3, 7, 14 ಹಾಗೂ 28ನೇ ದಿನ ರೇಬಿಸ್ ನಿರೋಧಕ ಚುಚ್ಚು ಮದ್ದು ತೆಗೆದುಕೊಳ್ಳಬೇಕು. 90 ದಿನಗಳ ಒಳಗೆ ಕೂಡ ಒಂದು ಚುಚ್ಚು ಮದ್ದು ಪಡೆಯಬೇಕು. ಜತೆಗೆ ಕಡ್ಡಾಯವಾಗಿ ಟೆಟ್ನಸ್ ಟಾ-ಕ್ಸೈಡ್ ಇಂಜಕ್ಷನ್ ತೆಗೆದುಕೊಳ್ಳಬೇಕು ಎಂದು ತಿಳಿಸಿದರು.

ಬೀದಿ ನಾಯಿಗಳ ನಿಯಂತ್ರಣಕ್ಕೆ ಪ್ರಾಣಿ ಸಂತಾನ ನಿಯಂತ್ರಣ ಕಾಯ್ದೆ 2023 ಅನ್ನು ಅನುಸರಿಸಬೇಕು ಎಂದು ಹೇಳಿದರು.

ಅಕಾಡೆಮಿ ಅಧ್ಯಕ್ಷ, ನಿವೃತ್ತ ಕರ್ನಲ್ ಶರಣಪ್ಪ ಸಿಕೇನಪುರ, ಪ್ರಾಚಾರ್ಯ ಸಮೋದ್ ಮೋಹನನ್ ಉಪಸ್ಥಿತರಿದ್ದರು. 5 ರಿಂದ 10ನೇ ತರಗತಿ ವರೆಗಿನ ವಿದ್ಯಾರ್ಥಿಗಳು, ಬೋಧಕ ಹಾಗೂ ಬೋಧಕೇತರ ಸಿಬ್ಬಂದಿ ಪಾಲ್ಗೊಂಡಿದ್ದರು.

# ಮೂರು ದಿನಗಳ ತರಬೇತಿ ಕಾರ್ಯಾಗಾರಕ್ಕೆ ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ ಚಾಲನೆ



ಬೀದರ, ಅ 21: ಬೀದರ ಜಿಲ್ಲೆಯ 196 ಗ್ರಾಮಗಳ ಪರಿಶಿಷ್ಟ ಪಂಗಡದ ಬುಡಕಟ್ಟು ಜನಾಂಗದವರಿಗೆ ಕುಡಿಯುವ ನೀರು, ರಸ್ತೆ, ಇತರೆ ಮೂಲಭೂತ ಸೌಕರ್ಯಗಳು ಜನರಿಗೆ ಮುಟ್ಟುವಂತೆ ಜಿಲ್ಲಾ ಮಟ್ಟದ ಟ್ರೈನರ್ ರವರಿಂದ ತಾಲೂಕಾ ಮಟ್ಟದ ಟ್ರೈನರ್ ರವರು ತರಬೇತಿ ಪಡೆದು ಸದರಿಯವರು ಗ್ರಾಮಗಳ ಹಂತದಲ್ಲಿ ಗ್ರಾಮ ವರ್ಕಶಾಪ್‌ಗಳನ್ನು ನಡೆಸಿ ಪ್ರತಿಯೊಂದು ಗ್ರಾಮದ ಜನರಿಗೆ ಮೂಲಭೂತ ಸೌಕರ್ಯಗಳ ಕುರಿತು ಅರಿವು ಮೂಡಿಸಲು ಎಲ್ಲಾ ಅನುಷ್ಠಾನ ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ ತಿಳಿಸಿದರು.

ಅವರು ಇತ್ತೀಚಿಗೆ ಜಿಲ್ಲಾ ಮಟ್ಟದಲ್ಲಿ ಆದಿ ಕರ್ಮಯೋಗಿ ಅಭಿಯಾನ ಕುರಿತು ಬಿ.ಎಂ.ಟಿ. ತಾಲೂಕಾ ಮಟ್ಟದ ಮಾಸ್ಟರ್ ಟ್ರೈನರ್‌ಗಳಿಗೆ ಜಿಲ್ಲಾ ಸಂಪನ್ಮೂಲ ಕೇಂದ್ರ ಮೈಲೂರ ಬೀದರನಲ್ಲಿ ಆಯೋಜಿಸಲಾಗಿದ್ದ 3 ದಿನಗಳ (ಆ.20 ರಿಂದ ಆ.22 ರವರೆಗೆ) ತರಬೇತಿ ಕಾರ್ಯಗಾರವನ್ನು ಉದ್ಘಾಟಿಸಿ ಮಾತನಾಡಿದರು.

ಬೀದರ ಜಿಲ್ಲಾ ಪಂಚಾಯತ ಮುಖ್ಯಕಾರ್ಯನಿರ್ವಾಹಕ ಅಧಿಕಾರಿ ಡಾ.ಗಿರೀಶ್ ಬದೋಲೆ ಅವರು ಮಾತನಾಡಿದರು.

ಈ ಕಾರ್ಯಗಾರದಲ್ಲಿ ಸಂಬಂಧಪಟ್ಟ ಏಳು ಇಲಾಖೆಯ ಅನುಷ್ಠಾನ ಅಧಿಕಾರಿಗಳು, ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿಗಳು ಮತ್ತು ಸಿಬ್ಬಂದಿಗಳು ಸೇರಿದಂತೆ ಇತರರು ಉಪಸ್ಥಿತರಿದ್ದರು.

# ರೈತರ ಹಬ್ಬ ಹೋಳ್ವಕ್ಕೆ ಭರದ ಸಿದ್ಧತೆ



ಮಲ್ಲಮ್ಮ ನುಡಿ ವಾರ್ತೆ

ಕಮಲನಗರ:ಅ.21: ರೈತರಹಬ್ಬ ಹೋಳ್ವಕ್ಕೆ ಭರದ ಸಿದ್ಧತೆಗಾಗಿ ರೈತರು ಎತ್ತುಗಳು ಮತ್ತು ಎಮ್ಮೆಗಳ ಶೃಂಗಾರ ವಸ್ತುಗಳನ್ನು ಖರೆದಿಯಲ್ಲಿ ತೊಡಗಿರುವ ದೃಶ್ಯ ಪಟ್ಟಣದಲ್ಲಿ ಗುರುವಾರ ಕಂಡು ಬಂತು. ಹೋಳ್ಳ ಅಮಾವಾಸ್ಯೆ ರೈತರು ಸಂಭ್ರಮ ಪಡುವ ಹಬ್ಬವಾಗಿದೆ, ಈ ಹಬ್ಬದ ಪ್ರಯುಕ್ತ ರೈತರು ವರ್ಷವಿಡಿ ತನ್ನ ಹೊಲದಲ್ಲಿ ದುಡಿದಿರುವ ಎತ್ತುಗಳಿಗೆ ಧನ್ಯವಾದ ಹೇಳುವ ಹಬ್ಬ, ನಿಮಿತ್ಯ ಎತ್ತುಗಳನ್ನು ಸಿಂಗಾರಮಾಡಿಸಿ, ಹೊಸ ಮೊರಾಕಿ, ಘಂಟೆ, ಮುಗದಾರ, ಒನ್ ಬಣ್ಣ, ಕಲರ್, ದಂಡಿ, ಹೀಗೆ ಇನ್ನಿತರ ಅಲಂಕರಿಸುವ ವಸ್ತುಗಳಿಂದ ಅವುಗಳನ್ನು ಅಲಂಕರಿಸಿ ಗ್ರಾಮದ ಹನುಮಾನ ದೇವಾಲಯಕ್ಕೆ ಪ್ರದರ್ಶನ ಹಾಕಿ ಮನೆಗೆ ತಂದು ಪೂಜೆ ಮಾಡಿ ಪರಿವಾರ ಬಂದು ಬಳಗದವರಿಗೆ ರುಚಿಯಾದ ಊಟ ಸವಿದು ಸಂಭ್ರಮದಿಂದ ಆಚರಿಸುವ ಹಬ್ಬವೆ ಹೋಳ್ವಹಬ್ಬ. ಈ ವರ್ಷ ಉತ್ತಮ ಬೆಳೆ ಇದ್ದ ಕಾರಣ ರೈತರು, ಒಳ್ಳೆಯ ಪ್ರಕ್ರಿಯೆ ನೀಡುತ್ತಿದ್ದಾರೆ, ರೈತರಿಗಾಗಿ ಅಂಗಡಿ ಹಾಕಿ ರೈತರಿಗೂ ಸಹಾಯವಾಗುತ್ತಿದೆ ಹಾಗೂ ನಮಗೂ ಬಂಡವಾಳಕ್ಕೆ ನಷ್ಟ ಇಲ್ಲದಂತೆ ಉತ್ತಮ ಲಾಭವಾಗುತ್ತಿದೆ ಎಂದು ಅಂಗಡಿ ಮಾಲಕ ಅವಿನಾಶ ಶಿಂದೆ ಹೇಳಿದರು.

# ಇ-ಚಲನ್‌ನಲ್ಲಿ ದಾಖಲಾಗಿರುವ ಬಾಕಿ ಪ್ರಕರಣಗಳ ದಂಡದ ಮೊತ್ತದಲ್ಲಿ ಶೇಕಡಾ 50 ರಷ್ಟು ರಿಯಾಯಿತಿ ನೀಡಿ ಸರ್ಕಾರ ಆದೇಶ

ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು, ಆ. 21: ಪೊಲೀಸ್ ಇಲಾಖೆಯಲ್ಲಿ ಸಂಚಾರಿ ಇ-ಚಲನ್‌ನಲ್ಲಿ ದಾಖಲಾದ ಪ್ರಕರಣಗಳಿಗೆ ಮಾತ್ರ ಅನ್ವಯವಾಗುವಂತೆ, ಪೊಲೀಸ್ ಇಲಾಖೆಯ ಸಂಚಾರಿ ಇ-ಚಲನ್‌ನಲ್ಲಿ ದಾಖಲಾಗಿರುವ ಬಾಕಿ ಪ್ರಕರಣಗಳ ದಂಡದ ಮೊತ್ತದಲ್ಲಿ ಶೇಕಡಾ 50 ರಷ್ಟು (ಐವತ್ತರಷ್ಟು ಮಾತ್ರ) ರಿಯಾಯಿತಿ ನೀಡಿ ಸರ್ಕಾರವು 2025ನೇ ಆಗಸ್ಟ್ 21 ರಂದು ಆದೇಶ ಹೊರಡಿಸಿದೆ. ಈ ರಿಯಾಯಿತಿಯು 2025ನೇ ಆಗಸ್ಟ್ 23 ರಿಂದ ಸೆಪ್ಟೆಂಬರ್ 12 ರವರೆಗೆ ಇತ್ಯರ್ಥಗೊಳ್ಳುವ ಪ್ರಕರಣಗಳಿಗೆ ಮಾತ್ರ ಅನ್ವಯವಾಗುತ್ತದೆ. ಸರ್ಕಾರದ ಆದೇಶದ ದಿನಾಂಕ:11.02.2023ರ ಒಳಗಾಗಿ ಇತ್ಯರ್ಥಗೊಳ್ಳುವ ಪ್ರಕರಣಗಳಿಗೆ ಮಾತ್ರ ಅನ್ವಯವಾಗುವಂತೆ ಒಂದು ಬಾರಿಯ ಕ್ರಮವಾಗಿ (ಂಟಜ ಣಟಜ ಟಜಭೆಣಡಿಜ) ಮಾತ್ರ ಪೊಲೀಸ್ ಇಲಾಖೆಯ ಸಂಚಾರಿ ಇ-ಚಲನ್‌ನಲ್ಲಿ ದಾಖಲಾಗಿರುವ ಬಾಕಿ ಪ್ರಕರಣಗಳ ದಂಡದ ಮೊತ್ತದಲ್ಲಿ ಶೇಕಡಾ 50 ರಷ್ಟು ರಿಯಾಯಿತಿ ನೀಡಿ ಆದೇಶಿಸಲಾಗಿತ್ತು.

ಸರ್ಕಾರದ ದಿನಾಂಕ: 03-03-2023ರ ಆದೇಶದಲ್ಲಿ ಪೊಲೀಸ್ ಇಲಾಖೆಯಲ್ಲಿ ಸಂಚಾರಿ ಇ-ಚಲನ್‌ನಲ್ಲಿ ದಿನಾಂಕ:11.02.2023ರೊಳಗೆ ದಾಖಲಾದ ಪ್ರಕರಣಗಳಿಗೆ ಮಾತ್ರ ಅನ್ವಯವಾಗುವಂತೆ. ಪೊಲೀಸ್ ಇಲಾಖೆಯ ಸಂಚಾರಿ ಇ-ಚಲನ್‌ನಲ್ಲಿ ದಾಖಲಾಗಿರುವ ಬಾಕಿ ಪ್ರಕರಣಗಳ ದಂಡದ ಮೊತ್ತದಲ್ಲಿ ಮತ್ತೊಂದು ಬಾರಿಗೆ ಶೇಕಡಾ 50 ರಷ್ಟು ರಿಯಾಯಿತಿ ನೀಡಿ ಆದೇಶಿಸಲಾಗಿತ್ತು.

ಸರ್ಕಾರದ ದಿನಾಂಕ 05-07-2023 ರ ಆದೇಶದಲ್ಲಿ ಪೊಲೀಸ್ ಇಲಾಖೆಯಲ್ಲಿ ಸಂಚಾರಿ ಇ-ಚಲನ್‌ನಲ್ಲಿ ದಿನಾಂಕ:11.02.2023 ರೊಳಗೆ ದಾಖಲಾದ ಪ್ರಕರಣಗಳಿಗೆ ಮಾತ್ರ ಅನ್ವಯವಾಗುವಂತೆ, ಪೊಲೀಸ್ ಇಲಾಖೆಯ ಸಂಚಾರಿ ಇ-ಚಲನ್‌ನಲ್ಲಿ ದಾಖಲಾಗಿರುವ ಬಾಕಿ ಪ್ರಕರಣಗಳ ದಂಡದ ಮೊತ್ತದಲ್ಲಿ ಮತ್ತೊಂದು ಬಾರಿಗೆ ಶೇಕಡಾ 50 ರಷ್ಟು (ಐವತ್ತರಷ್ಟು ಮಾತ್ರ) ರಿಯಾಯಿತಿ ನೀಡಿ ಆದೇಶಿಸಲಾಗಿತ್ತು ಹಾಗೂ ಈ ರಿಯಾಯಿತಿಯು ದಿನಾಂಕ:09.09.2023 ರವರೆಗೆ ಇತ್ಯರ್ಥಗೊಳ್ಳುವ ಪ್ರಕರಣಗಳಿಗೆ ಮಾತ್ರ ಅನ್ವಯವಾಗುತ್ತದೆ ಎಂದು ತಿಳಿಸಲಾಗಿತ್ತು. ಕರ್ನಾಟಕರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳ ದಿನಾಂಕ 26-06-2025 ಮತ್ತು ದಿನಾಂಕ 12-08-2025 ಪತ್ರಗಳಲ್ಲಿ ಪೊಲೀಸ್ ಇಲಾಖೆಯ ಸಂಚಾರಿ ಇ-ಚಲನ್‌ನಲ್ಲಿ ದಾಖಲಾಗಿರುವ ಬಾಕಿ ಪ್ರಕರಣಗಳ ದಂಡದ ಮೊತ್ತದಲ್ಲಿ ಶೇ.50%ರಷ್ಟು ರಿಯಾಯಿತಿ ನೀಡಿ ಪ್ರಕರಣಗಳನ್ನು ಇತ್ಯರ್ಥಪಡಿಸಿಕೊಳ್ಳಲು ದಿನಾಂಕ:05.07.2025 ರಿಂದ 11.07.2025ರವರೆಗೆ ಕಾಲಾವಕಾಶವನ್ನು ಕಲ್ಪಿಸಿ ಆದೇಶ ಹೊರಡಿಸುವಂತೆ ಕೋರಲಾಗಿತ್ತು. ಮುಂದುವರೆದು ಸದರಿ ಅವಧಿಯು ಮುಕ್ತಾಯವಾಗಿರುವುದರಿಂದ ಸದರಿ ಕಾಲಾವಕಾಶವನ್ನು ದಿನಾಂಕ:23.08.2025 ರಿಂದ 12.09.2025ರವರೆಗೆ ಕಲ್ಪಿಸುವಂತೆ ಕೋರಿರುತ್ತಾರೆ.

ಬೆಂಗಳೂರು ಸಾರಿಗೆ ಮತ್ತು ರಸ್ತೆ ಸುರಕ್ಷತೆ ಆಯುಕ್ತರು ದಿನಾಂಕ 04-03-2025 ರ ಪ್ರಸ್ತಾವನೆಯಲ್ಲಿ ಪೊಲೀಸ್ ಇಲಾಖೆಯ ಸಂಚಾರಿ ಜ-ಳುಚಿಟಟಚಿಟಿಗಳಲ್ಲಿ ಶೇ.50%ರಷ್ಟು ರಿಯಾಯಿತಿ ನೀಡಿ ಪ್ರಕರಣಗಳನ್ನು ಇತ್ಯರ್ಥ ಪಡಿಸಿಕೊಳ್ಳಲು ಹಾಗೂ ಸಾರಿಗೆ ಇಲಾಖೆಯಲ್ಲಿ 2018-19ನೇ ಸಾಲಿನ ಪೂರ್ವದಲ್ಲಿ ದಾಖಲಾಗಿರುವ ಪ್ರಕರಣಗಳಲ್ಲಿ ವಾಹನ ಮಾಲೀಕರುಗಳಿಂದ ಶೇ.50% ರಷ್ಟು ರಿಯಾಯಿತಿ ನೀಡಿ ಪ್ರಕರಣಗಳನ್ನು ಇತ್ಯರ್ಥ ಪಡಿಸಿಕೊಳ್ಳಲು ಅವಕಾಶ ಕಲ್ಪಿಸುವಂತೆ ಕೋರಿರುತ್ತಾರೆ. ಸ'ದ' ರಿ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿದ ಸರ್ಕಾರವು ಈ ರಿಯಾಯಿತಿಯು 2025ನೇ ಆಗಸ್ಟ್ 23 ರಿಂದ ಸೆಪ್ಟೆಂಬರ್ 12 ರವರೆಗೆ ಇತ್ಯರ್ಥಗೊಳ್ಳುವ ಪ್ರಕರಣಗಳಿಗೆ ಮಾತ್ರ ಅನ್ವಯವಾಗುತ್ತದೆ ಎಂದು ಆದೇಶಿಸಲಾಗಿದೆ ಎಂದು ಸಾರಿಗೆ ಇಲಾಖೆಯ ಅಧೀನ ಕಾರ್ಯದರ್ಶಿಗಳು ತಿಳಿಸಿದ್ದಾರೆ.

# ಮತಗಳವು ಆರೋಪ : ಸುಪ್ರೀಂ ಕೋರ್ಟ್‌ಗೆ ಪಿಐಎಲ್ ಸಲ್ಲಿಕೆ



ನವದೆಹಲಿ:ಅ.21: ಬೆಂಗಳೂರು ಕೇಂದ್ರ ಸೇರಿದಂತೆ ದೇಶದ ವಿವಿಧ ಲೋಕಸಭಾ ಕ್ಷೇತ್ರಗಳಲ್ಲಿ 'ಮತಗಳ್ಳತನ' ನಡೆದಿದೆ ಎಂಬ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿಯವರ ಆರೋಪದ ಕುರಿತು ತನಿಖೆಗೆ ವಿಶೇಷ ತನಿಖಾ ತಂಡ ರಚಿಸುವಂತೆ ಕೋರಿ ಸುಪ್ರೀಂ ಕೋರ್ಟ್‌ಗೆ ಸಾರ್ವಜನಿಕ ಹಿತಾಸಕ್ತಿ ಅರ್ಜಿ ಸಲ್ಲಿಕೆಯಾಗಿದೆ. ಮತದಾರರ ಪಟ್ಟಿಯ ತಯಾರಿಕೆ, ನಿರ್ವಹಣೆ ಮತ್ತು ಪ್ರಕಟಣೆಯಲ್ಲಿ ಪಾರದರ್ಶಕತೆ, ಹೊಣೆಗಾರಿಕೆ ಮತ್ತು ಸಮಗ್ರತೆಯನ್ನು ಖಚಿತಪಡಿಸಿಕೊಳ್ಳಲು ಚೌಕಟ್ಟಿಗೆ ನಿರ್ದೇಶನಗಳನ್ನು ನೀಡುವಂತೆ ಮತ್ತು ನಕಲಿ ಅಥವಾ ಕಾಲ್ಪನಿಕ ನಮೂದುಗಳನ್ನು ಪತ್ತೆಹಚ್ಚುವ ಮತ್ತು ತಡೆಗಟ್ಟುವ ಕಾರ್ಯವಿಧಾನಗಳನ್ನು ಒಳಗೊಂಡಂತೆ ಭಾರತೀಯ ಚುನಾವಣಾ ಆಯೋಗಕ್ಕೆ ಮಾರ್ಗಸೂಚಿಗಳನ್ನು ಹೊರಡಿಸುವಂತೆ ಅರ್ಜಿಯಲ್ಲಿ ಕೋರಲಾಗಿದೆ. ಅಲ್ಲದೇ ಅರ್ಥಪೂರ್ಣ ಪರಿಶೀಲನೆ, ಲೆಕ್ಕಪರಿಶೋಧನೆ ಮತ್ತು ಸಾರ್ವಜನಿಕ ಪರಿಶೀಲನೆಗೆ ಅನುವು ಮಾಡಿಕೊಡಲು ಮತದಾರರ ಪಟ್ಟಿಯನ್ನು ಸುಲಭವಾಗಿ ಪ್ರವೇಶಿಸಬಹುದಾದ, ಮೆಷಿನ್ ರೀಡೇಬಲ್ ಮತ್ತು ಆಪ್ಟಿಕಲ್ ಕ್ಯಾರೆಕ್ಟರ್ ರಿಕಗ್ನಿಷನ್ ಕಂಪ್ಲೆಂಟ್ ಸ್ವರೂಪಗಳಲ್ಲಿ ಪ್ರಕಟಿಸಲು ಚುನಾವಣಾ ಆಯೋಗಕ್ಕೆ ನಿರ್ದೇಶನಗಳನ್ನು ನೀಡುವಂತೆ ಅರ್ಜಿಯಲ್ಲಿ ಮನವಿ ಮಾಡಲಾಗಿದೆ.

ಬೆಂಗಳೂರು ಕೇಂದ್ರ ಲೋಕಸಭಾ ಕ್ಷೇತ್ರ ವ್ಯಾಪಿಯ ಮಹದೇವಪುರ ವಿಧಾನಸಭಾ ಕ್ಷೇತ್ರದಲ್ಲಿ ಭಾರೀ ಮತಗಳ್ಳತನ ನಡೆದಿದೆ ಎಂದು ಆರೋಪಿಸಿ ಆಗಸ್ಟ್ 7ರಂದು ರಾಹುಲ್ ಗಾಂಧಿ ನಡೆಸಿದ ಪತ್ರಿಕಾಗೋಷ್ಠಿಯನ್ನು ಆಧರಿಸಿ ವಕೀಲ ರೋಹಿತ್ ಪಾಂಡೆ ಪಿಐಎಲ್ ಸಲ್ಲಿಸಿದ್ದಾರೆ.

# ಉಪ ಲೋಕಾಯುಕ್ತರಾದ ನ್ಯಾ.ಬಿ.ವೀರಪ್ಪ ಅವರಿಂದ ಆ. 28 ರಿಂದ ರಾಯಚೂರು ಜಿಲ್ಲಾ ಪ್ರವಾಸ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಆ 21: ಕರ್ನಾಟಕ ಉಪ ಲೋಕಾಯುಕ್ತರಾದ ನ್ಯಾ.ಬಿ.ವೀರಪ್ಪ ಅವರು ಆಗಸ್ಟ್ 28ರಿಂದ ಆಗಸ್ಟ್ 30ರವರೆಗೆ ರಾಯಚೂರು ಜಿಲ್ಲೆಯಲ್ಲಿ ಪ್ರವಾಸ ಕೈಗೊಂಡಿದ್ದಾರೆ. ಆಗಸ್ಟ್ 27ರ ಬೆಳಗ್ಗೆ 8.40ಕ್ಕೆ ಬೆಂಗಳೂರಿನ ಕೆಎಸ್‌ಆರ್ ರೈಲು ನಿಲ್ದಾಣದಿಂದ ಉದ್ಯಾನ ಎಕ್ಸಪ್ರೆಸ್ ರೈಲ ಮೂಲಕ ಹೊರಟು ಆಗಸ್ಟ್ 28ರ ಬೆಳಿಗ್ಗೆ 4.13ಕ್ಕೆ ರಾಯಚೂರು ನಗರಕ್ಕೆ ಆಗಮಿಸಿ ಕೃಷಿ ವಿಶ್ವವಿದ್ಯಾಲಯದ ಹೊಸ ಅತಿಥಿ ಗೃಹಕ್ಕೆ ತೆರಳುವರು. ಬಳಿಕ ಬೆಳಗ್ಗೆ 6.30ಕ್ಕೆ ಚಹಾ ಸೇವಿಸಿ ಕೆಲಕಡೆ ಭೇಟಿ ನೀಡುವರು. 9 ಗಂಟೆಗೆ ಉಪಹಾರ ಸೇವನೆ ಮಾಡುವರು. ಬಳಿಕ ಬೆಳಿಗ್ಗೆ 9.30 ರಿಂದ ಮಧ್ಯಾಹ್ನ 1.30ರವರೆಗೆ ನಗರದ ಕೆಲವೆಡೆ ಅನಿರಿಕ್ಷೀತ ಭೇಟಿ ನೀಡುವರು. ಮಧ್ಯಾಹ್ನ 1.30 ರಿಂದ 2.30ರವರೆಗೆ ಕೃಷಿ ವಿವಿ ಅತಿಥಿ ಗೃಹದಲ್ಲಿ ಊಟದ ವಿರಾಮ ಇರುತ್ತದೆ. ಊಟದ ವಿರಾಮದ ನಂತರ ಮಧ್ಯಾಹ್ನ 2.30 ರಿಂದ ನಾನಾ ಪ್ರದೇಶಗಳಿಗೆ ಅನಿರೀಕ್ಷಿತ ಭೇಟಿ ನೀಡುವರು. ರಾತ್ರಿ 8.30ಕ್ಕೆ ಕೃಷಿ ವಿವಿ ಅತಿಥಿ ಗೃಹದಲ್ಲಿ ಊಟ ಮತ್ತು ವಾಸ್ತವ್ಯ ಮಾಡುವರು. ಆಗಸ್ಟ್ 29ರ ಬೆಳಿಗ್ಗೆ 6.30ಕ್ಕೆ ಚಹಾ ವಿರಾಮದ ನಂತರ ವಿವಿಧ ಸ್ಥಳಗಳಿಗೆ ಭೇಟಿ ನೀಡುವರು. ಬಳಿಕ 9 ಗಂಟೆಗೆ ಉಪಹಾರ ಸೇವನೆ ಮಾಡುವರು. ಬಳಿಕ 10 ರಿಂದ ಮಧ್ಯಾಹ್ನ 1.30ಗಂಟೆವರೆಗೆ ನಗರದ ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯದ ಆವರಣದ ಜಗಜ್ಯೋತಿ ಬಸವೇಶ್ವರ ಸಭಾಂಗಣದಲ್ಲಿ ಸಾರ್ವಜನಿಕರ ಅಹವಾಲುಗಳನ್ನು ಸ್ವೀಕರಿಸುವರು. ಮಧ್ಯಾಹ್ನ 1.30 ರಿಂದ 2.30ರವರೆಗೆ ಕೃಷಿ ವಿವಿ ಅತಿಥಿ ಗೃಹದಲ್ಲಿ ಊಟದ ವಿರಾಮ ಇರುತ್ತದೆ. ಮಧ್ಯಾಹ್ನ 2.30ರಿಂದ 5 ಗಂಟೆವರೆಗೆ ನಗರದ ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯದ ಆವರಣದ ಜಗಜ್ಯೋತಿ ಬಸವೇಶ್ವರ ಸಭಾಂಗಣದಲ್ಲಿ ಸಾರ್ವಜನಿಕರ ಅಹವಾಲುಗಳನ್ನು ಸ್ವೀಕರಿಸುವರು. ಸಂಜೆ 5.30ರಿಂದ 6.30 ಗಂಟೆವರೆಗೆ ಕೃಷಿ ವಿಶ್ವವಿದ್ಯಾಲಯದ ಆವರಣದ ಜಗಜ್ಯೋತಿ ಬಸವೇಶ್ವರ ಸಭಾಂಗಣದಲ್ಲಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸಹಯೋಗದೊಂದಿಗೆ ಕರ್ನಾಟಕ ಲೋಕಾಯುಕ್ತ ಕಾಯ್ದೆಗೆ ಸಂಬಂಧಿಸಿದ ಕಾನೂನು ಸಾಕ್ಷರತಾ ಕಾರ್ಯಕ್ರಮದಲ್ಲಿ ಕಂದಾಯ ಇಲಾಖೆ, ಆರ್‌ಡಿಪಿಆರ್, ಶಿಕ್ಷಣ ಇಲಾಖೆ, ರೇಷ್ಮೆ ಇಲಾಖೆ, ಕೃಷಿ ಇಲಾಖೆ, ತೋಟಗಾರಿಕೆ ಇಲಾಖೆ, ಉಪನೋಂದಣಿ ಕಚೇರಿ, ಆರ್‌ಟಿಒ, ಬಿಇಒ ಸೇರಿದಂತೆ ಕರ್ನಾಟಕ ರಾಜ್ಯ ಕಾನೂನು ಸೇವಾ ಪ್ರಾಧಿಕಾರದ ಸಹಯೋಗದಲ್ಲಿ ನಡೆಯುವ ಕಾರ್ಯಕ್ರಮದಲ್ಲಿ ಭಾಗಿಯಾಗುವರು.

ರಾತ್ರಿ 8.30ಕ್ಕೆ ಕೃಷಿ ವಿವಿ ಅತಿಥಿ ಗೃಹದಲ್ಲಿ ಊಟ ಮತ್ತು ವಾಸ್ತವ್ಯ ಮಾಡುವರು. ಆಗಸ್ಟ್ 30ರಂದು ಬೆಳಿಗ್ಗೆ 6.30ಕ್ಕೆ ಚಹಾ ವಿರಾಮದ ನಂತರ ವಿವಿಧ ಸ್ಥಳಗಳಿಗೆ ಭೇಟಿ ನೀಡುವರು. ಬಳಿಕ 9 ಗಂಟೆಗೆ ಉಪಹಾರ ಸೇವನೆ ಮಾಡುವರು. ಬಳಿಕ ಬೆಳಿಗ್ಗೆ 9.30 ಗಂಟೆಯಿಂದ 10.45 ಗಂಟೆವರೆಗೆ ರಾಯಚೂರಿನ ಜಿಲ್ಲಾ ನ್ಯಾಯಾಲಯ ಸಂಕೀರ್ಣದಲ್ಲಿ ಜಿಲ್ಲೆಯ ನ್ಯಾಯಾಂಗ ಅಧಿಕಾರಿಗಳು, ಲೋಕಾಯುಕ್ತ ಪೊಲೀಸರೊಂದಿಗೆ ಹಮ್ಮಿಕೊಂಡ ಸಭೆಯಲ್ಲಿ ಭಾಗಿಯಾಗುವರು.

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.
Editor: Ramesh Reddy, Office Ph. No: +91 9449732000.